₹ 4 ಪುಟ: 4 ಸಂಪುಟ: 4 ಸಂಚಿಕೆ 49 newsbelagavi@gmail.com 9900332089 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 Issue: 49 Thursday, 06, APRIL, 2023 RNI: KARKAN/2020/79084 Regn,No:G-2/PMG/KA/NK/BM/139/2021-23 24



ರೆಬಲ್ ಸ್ಟಾರ್ ಅಂಬರೀಶ್ ಪುತ್ರ ಅಭಿಷೇಕ್ ಅಂಬರೀಶ್ ವಿವಾಹಕ್ಕೆ ಪ್ರಧಾನಿ ನರೇಂದ್ರ ಮೋದಿ ಯವರನ್ನು ಆಹ್ವಾನಿಸಿದ ಸಂಸದೆ ಸುಮಲತಾ ಅಂಬರೀಶ್.

## ಮಹಾರಾಷ್ಟ್ರಕ್ಕೆ ಸಿಎಂ ಬೊಮ್ಮಾಯಿ ಖಡಕ್ ವಾರ್ನಿಂಗ್

ಬೆಂಗಳೂರು: ಕರ್ನಾಟಕದ ಗಡಿ ಭಾಗದ ಜನರಿಗೆ ಆರೋಗ್ಯ ವಿಮೆ ಯೋಜನೆ ಜಾರಿಗೊಳಿಸುವ ಆದೇಶ ಹೊರಡಿಸಿರುವ ಮಹಾರಾಷ್ಟ್ರ ಸರಕಾರಕ್ಕೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಖಡಕ್ ವಾರ್ನಿಂಗ್ ಮಾಡಿದ್ದಾರೆ.

ಆದೇಶವನ್ನು ತಕ್ಷಣ ಹಿಂದಕ್ಕೆ ಪಡೆಯಿರಿ, ಇಲ್ಲವಾದಲ್ಲಿ ಮಹಾರಾಷ್ಟ್ರದಲ್ಲಿರುವ ಕನ್ನಡಿಗರಿಗಾಗಿ ನಾವೂ ಅಂತಹುದೇ ಯೋಜನೆ ಜಾರಿಗೊಳಿಸುತ್ತೇವೆ ಎಂದು ಅವರು ಎಚ್ಚರಿಸಿದ್ದಾರೆ. ಈ ಕುರಿತು ಬೊಮ್ಮಾಯಿ ಟ್ವೀಟ್ ಮಾಡಿದ್ದಾರೆ.




ಕರ್ನಾಟಕ ಮಹಾರಾಷ್ಟ್ರ ಗಡಿ ವಿವಾದ ಸುಪ್ರೀಂ ಕೋರ್ಟ್ ನಲ್ಲಿ ಇದ್ದರೂ ಮಹಾರಾಷ್ಟ್ರ ಸರ್ಕಾರ ಎರಡೂ ರಾಜ್ಯಗಳ ಗಡಿ ಭಾಗದಲ್ಲಿ ಗೊಂದಲ ಸೃಷ್ಟಿಸುವ ಕೆಲಸ ಮಾಡುತ್ತಿದೆ. ಕರ್ನಾಟಕದ ಗಡಿಯಲ್ಲಿರುವ ಕೆಲವರಿಗೆ ವಿಮೆ ನೀಡುವ ಆದೇಶ ಮಾಡಿರುವುದು ಉದ್ಧಟತನದ ಪರಮಾವಧಿಯಾಗಿದ್ದು, ಇದು ಎರಡು ರಾಜ್ಯಗಳ ನಡುವಿನ ಬಾಂಧವ್ಯ ಕದಡುವ ಪ್ರಯತ್ನವಾಗಿದೆ ಎಂದಿದ್ದಾರೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಮಹಾರಾಷ್ಟ್ರ ಮುಖ್ಯಮಂತ್ರಿ ಶಿಂಧೆ ಹಾಗೂ ಉಪ ಮುಖ್ಯಮಂತ್ರಿ ದೇವೇಂದ್ರ ಪಡ್ನವೀಸ್ ಅವರು ಗಡಿ ವಿಚಾರದಲ್ಲಿ ಯಾವುದೇ ರೀತಿಯ ಗೊಂದಲ ಸೃಷ್ಟಿಸುವುದಿಲ್ಲ ಎಂದು ಒಪ್ಪಿಕೊಂಡಿದ್ದರು. ಈಗ ಕರ್ನಾಟಕದ 865 ಗ್ರಾಮಗಳ ಜನತೆಗೆ ಜ್ಯೋತಿರಾವ್ ಫುಲೆ ಜನ ಆರೋಗ್ಯ ಯೋಜನೆ ಜಾರಿಗೆ ಆದೇಶ ಮಾಡಿರುವುದು ಒಕ್ಕೂಟ ವ್ಯವಸ್ಥೆಗೆ ಧಕ್ಕೆ ತರುವ ಕೆಲಸವಾಗಿದೆ. ಮಹಾರಾಷ್ಟ್ರ ಸರ್ಕಾರ ತಕ್ಷಣ ತನ್ನ ಆದೇಶವನ್ನು ವಾಪಸ್ ಪಡೆದು, ಅಮಿತ್ ಶಾ ಅವರ ಸೂಚನೆಗೆ ಗೌರವ ಕೊಡುವ ಮೂಲಕ ಎರಡೂ ರಾಜ್ಯಗಳ ನಡುವಿನ ಬಾಂಧವ್ಯ ಕಾಪಾಡುವ ಕೆಲಸ ಮಾಡಬೇಕು. ಮಹಾರಾಷ್ಟ್ರ ಸರ್ಕಾರ ಇದೇ ರೀತಿ ಉದ್ಧಟತನ ಮುಂದುವರೆಸಿದರೆ ಕರ್ನಾಟಕ ಸರ್ಕಾರವೂ ಕೂಡ ಮಹಾರಾಷ್ಟ್ರ ಗಡಿಯಲ್ಲಿರುವ ಕನ್ನಡಿಗರ ರಕ್ಷಣೆಗೆ ಇದೇ ರೀತಿಯ ವಿಮೆ ಜಾರಿಗೊಳಿಸಲಾಗುವುದು ಎಂದು ಬೊಮ್ಮಾಯಿ ಎಚ್ಚರಿಸಿದ್ದಾರೆ.

ಕರ್ನಾಟಕ ಗಡಿಯಲ್ಲಿರುವ ಜನರಿಗೆ ವಿಮೆ ನೀಡುವ ಹೆಸರಿನಲ್ಲಿ ಮಹಾರಾಷ್ಟ್ರ ಸರ್ಕಾರ, ಅವರಿಂದ ಮಹಾರಾಷ್ಟ್ರಕ್ಕೆ ಸೇರಿದವರೆಂದು ಘೋಷಣಾ ಪತ್ರ ತೆಗೆದುಕೊಳ್ಳುವುದು ಖಂಡನೀಯ ಎಂದೂ ಅವರು ಹೇಳಿದ್ದಾರೆ.

## ನೆಹರೂ ಓಲೇಕಾರ್ ಪಾರು



ಬೆಂಗಳೂರು: ಹಾವೇರಿ ನಗರಸಭೆ ಕಾಮಗಾರಿಯಲ್ಲಿ ನಕಲಿ ಬಿಲ್ ಸೃಷ್ಟಿಸಿ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ನಷ್ಟ ಉಂಟುಮಾಡಿದ ಪ್ರಕರಣದಲ್ಲಿ ಜನಪ್ರತಿನಿಧಿಗಳ ನ್ಯಾಯಾಲಯದಿಂದ ಎರಡು ವರ್ಷಗಳ ಜೈಲು ಶಿಕ್ಷೆಗೆ ಒಳಗಾಗಿ ಅನರ್ಹತೆಯ ಭೀತಿ ಎದುರಿಸುತ್ತಿದ್ದ ಹಾವೇರಿ ಶಾಸಕ ನೆಹರು ಓಲೇಕಾರ್ ಅವರಿಗೆ ನೆಮ್ಮದಿ ಸಿಕ್ಕಿದೆ. ಪ್ರಕರಣದಲ್ಲಿ ಅವರನ್ನು ದೋಷಿ ಎಂದು ಎರಡು ವರ್ಷಗಳ ಜೈಲು ಶಿಕ್ಷೆ ವಿಧಿಸಿದ್ದ ಜನಪ್ರತಿನಿಧಿಗಳ ನ್ಯಾಯಾಲಯದ ತೀರ್ಪಿಗೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ.

ಈ ಮೂಲಕ ಯಾರಾದರೂ ಮನವಿ ಸಲ್ಲಿಸಿದ್ದರೆ ಎದುರಾಗಬಹುದಾಗಿದ್ದ ಅನರ್ಹತೆಯ ಭೀತಿಯೂ ದೂರಾಗಿದೆ. ನ್ಯಾ ಕೆ. ನಟರಾಜನ್ ರವರಿದ್ದ ಹೈಕೋರ್ಟ್ ಪೀಠ ಈಗ ಶಿಕ್ಷೆಗೆ ತಡೆ ವಿಧಿಸಿದೆ.

ಜನಪ್ರತಿನಿಧಿಗಳಿಗೆ ಕ್ರಿಮಿನಲ್ ಪ್ರಕರಣದಲ್ಲಿ ಎರಡು ವರ್ಷಕ್ಕಿಂತ ಹೆಚ್ಚು ಶಿಕ್ಷೆ ವಿಧಿಸಲ್ಪಟ್ಟರೆ ಅವರ ಆಯ್ಕೆ ಸ್ವಯಂಚಾಲಿತವಾಗಿ ಅನರ್ಹಗೊಳ್ಳುತ್ತದೆ ಎಂಬ ನಿಯಮದ ಅಡಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರನ್ನು ಲೋಕಸಭಾ ಸದಸ್ಯತ್ವದಿಂದ ಅನರ್ಹಗೊಳಿಸಿದ ಹಿನ್ನೆಲೆಯಲ್ಲಿ ಅದಕ್ಕಿಂತಲೂ ಮೊದಲು ಶಿಕ್ಷೆಗೆ ಒಳಗಾಗಿದ್ದ ನೆಹರೂ ಓಲೇಕಾರ್ ಅವರನ್ನು ಯಾಕೆ ಅನರ್ಹಗೊಳಿಸಿಲ್ಲ ಎಂಬ ಪ್ರಶ್ನೆ ಚರ್ಚೆಗೆ ಒಳಗಾಗಿತ್ತು. ಶಿಕ್ಷೆಯ ವಿರುದ್ಧ ಸಲ್ಲಿಸಲಾದ ಮೇಲ್ಮನವಿಯ ಪ್ರಾಥಮಿಕ ವಿಚಾರಣೆ ಸಂದರ್ಭದಲ್ಲಿ ಸ್ವತಃ ನ್ಯಾಯಮೂರ್ತಿಗಳೇ ಈ ಪ್ರಶ್ನೆಯನ್ನು ಕೇಳಿದ್ದರು. ಆದರೆ, ಅಂತಿಮವಾಗಿ ಅವರಿಗೆ ಜೀವದಾನ ಸಿಕ್ಕಂತಾಗಿದೆ.

ಹಾವೇರಿ ನಗರಸಭೆ ಕಾಮಗಾರಿಯಲ್ಲಿ ನಕಲಿ ಬಿಲ್ ಸೃಷ್ಟಿಸಿ ರಾಜ್ಯ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಂತರ ಹಣ ನಷ್ಟ ಉಂಟುಮಾಡಿದ ಪ್ರಕರಣದಲ್ಲಿ ಜನಪ್ರತಿನಿಧಿಗಳ ನ್ಯಾಯಾಲಯ ನೆಹರೂ ಓಲೇಕಾರ್ ಅವರನ್ನು ದೋಷಿ ಎಂದು ತೀರ್ಮಾನಿಸಿದ್ದಲ್ಲದೆ ಎರಡು ವರ್ಷಗಳ ಜೈಲು ಶಿಕ್ಷೆಯನ್ನು ವಿಧಿಸಿತ್ತು.

## ಅಪರಿಚಿತ ಶವಗಳ ಗುರುತು ಪತ್ತೆಗೆ ಸಿಸಿಟಿಎನ್‌ಎಸ್ ಬಳಸಿಕೊಂಡು ಪೊಲೀಸ್ ಇಲಾಖೆ ಯಶಸ್ವಿ



ಬೆಂಗಳೂರು: ರಾಜ್ಯ ಪೊಲೀಸರಿಗೆ ಸವಾಲಾಗಿದ್ದ ಅಪರಿಚಿತ ಶವಗಳ ಗುರುತು ಪತ್ತೆಗೆ ಕೊಂಚ ಮುಕ್ತಿ ಸಿಕ್ಕಂತೆ ಆಗಿದೆ. ಮೊಬೈಲ್& ಕ್ರೈಂ ಮತ್ತು ಕ್ರಿಮಿನಲ್ ಟ್ರ್ಯಾಕಿಂಗ್ ನೆಟ್ವರ್ಕ್ ಸಿಸ್ಟಂ ಬಳಸಿಕೊಂಡು ಅಪರಿಚಿತ ಶವಗಳ ಗುರುತು ಪತ್ತೆಹಚ್ಚುವಲ್ಲಿ ಪೊಲೀಸ್ ಇಲಾಖೆ ಯಶಸ್ವಿಯಾಗಿದೆ.

ದಾವಣಗೆರೆ ಜಿಲ್ಲೆ ವಿದ್ಯಾನಗರ ಠಾಣಾ ವ್ಯಾಪ್ತಿಯಲ್ಲಿ ಹತ್ಯೆಗೆ ಒಳಗಾಗಿದ್ದ ಅಪರಿಚಿತವ್ಯಕ್ತಿ ಗುರುತನ್ನು ಎಂ&ಸಿಸಿಟಿಎನ್‌ಎಸ್ ಸಹಾಯದಿಂದ ಪತ್ತೆಹಚ್ಚಿದ್ದು, ರಾಜ್ಯದಲ್ಲಿ ಮೊದಲ ಪ್ರಕರಣ ಎನ್ನಲಾಗಿದೆ. ರಾಜ್ಯದಲ್ಲಿ ಪ್ರತಿದಿನ 7 ರಿಂದ 10 ಅಪರಿಚಿತ ಶವಗಳು ಪತ್ತೆಯಾಗುತ್ತಿವೆ.

ಅಂದರೇ ತಿಂಗಳಿಗೆ ಅಂದಾಜು 200 ರಿಂದ 250 ಶವಗಳ ಗುರುತು ಪತ್ತೆಯಾಗುತ್ತಿಲ್ಲ. ಈ ಶವಗಳು ಕೊಲೆ, ಆತ್ಮಹತ್ಯೆ, ಅನಾರೋಗ್ಯದಿಂದ ಸಾವು, ಸಹಜ ಸಾವು, ಅಪಘಾತ ಇನ್ನಿತ್ತರ ಕಾರಣಗಳಿಂದ ಪ್ರಾಣ ಬಿಟ್ಟಿರುತ್ತವೆ. ಮೃತ ದೇಹದಲ್ಲಿ ಯಾವುದೇ ಗುರುತಿನ ಚೀಟಿ, ಮುಖ ಚಹರೆ, ಮೊಬೈಲ್ ಸಿಗದೆ ಹೆಸರು ವಿಳಾಸ ಮತ್ತು ವಾರಸುದಾರರನ್ನು ಪತ್ತೆ ಮಾಡುವಲ್ಲಿ ಪೊಲೀಸರಿಗೆ ದೊಡ್ಡ ಸವಾಲಾಗಿದೆ. ಶೇ.10 ಗುರುತು ಪತ್ತೆಯಾದರೇ ಹೆಚ್ಚು. ಉಳಿ ಶವಗಳಿಗೆ ಕಾನೂನು ಪ್ರಕಾರ ಪೊಲೀಸರೇ ಶವ ಸಂಸ್ಕಾರ ನಡೆಸುತ್ತಾರೆ.

## ಏ.9 ರಂದು ಬಂಡೀಪುರಕ್ಕೆ ಪ್ರಧಾನಿ ಮೋದಿ ಭೇಟಿ ಇಂದಿನಿಂದ ಸಫಾರಿ, ಹೋಂ ಸ್ಟೇ, ರೆಸಾರ್ಟ್ ಬಂದ್

ಚಾಮರಾಜನಗರ: ಪ್ರಧಾನಿ ನರೇಂದ್ರ ಮೋದಿ ಅವರು ಇದೇ ಏಪ್ರಿಲ್ 9 ರಂದು ಬಂಡೀಪುರ ರಾಷ್ಟ್ರೀಯ ಹುಲಿ ಸಂರಕ್ಷಿತ ಪ್ರದೇಶಕ್ಕೆ ಭೇಟಿ ನೀಡುತ್ತಿದ್ದು, ಭದ್ರತೆ ದೃಷ್ಟಿಯಿಂದ ನಾಳೆಯಿಂದಲೇ ಬಂಡೀಪುರದಲ್ಲಿ ಸಫಾರಿ, ಹೋಂ ಸ್ಟೇ ಹಾಗೂ ರೆಸಾರ್ಟ್ ಗಳನ್ನು ಬಂದ್ ಮಾಡಲಾಗುತ್ತಿದೆ.




ಪ್ರಧಾನಿ ಮೋದಿ ಅವರು ಏಪ್ರಿಲ್ 9ರಂದು ಬಂಡೀಪುರ ರಾಷ್ಟ್ರೀಯ ಉದ್ಯಾನವನದಲ್ಲಿ ಸಫಾರಿ ನಡೆಸಲಿದ್ದಾರೆ.

ಹೀಗಾಗಿ ಗುರುವಾರದಿಂದ ಬಂಡೀಪುರ ರಾಷ್ಟ್ರೀಯ ಉದ್ಯಾನವನಕ್ಕೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಅಲ್ಲದೆ ಬಂಡೀಪುರ ವ್ಯಾಪ್ತಿಯ ಎಲ್ಲ ಹೋಂ ಸ್ಟೇಗಳು, ರೆಸಾರ್ಟ್ ಗಳನ್ನು ಬಂದ್ ಮಾಡಲಾಗುತ್ತಿದೆ.

ಈ ಸಂಬಂಧ ಸುತ್ತೋಲೆ ಹೊರಡಿಸಿದ ಚಾಮರಾಜನಗರ ಜಿಲ್ಲಾಧಿಕಾರಿ ಡಿ.ಎಸ್.ರಮೇಶ್ ಅವರು, ರಸ್ತೆ ನಿರ್ವಹಣೆ, ಪೂರ್ವ ಸಿದ್ದತೆ, ಹಾಗೂ ಭದ್ರತೆ ದೃಷ್ಟಿಯಿಂದ ಸಾರ್ವಜನಿಕರಿಗೆ ನಿಷೇಧಿಸಲಾಗಿದೆ ಎಂದು ತಿಳಿಸಿದ್ದಾರೆ.

ಪ್ರಧಾನಿ ಮೋದಿ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ, ಬಂಡೀಪುರವನ್ನು ತಲುಪುವ ಮಾರ್ಗದ ದುರಸ್ತಿ ಕಾರ್ಯ ನಡೆದಿದೆ.

ಅಲ್ಲದೆ ಮೇಲುಕಮನಹಳ್ಳಿಯಲ್ಲಿಯೂ( ಸಫಾರಿ ಪಾಯಿಂಟ್) ರಸ್ತೆಗಳನ್ನು ದುರಸ್ತಿ ಮಾಡಿಸಿ, ಸಫಾರಿಗೆ ಮತ್ತಷ್ಟು ಅನುಕೂಲ ಕಲ್ಪಿಸುವಲ್ಲಿ ಅರಣ್ಯ ಇಲಾಖೆಯ ಸಿಬ್ಬಂದಿಯು ನಿರತರಾಗಿದ್ದಾರೆ.

## 'ಕೇಂದ್ರ ತನಿಖಾ ಸಂಸ್ಥೆಗಳ ದುರ್ಬಳಕೆ' ವಿರುದ್ಧದ ಅರ್ಜಿ ವಜಾ: ಸುಪ್ರೀಂನಲ್ಲಿ ಪ್ರತಿಪಕ್ಷಗಳಿಗೆ ತೀವ್ರ ಹಿನ್ನಡೆ

ನವದೆಹಲಿ: ಕೇಂದ್ರ ಸರ್ಕಾರ ರಾಜಕೀಯ ವಿರೋಧಿಗಳಿಗೆ ಕಿರುಕುಳ ನೀಡಲು, ಬೆದರಿಸಲು ಕೇಂದ್ರೀಯ ತನಿಖಾ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಳ್ಳುತ್ತಿದೆ ಎಂದು ಆರೋಪಿಸಿ ಕಾಂಗ್ರೆಸ್ ನೇತೃತ್ವದ 14 ಪ್ರತಿಪಕ್ಷಗಳು ಸಲ್ಲಿಸಿದ ಅರ್ಜಿಯನ್ನು ಸುಪ್ರೀಂ ಕೋರ್ಟ್ ಬುಧವಾರ ವಜಾಗೊಳಿಸಿದೆ.

ಮುಖ್ಯ ನ್ಯಾಯಮೂರ್ತಿ ಡಿ ವೈ ಚಂದ್ರಚೂಡ್ ಮತ್ತು ನ್ಯಾಯಮೂರ್ತಿ ಜೆ ಬಿ ಪಾರ್ದಿವಾಲಾ ಅವರನ್ನೊಳಗೊಂಡ ಪೀಠ, ವಾಸ್ತವಿಕ ಸಂದರ್ಭಗಳು ಇಲ್ಲದೆಯೇ ಸಾಮಾನ್ಯ ನಿರ್ದೇಶನಗಳನ್ನು ನೀಡಲು ಸಾಧ್ಯವಿಲ್ಲ ಎಂದು ಹೇಳಿದೆ.




ತಮ್ಮ ಅರ್ಜಿಯನ್ನು ಪುರಸ್ಕರಿಸಲು ಸರ್ವೋಚ್ಚ ನ್ಯಾಯಾಲಯದ ನಿರಾಸಕ್ತಿ ತೋರುತ್ತಿರುವುದನ್ನು ಮನಗಂಡ ಪ್ರತಿಪಕ್ಷಗಳ ಪರ ವಾದ ಮಂಡಿಸಿದ ಹಿರಿಯ ವಕೀಲ ಎ ಎಂ ಸಿಙ್ವಿ, ಅರ್ಜಿ ಹಿಂಪಡೆಯಲು ಅನುಮತಿ ಕೋರಿದರು. ಹೀಗಾಗಿ ಅರ್ಜಿಯನ್ನು ಹಿಂತೆಗೆದುಕೊಳ್ಳಲಾಗಿದೆ ಎಂದು ಸುಪ್ರೀಂ ಕೋರ್ಟ್ ಆದೇಶಿಸಿದೆ.

ನೀವು ವೈಯಕ್ತಿಕ ಕ್ರಿಮಿನಲ್ ಪ್ರಕರಣ ಅಥವಾ ಪ್ರಕರಣಗಳ ಗುಂಪು ಇದ್ದಾಗ ದಯವಿಟ್ಟು ನಮ್ಮ ಬಳಿಗೆ ಬನ್ನಿ" ಎಂದು ಪೀಠ ಹೇಳಿದೆ.

ಪ್ರತಿಪಕ್ಷಗಳ ಪರವಾಗಿ ವಾದ ಮಂಡಿಸಿದ ಅಭಿಶೇಕ್ ಮನು ಸಿಂಘ್ವಿ, 2014 ರಲ್ಲಿ ನರೇಂದ್ರ ಮೋದಿ ಅಧಿಕಾರಕ್ಕೆ ಬಂದಾಗಿನಿಂದಲೂ ವಿಪಕ್ಷಗಳ ನಾಯಕರ ವಿರುದ್ಧ ದಾಖಲಾಗುವ ಜಾರಿ ನಿರ್ದೇಶನಾಲಯದ ಪ್ರಕರಣಗಳು ಹಾಗೂ ಸಿಬಿಐ ಪ್ರಕರಣಗಳ ಸಂಖ್ಯೆ ತೀವ್ರವಾಗಿ ಹೆಚ್ಚಳವಾಗಿದೆ ಎಂದು ಹೇಳಿದರು.

ಕಳೆದ 10 ವರ್ಷಗಳಿಗೆ ಹೋಲಿಕೆ ಮಾಡಿದರೆ ಜಾರಿ ನಿರ್ದೇಶನಾಲಯ 7 ವರ್ಷಗಳಲ್ಲಿ 6 ಪಟ್ಟು ಹೆಚ್ಚು ಪ್ರಕರಣಗಳನ್ನು ದಾಖಲಿಸಿದೆ. ಆದರೆ ಈ ಪ್ರಕರಣಗಳ ಪೈಕಿ ಶೇ.23 ರಷ್ಟು ಮಾತ್ರ ಅಪರಾಧಕ್ಕೆ ಶಿಕ್ಷೆ ಕೊಡಿಸಲಾಗಿದೆ ಎಂದು ಸುಪ್ರೀಂ ಕೋರ್ಟ್ ಎದುರು ಅಂಕಿ-ಅಂಶಗಳನ್ನು ಬಿಚ್ಚಿಟ್ಟಿದ್ದರು.


ಸಿಬಿಐ ಹಾಗೂ ಜಾರಿ ನಿರ್ದೇಶನಾಲಯ ಗಳಲ್ಲಿ ದಾಖಲಾಗಿರುವ ಶೇ.95 ರಷ್ಟು ಪ್ರಕರಣಗಳು ದೇಶಾದ್ಯಂತ ಇರುವ ವಿಪಕ್ಷಗಳ ರಾಜಕಾರಣಿಗಳ ವಿರುದ್ಧವೇ ಆಗಿದೆ. ಇದು ರಾಜಕಾರಣಿಗಳ ವಿರುದ್ಧದ ದ್ವೇಷದ ರಾಜಕಾರಣವಾಗಿದೆ ಎಂದು ಆರೋಪಿಸಿದರು.

## ಅಪ್ರಾಪ್ತರ ದೈಹಿಕ ಸಂಪರ್ಕಕ್ಕೆ ಅನುಮತಿ ಇಲ್ಲ : ಕರ್ನಾಟಕ ಹೈಕೋರ್ಟ್ ಅಭಿಪ್ರಾಯ

ಬೆಂಗಳೂರು : ಪ್ರೀತಿ ಮಾಡಲು 18 ವರ್ಷದೊಳಗಿನ ಅಪ್ರಾಪ್ತರಿಗೆ ಅನುಮತಿ ಇರಬಹುದು ಆದರೆ ದೈಹಿಕ ಸಂಪರ್ಕಕ್ಕಾಗಿ ಅಲ್ಲ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ.

ಲೈಂಗಿಕ ಅಪರಾಧದಿಂದ ಮಕ್ಕಳ ರಕ್ಷಣೆ (ಪೋಕ್ಸೊ) ಕಾಯ್ದೆಯಡಿ ಆರೋಪಿಗೆ ಜಾಮೀನು ನೀಡಲು ಕರ್ನಾಟಕ ಹೈಕೋರ್ಟ್ ನಿರಾಕರಿಸಿದೆ.

ನ್ಯಾಯಮೂರ್ತಿ ವಿ.ಶ್ರೀಶಾನಂದ ಅವರ ನ್ಯಾಯಪೀಠವು ಪೋಕ್ಸೊ ಕಾಯ್ದೆಯ ಸೆಕ್ಷನ್ 4 ರ ಅಡಿಯಲ್ಲಿ ಶಿಕ್ಷಾರ್ಹವಾದ ಪೋಕ್ಸೊ ಕಾಯ್ದೆಯ ಸೆಕ್ಷನ್ 3 ರ ವ್ಯಾಪ್ತಿಯನ್ನು ಪರಿಗಣಿಸುವಾಗ ಅರ್ಜಿದಾರರು ಮತ್ತು ಸಂತ್ರಸ್ತ ಹುಡುಗಿಯ ನಡುವೆ ನಡೆದಿದೆ ಎಂದು ಹೇಳಲಾದ ಲೈಂಗಿಕ ದೌರ್ಜನ್ಯಕ್ಕೆ ಸಂತ್ರಸ್ತ ಬಾಲಕಿಯ ಒಪ್ಪಿಗೆ ಮುಖ್ಯವಲ್ಲ ಎಂದು ಹೇಳಿದೆ.



ನ್ಯಾಯಾಂಗ ಬಂಧನದಲ್ಲಿರುವ ಆರೋಪಿಯು ಜಾಮೀನು ಕೋರಿ ಸಲ್ಲಿಸಿದ್ದ ಅರ್ಜಿಯನ್ನು ವಜಾ ಮಾಡಿರುವ ಹೈಕೋರ್ಟ್, ಸಂತ್ರಸ್ತೆಯ ಸ್ವಯಂಕೃತ ಹೇಳಿಕೆಯನ್ನೇ ಮುಂದಿಟ್ಟುಕೊಂಡು ಜಾಮೀನು ಕೋರಿದ ಆರೋಪಿಯ ಮನವಿಯನ್ನು ನ್ಯಾಯಪೀಠ ತಿರಸ್ಕರಿಸಿದೆ.

ಪೋಕ್ಸೋ ಕಾಯ್ದೆ ಪ್ರಕಾರ 18 ವರ್ಷ ಒಳಗಿನವರು ಅಪ್ರಾಪ್ತರೆಂದು ಪರಿಗಣಿಸಲ್ಪಡುತ್ತಾರೆ.

ಇನ್ನೂ ಈ ಪ್ರಕರಣದ ಸಂತ್ರಸ್ತೆಗೆ 18 ವರ್ಷ ವಯಸ್ಸು ಆಗಿಲ್ಲ. ಆಕೆ ಲೈಂಗಿಕ ಕ್ರಿಯೆಗೆ ಸಮ್ಮತಿ ನೀಡಿದರೂ ಅದು ಸಮ್ಮತಿಯಾಗಿ ಪರಿಗಣಿಸುವುದಿಲ್ಲ ಎಂಬುದಾಗಿ ಪೋಕ್ಸೋ ಕಾಯ್ದೆಯಲ್ಲಿ ಸ್ಪಷ್ಟವಾಗಿ ಹೇಳಲಾಗಿದೆ ಎಂದು ಹೈಕೋರ್ಟ್ ತಿಳಿಸಿದೆ.

## ಮಹಿಳೆಯೊಂದಿಗೆ ಅಸಭ್ಯ ವರ್ತನೆ: ಟಿಟಿಇ ಕೆಲಸದಿಂದ ವಜಾ



ಬೆಂಗಳೂರು: ನಗರದ ಕೆಎಸ್‌ಆರ್ ರೈಲು ನಿಲ್ದಾಣದಲ್ಲಿ ಮಹಿಳಾ ಪ್ರಯಾಣಿಕರ ಬಳಿ ಅಸಭ್ಯವಾಗಿ ವರ್ತಿಸಿದ್ದ ರೈಲ್ವೆ ಟಿಕೆಟ್ ಪರೀಕ್ಷಕ (ಟಿಟಿಇ)ನನ್ನು ಕೆಲಸದಿಂದ ವಜಾಗೊಳಿಸಲಾಗಿದೆ.

ಸತತ ದೂರುಗಳು ಬಂದ ಹಿನ್ನೆಲೆಯಲ್ಲಿ ಟಿಟಿಇ ವಿ.ಸಂತೋಷ್ ಕುಮಾರ್ ಅವರನ್ನು ನೈಋತ್ಯ ರೈಲ್ವೆ ವಲಯವು ಸೇವೆಯಿಂದ ವಜಾಗೊಳಿಸಿದೆ. ಮಾರ್ಚ್ 14 ರಂದು ಕೃಷ್ಣರಾಜಪುರಂ ರೈಲು ನಿಲ್ದಾಣದಲ್ಲಿ ಯುವತಿಯೊಂದಿಗೆ ಸಂತೋಷ್ ಕುಮಾರ್ ಅನುಚಿತವಾಗಿ ವರ್ತಿಸಿದ್ದ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿತ್ತು. ಈ ಸಂಬಂಧ ತೀವ್ರ ಟೀಕೆಗಳು ವ್ಯಕ್ತವಾಗಿದ್ದವು.

ಮಾರ್ಚ್ 17 ರಂದು ಐಪಿಸಿಯ ಸೆಕ್ಷನ್ 354 ಅಡಿಯಲ್ಲಿ ಬೆಂಗಳೂರು ಕಂಟೋನ್ಮೆಂಟ್ನಲ್ಲಿರುವ ಸರ್ಕಾರಿ ರೈಲ್ವೆ ಪೊಲೀಸ್ ಠಾಣೆಯಲ್ಲಿ ಮಹಿಳೆ ಸಂತೋಷ್ ವಿರುದ್ಧ ಎಫ್‌ಐಆರ್ ದಾಖಲಿಸಿದ್ದರು.

## ದಾಖಲೆ ಇಲ್ಲದ 11.4900 ರೂ ಜಪ್ತಿ

ಸಂಕೇಶ್ವರ: ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಅಕ್ರಮ ಹಣ ಮತ್ತು ವಸ್ತುಗಳ ಸಾಗಾಣಿಕೆ ಮೇಲೆ ತೀವ್ರ ನಿಗಾವಹಿಸಿರುವ ಸಂಕೇಶ್ವರ ಹುಕ್ಕೇರಿ ಠಾಣೆಯ ಜಂಟಿ ಪೋಲಿಸರು ಪ್ರತ್ಯೇಕ ಒಂದು ಪ್ರಕರಣದಲ್ಲಿ ದಾಖಲೆ ಇಲ್ಲದ 11,4900/- ಲಕ್ಷ ಹಣವನ್ನು ಬುಧವಾರ ವಶಪಡಿಸಿಕೊಂಡಿದ್ದಾರೆ.

ಕೊಲ್ಹಾಪೂರ ಬೆಳಗಾವಿ ಗಡಹಿಂಗ್ಲಜ ಮಾರ್ಗದಿಂದ ಕೊಲ್ಲಾಪುರಕ್ಕೆ ಹೊಗುವ ಕುಶಾಲ್ ಅಹುಜಾ ಇವನು ಸಂಕೇಶ್ವರ ಸಮೀಪದ ಹಿಟ್ಟಣಗಿ ನಾಕಾ ಚೆಕ್ ಪೋಸ್ಟ್ ಮಾರ್ಗವಾಗಿ ಸಾಗುತ್ತಿದ್ದ ಕಾರಿನ ತಪಾಸಣೆ ನಡೆಸಿದ ಪೋಲಿಸರು,ದಾಖಲೆ ಇಲ್ಲದೆ ಸಾಗಿಸುತ್ತಿದ್ದ 11,4900/- ರೂಪಾಯಿ ಲಕ್ಷ ಹಣ ವಶಕ್ಕೆ ಪಡೆದಿದ್ದಾರೆ.



ಈ ಸಂದರ್ಭದಲ್ಲಿ ಸಂಕೇಶ್ವರ ಠಾಣೆಯ ಪೋಲಿಸ್ ಇನ್ಸ್ಪೆಕ್ಟರ್ ಪ್ರಲ್ಹಾದ ಚೆನ್ನಗಿರಿ ಹಾಗೂ ಹುಕ್ಕೇರಿ ಪೊಲಿಸ್ ಠಾಣೆಯ ಇನ್ಸ್ಪೆಕ್ಟರ್ ಮಹಮ್ಮದ ತಹಶಿಲ್ದಾರ ಹಾಗೂ ಪಿಎಸ್‌ಐ ಸೇರಿದಂತೆ ಸಿಬ್ಬಂದಿಗಳಾದ ಸಿಪಿಸಿ ಬಸವರಾಜ ಮೇಲ್ಮಟ್ಟಿ ಶಿವರುದ್ರ ಚೌಗಲಾ.ಚುನಾವಣಾಧಿಕಾರಿಗಳು ಹಾಗೂ ಅನೇಕ ಅಧಿಕಾರಿಗಳು ಉಪಸ್ಥಿತರಿದ್ದರು.

## ಪಾಳೇಗಾರಿಕೆಯ ನ್ಯಾಯ ಪಂಚಾಯಿತಿಗಳ ವಿರುದ್ಧ ಕ್ರಮ ಕೈಗೊಳ್ಳಿ: ಸರ್ಕಾರಕ್ಕೆ ಸಿಪಿಎಂ ಆಗ್ರಹ

ಮೈಸೂರು: ಗ್ರಾಮೀಮ ಪ್ರದೇಶಗಳಲ್ಲಿ ಸಂವಿಧಾನ ಬಾಹಿರವಾಗಿ ಕೆಲಸ ಮಾಡುತ್ತಾ ದಲಿತರು ಮತ್ತು ಬಲಹೀನರ ಮೇಲೆ ದೌರ್ಜನ್ಯ ನಡೆಸುತ್ತಿರುವ ಪಾಳೇಗಾರಿಕೆಯ ನ್ಯಾಯ ಪಂಚಾಯ್ತಿಗಳನ್ನು ರದ್ದುಪಡಿಸಬೇಕು ಮತ್ತು ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸಿಪಿಐ(ಎಂ) ಜಿಲ್ಲಾ ಕಾರ್ಯದರ್ಶಿ ಟಿ.ಎಲ್.ಕೃಷ್ಣೇಗೌಡ ಅವರು ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಗ್ರಾಮಗಳ ಪಂಚಾಯಿತಿಗಳಿಗೆ ಮೇಲ್ವರ್ಗದ ನಾಯಕರು ನೇತೃತ್ವ ವಹಿಸಿದ್ದು, ಇದರಿಂದ ಸಂವಿಧಾನ ಬಾಹಿರ ಆದೇಶ ಹಾಗೂ ಪ್ರಜಾಪ್ರಭುತ್ವ ವಿರೋಧಿ ವಾತಾವರಣ ನಿರ್ಮಾಣವಾಗಿದೆ. ಈ ಪಂಚಾಯತಿಗಳು ಉತ್ತರ ಭಾರತದ ಜಾಟ್ ಮತ್ತು ಖಾಪ್ ಪಂಚಾಯತಿಗಳನ್ನು ಹೋಲುತ್ತವೆ ಎಂದು ಹೇಳಿದ್ದಾರೆ.

## ಕಿಚ್ಚ ಸುದೀಪ್ ರಾಜಕೀಯ ಎಂಟ್ರಿ ವಿಚಾರಕ್ಕೆ ತೆರೆ

### ಸ್ಪಷ್ಟನೆ ನೀಡಿದ ಅಭಿನಯ ಚಕ್ರವರ್ತಿ

ಬೆಂಗಳೂರು: ಖ್ಯಾತ ಚಲನಚಿತ್ರ ನಟ ಕಿಚ್ಚ ಸುದೀಪ ಬಿಜೆಪಿ ಅಭ್ಯರ್ಥಿಗಳ ಪರವಾಗಿ ಕೆಲವು ಕ್ಷೇತ್ರಗಳಲ್ಲಿ ಚುನಾವಣಾ ಪ್ರಚಾರ ನಡೆಸಲಿದ್ದಾರೆ. ನಗರದ ಖಾಸಗಿ ಹೊಟೇಲ್‌ನಲ್ಲಿ ಬುಧವಾರ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಜತೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸುದೀಪ್, 'ನಾನು ಬಿಜೆಪಿ ಸೇರುತ್ತಿಲ್ಲ, ರಾಜಕೀಯವನ್ನು ಪ್ರವೇಶ ಮಾಡುತ್ತಿಲ್ಲ ಹಾಗೂ ಚುನಾವಣೆಯಲ್ಲಿ ಸ್ಪರ್ಧಿಸುವುದೂ ಇಲ್ಲ' ಎಂದು ಸ್ಪಷ್ಟಪಡಿಸಿದರು.

'ಬಸವರಾಜ ಬೊಮ್ಮಾಯಿ ಅವರು ನನಗೆ ಚಿಕ್ಕಂದಿನಿಂದಲೂ ಪರಿಚಿತರು. ನಾನು ಮೊದಲಿನಿಂದದಲೂ ಅವರನ್ನು ಮಾಮ ಎಂದೇ ಕರೆಯುತ್ತಿದ್ದೆ. ಚಿತ್ರರಂಗದಲ್ಲಿ ನಾನು ಕಡು ಕಷ್ಟದಲ್ಲಿ ಇದ್ದ ಸಂದರ್ಭದಲ್ಲಿ ನನ್ನ ಕೈ ಹಿಡಿದ ಬೆರಳೆಣಿಕೆಯ ಮಿತ್ರರಲ್ಲಿ ಬೊಮ್ಮಾಯಿ ಒಬ್ಬರು. ಈಗ ಅವರು ನನ್ನ ಬೆಂಬಲ ಕೇಳಿದ್ದಾರೆ. ಈ ಸಂದರ್ಭದಲ್ಲಿ ಅವರಿಗೆ ನೆರವಾಗುವ ಮೂಲಕ ಕೃತಜ್ಞತೆ ಸಲ್ಲಿಸುವುದು ನನ್ನ ಕರ್ತವ್ಯ. ಆದ್ದರಿಂದ ಅವರು ಎಲ್ಲಿ ಹೇಳುತ್ತಾರೆಯೋ ಅಲ್ಲಿ ಪ್ರಚಾರ ನಡೆಸುತ್ತೇನೆ. ಹಾಗೆಂದು ಎಲ್ಲ ಕ್ಷೇತ್ರಗಳಲ್ಲಿ ಪ್ರಚಾರ ಮಾಡುವಷ್ಟು ಸಮಯವೂ ಇಲ್ಲ, ಮಾಡುವುದೂ ಇಲ್ಲ. ಕೆಲವು ಕಡೆಗಳಲ್ಲಿ ಮಾತ್ರ ಪ್ರಚಾರ ಮಾಡುತ್ತೇನೆ' ಎಂದರು.



'ಪಕ್ಷ ಎನ್ನುವುದಕ್ಕಿಂತ ವೈಯಕ್ತಿಕ ನೆಲೆಯಲ್ಲಿ ಮುಖ್ಯಮಂತ್ರಿಯವರು ಕರೆದಿದ್ದಾರೆ. ಅವರ ಬೆಂಬಲಕ್ಕೆ ನಿಂತಿದ್ದೇನೆ. ಬೊಮ್ಮಾಯಿ ಅವರು ರಾಜಕೀಯ ಪ್ರವೇಶ ಮಾಡುವುದಕ್ಕೂ ಮೊದಲಿಂದಲೂ ಪರಿಚಿತರು. ಹೀಗಾಗಿ ಇಲ್ಲಿ ಪಕ್ಷಗಳ ವಿಚಾರ ಬರುವುದಿಲ್ಲ. ವ್ಯಕ್ತಿಗಾಗಿ ನಾನು ಬಂದಿದ್ದೇನೆ. ಕಳೆದ 27 ವರ್ಷಗಳಿಂದ ಚಿತ್ರರಂಗದಲ್ಲಿ ಕಠಿಣವಾಗಿ ಪರಿಶ್ರಮವನ್ನು ಹಾಕಿ ದೊಡ್ಡ ಅಭಿಮಾನಿ ಬಳಗವನ್ನು ಪಡೆದಿದ್ದೇನೆ. ಅವರಲ್ಲಿ ಎಲ್ಲ ಪಕ್ಷವನ್ನು ಬೆಂಬಲಿಸುವವರೂ ಇದ್ದಾರೆ. ಹೀಗಾಗಿ ರಾಜಕೀಯ ಪ್ರವೇಶ ಮಾಡುವುದಿಲ್ಲ. ಒಂದು ವೇಳೆ ರಾಜಕೀಯ ಸೇರುವುದೇ ಆದಲ್ಲಿ ಮುಂಚಿತವಾಗಿಯೇ ಹೇಳಿಯೇ ಸೇರುತ್ತೇನೆ' ಎಂದೂ ಸುದೀಪ್ ಸ್ಪಷ್ಟಪಡಿಸಿದರು.

ನನ್ನ ಕಷ್ಟದಲ್ಲಿ ಯಾರು ನನ್ನ ಜತೆ ಇದ್ದರೋ ಅಂತಹವರು ಯಾವುದೇ ಪಕ್ಷದಲ್ಲಿದ್ದರೂ ಅವರ ನೆರವಿಗೆ ಹೋಗುತ್ತೇನೆ. ಮುನಿರತ್ನ ಅವರಿಗೂ ಪ್ರಚಾರ ಮಾಡಿದ್ದೆ. ಆಗ ಅವರು ಬೇರೆ ಪಕ್ಷದಲ್ಲಿದ್ದರು ಎಂದರು.

'ಮುಖ್ಯಮಂತ್ರಿ ಬೊಮ್ಮಾಯಿ ಮಾತನಾಡಿ, ಈ ಸುದ್ದಿಗೋಷ್ಠಿಯನ್ನು ವೈಯಕ್ತಿಯ ನೆಲೆಯಲ್ಲಿ ಮಾಡಿದ್ದೇನೆ. ಸುದೀಪ್ ಅವರು ಪಕ್ಷ ಸೇರುತ್ತಿಲ್ಲ.

ನಮ್ಮ ಪಕ್ಷದ ಅಭ್ಯರ್ಥಿಗಳ ಪರವಾಗಿ ಪ್ರಚಾರಕ್ಕೆ ಬರುವಂತೆ ಕೇಳಿದೆ. ನಿಮಗೋಸ್ಕರ ಬರುತ್ತೇನೆ.

ಅವರ ಸಮಯ ಮತ್ತು ಗೌರವ ನೋಡಿಕೊಂಡು ಎಲ್ಲೆಲ್ಲಿ ಪ್ರಚಾರ ಮಾಡಬೇಕು ಎಂಬುದನ್ನು ಅವರಿಗೆ ತಿಳಿಸುತ್ತೇವೆ' ಎಂದು ಹೇಳಿದರು.

'ನಮ್ಮ ಪಕ್ಷ ಮಾತ್ರವಲ್ಲ ಕಾಂಗ್ರೆಸ್ ಪಕ್ಷದಲ್ಲಿ ದೊಡ್ಡ ಸ್ಟಾರ್‌ಗಳಿದ್ದಾರೆ. ಇತ್ತೀಚೆಗೆ ದೊಡ್ಡ ಚಲನಚಿತ್ರ ಸಂಗೀತ ನಿರ್ದೇಶಕರೂ ಅವರ ಪಕ್ಷಕ್ಕೆ ಸೇರಿದ್ದಾರೆ.

ಸುದೀಪ್ ಅವರು ಜನಪ್ರಿಯ ನಟ. ಅವರದ್ದೇ ಆದ ದೊಡ್ಡ ಅಭಿಮಾನ ಬಳಗ ಇದೆ. ಅವರು ಪ್ರಚಾರಕ್ಕೆ ಬರುತ್ತಾರೆ ಎಂಬ ವಿಷಯ ಯುವ ಜನತೆಯಲ್ಲಿ ಸಂಚಲನ ಮೂಡಿಸಿದೆ' ಎಂದೂ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕಂದಾಯ ಸಚಿವ ಆರ್.ಅಶೋಕ, ಆರೋಗ್ಯ ಸಚಿವ ಡಾ.ಕೆ.ಸುಧಾಕರ್, ತೋಟಗಾರಿಕಾ ಸಚಿವ ಮುನಿರತ್ನ ಇದ್ದರು.

**ಮೋದಿ ಕೆಲಸಗಳ ಬಗ್ಗೆ ಹೆಮ್ಮೆ ಇದೆ:**

'ಈ ದೇಶದ ಪ್ರಜೆಯಾಗಿ ನನಗೂ ನನ್ನದೇ ಆದ ಅಭಿಪ್ರಾಯಗಳಿವೆ. ಅದರಂತೆ ಪ್ರಧಾನಿ ಮೋದಿಯವರು ದೇಶದ ಪ್ರಗತಿಗಾಗಿ ಹಲವು ಉತ್ತಮ ಕೆಲಸಗಳನ್ನು ಮಾಡಿದ್ದಾರೆ. ಅದರ ಬಗ್ಗೆ ತುಂಬಾ ಹೆಮ್ಮೆ ಇದೆ' ಎಂದು ಸುದೀಪ್ ಹೇಳಿದರು.

'ದೇಶದ ಅಭ್ಯುದಯಕ್ಕಾಗಿ ಉತ್ತಮ ಕೆಲಸಗಳನ್ನು ಮಾಡಿದಾಗ ಯಾರೇ ಆದರೂ ಆ ಬಗ್ಗೆ ಹೆಮ್ಮೆ ಪಡಲೇಬೇಕು. ಒಬ್ಬ ನಾಗರೀಕನಾಗಿ ಈ ವಿಚಾರ ಹಂಚಿಕೊಂಡಿದ್ದೇನೆ' ಎಂದು ಹೇಳಿದರು.

ಬಿಜೆಪಿ ಪರ ಪ್ರಚಾರ ಮಾಡುವುದನ್ನು ಟೀಕಿಸಿ ಚಿತ್ರ ನಟ ಪ್ರಕಾಶ್ ರಾಜ್ ಟ್ವೀಟ್ ಮಾಡಿರುವ ಬಗ್ಗೆ ಪ್ರಶ್ನಿಸಿದಾಗ, 'ಅವರೊಬ್ಬ ಉತ್ತಮ ನಟ. ಅವರ ಜತೆ ಒಂದು ಸಿನಿಮಾ ಮಾಡಿದ್ದೆ. ಇನ್ನೊಂದು ಸಿನಿಮಾ ಯಾವಾಗ ಮಾಡುವುದು ಎಂಬುದನ್ನು ಕಾಯ್ತಾ ಇದ್ದೇನೆ' ಎಂದರು.

## ನೀತಿ ಸಂಹಿತೆ ಉಲ್ಲಂಘನೆ: 10 ಪ್ರಕರಣ ದಾಖಲು

# 16.60 ಲಕ್ಷ ರೂ. ನಗದು ವಶ–ಡಿಸಿ ಮಾಲಪಾಟಿ

ಬಳ್ಳಾರಿ: ಸಾರ್ವತ್ರಿಕ ವಿಧಾನಸಭಾ ಚುನಾವಣೆಗೆ ಸಂಬಂಧಿಸಿದಂತೆ ನೀತಿ ಸಂಹಿತೆ ಜಾರಿಯಲ್ಲಿದ್ದು, ಜಿಲ್ಲೆಯಾದ್ಯಂತ ಚೆಕ್ ಪೋಸ್ಟ್‌ಗಳು ಹದ್ದಿನ ಕಣ್ಣಾಗವಲಾಗಿ ಕಾರ್ಯ ನಿರ್ವಹಿಸುತ್ತಿವೆ.

ಮಂಗಳವಾರದ ವರದಿಯ ಪ್ರಕಾರ, ನೀತಿ ಸಂಹಿತೆ ಉಲ್ಲಂಘಿಸಿ ದಾಖಲೆಯಿಲ್ಲದೇ ಸಾಗಿಸುತ್ತಿದ್ದ 16,60,912 ನಗದು ಹಣ ಸೇರಿ 0.11 ಗ್ರಾಂ ಗಾಂಜಾ (ರೂ.4 ಸಾವಿರ ಬೆಲೆಬಾಳುವ) ವಸ್ತು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪವನ್ ಕುಮಾರ್ ಮಾಲಪಾಟಿ ಅವರು



ಮಾಹಿತಿ ನೀಡಿದ್ದಾರೆ.

ಜಿಲ್ಲೆಯಾದ್ಯಂತ ನೀತಿ ಸಂಹಿತೆ ಕಟ್ಟುನಿಟ್ಟಾಗಿ ಜಾರಿಗೊಳಿಸಲು ವಿವಿಧ ತಂಡಗಳನ್ನು ರಚಿಸಲಾಗಿದ್ದು, ಈಗಾಗಲೇ ಕಾರ್ಯಪ್ರವೃತ್ತವಾಗಿದೆ. ಒಟ್ಟು 43 ಫ್ಲೈಯಿಂಗ್ ಸ್ಕ್ವಾಡ್, 27 ಎಸ್‌ಎಸ್‌ಟಿ ತಂಡ ಹಾಗೂ 7 ಅಬಕಾರಿ ತಂಡ ಕೆಲಸ ನಿರ್ವಹಿಸುತ್ತಿವೆ.

ಮಂಗಳವಾರ 92–ಸಿರುಗುಪ್ಪ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಫ್ಲೈಯಿಂಗ್ ಸ್ಕ್ವಾಡ್ ತಂಡವು ಪರಿಶೀಲನೆ ವೇಳೆ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 15,78,100 ಲಕ್ಷ ರೂ.ಗಳನ್ನು ವಶಪಡಿಸಿಕೊಂಡಿದೆ.

ಮತ್ತು ಸ್ಟಾಟಿಕ್ ಸರ್ವೈವೆಲೆನ್ಸ್ ಟೀಮ್ (ಎಸ್‌ಎಸಗಟಿ) ಪರಿಶೀಲನೆ ವೇಳೆ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 82,812 ಸಾವಿರ ರೂ.ಗಳನ್ನು ವಶಪಡಿಸಿಕೊಂಡು ಕಮಿಟಿ ಮುಂದೆ ಹಾಜರು ಪಡೆಸಲು ಸೂಚಿಸಲಾಗಿದೆ.

95–ಸಂಡೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅನಧೀಕೃತವಾಗಿ ಸಾಗಿಸುತ್ತಿದ್ದ 0.11 ಗ್ರಾಂ ಗಾಂಜಾ (ರೂ.4 ಸಾವಿರ ಬೆಲೆಬಾಳುವ) ತೋರಣಗಲ್ಲು ಪೊಲೀಸ್ ಠಾಣೆಯಲ್ಲಿ ಎಪ್‌ಡಿಪಿ–ಎಸ್ ಆಕ್ಟ್ ಅಡಿ ಪ್ರಕರಣ ದಾಖಲಿಸಲಾಗಿದೆ. ಅಬಕಾರಿ ಇಲಾಖೆಯಿಂದ 8 ಪ್ರಕರಣ ಹಾಗೂ ಫ್ಲೈಯಿಂಗ್ ಸ್ಕ್ವಾಡ್ ಟೀಮ್(ಎಪ್‌ಎಸ್‌ಟಿ), ಸ್ಟಾಟಿಕ್ ಸರ್ವೈವೆಲೆನ್ಸ್ ಟೀಮ್(ಎಪ್–ಎಸ್‌ಟಿ) ಹಾಗೂ ಪೊಲೀಸ್ ಇಲಾಖೆ 2 ಸೇರಿದಂತೆ ಒಟ್ಟು 10 ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ.

## ಮತದಾನ ಪ್ರಮಾಣ ಹೆಚ್ಚಳಕ್ಕೆ ಎಲ್ಲ ಕ್ರಮ

# ಸುಗಮ ಮತದಾನಕ್ಕೆ ಸಹಕರಿಸಿ: ಸಿಇಒ ಹರ್ಷಲ್ ಭೊಯರ್

ಬೆಳಗಾವಿ: ಮುಂಬರುವ ವಿಧಾನಸಭಾ ಚುನಾವಣೆ–2023ರ ಹಿನ್ನೆಯಲ್ಲಿ ಮತದಾನ ಜಾಗೃತಿ ಕು–ರಿತು ಜಿಲ್ಲೆಯಾದ್ಯಾಂತ ವಿವಿಧ ಸ್ವೀಪ್ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ಕಳೆದ ಬಾರಿ ಕಡಿಮೆ ಮತದಾನ ವಾಗಿರುವ ಪ್ರದೇಶಗಳನ್ನು ಗುರುತಿಸಿ ಕಾಲೇಜು ವಿದ್ಯಾರ್ಥಿಗಳಿಗೆ ಚುನಾವಣೆಯ ಕುರಿತು ಚಿತ್ರಕಲಾ ಸ್ಪರ್ಧೆ ಪ್ರಬಂಧ ಸ್ಪರ್ಧೆ. ವಿವಿಧ ಸರ್ಕಾರಿ ಇಲಾಖೆಯ ಸಿಬ್ಬಂದಿಗಳಿಂದ ಬೈಕ್ ಜಾಥಾ, ಕ್ಯಾಂಡಲ್ ಜಾಥಾ, ಲಿಂಗತ್ವ ಅಲ್ಪ ಸಂಖ್ಯಾತರಿಗೆ ಹಾಗೂ ವಿಶೇಷ ಚೇತನರ ಬೈಕ್ ಜಾಥಾ ಮೂಲಕ ಮತಜಾಗೃತಿ ಕಾರ್ಯಕ್ರಮಗಳನ್ನು



ಹಮ್ಮಿಕೊಳ್ಳಲಾಗುತ್ತಿದೆ.

ಮೇ–10 ಮತದಾನ ದಿನದಂದು ವಿಶೇಷ ಚೇತನರು ಮತ್ತು ವಯಸ್ಕರ ಮತದಾರ–ರಿಗೆ ಯಾವುದೇ ತೊಂದರೆ ಯಾಗದಂತೆ ಕುಡಿಯುವ ನೀರಿನ ವ್ಯವಸ್ಥೆ, ಶ್ಯಾಮಿಯಾನ ಮೂಲಕ ನೆರಳಿನ ವ್ಯವಸ್ಥೆ ಹಾಗೂ ಶೌಚಾಲಯದ ವ್ಯವಸ್ಥೆ ವಿಶೇಷ ಚೇತನರಿಗೆ ವ್ಹಿಲ್ ಚೇರ್ ವ್ಯವಸ್ಥೆಯನ್ನು ಮಾಡಲಾಗುತ್ತಿದೆ.

ಕೆಲವು ವಿಶೇಷ ಚೇತನ–ರಿಗೆ ಮತ್ತು 80 ವರ್ಷ ಮೇಲ್ಪಟ್ಟ ಮತದಾನರಿಗೆ ಮನೆಯಲ್ಲಿ ಮತದಾನ ಮಾಡುವ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದ್ದು. ಮತದಾನದ ದಿನದಂದು ಚುನಾವಣಾ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಮತದಾರರ ಮನೆಗಳಿಗೆ ತೆರೆಳಿ ಮತದಾನ ಮಾಡುವ ಸಮಯದಲ್ಲಿ ವಿಡಿಯೋ ಚಿತ್ರೀಕರಣ ಮಾಡಿಕೊಂಡು ಮತದಾನ ಮಾಡಿಸುತ್ತಾರೆ.

ಜಿಲ್ಲೆಯಲ್ಲಿ ಅಂದಾಜು 1 ಲಕ್ಷದಷ್ಟು ಜನರು 80 ವರ್ಷ ಮೆಲ್ಪಟ್ಟ ಮತದಾರು ಮತ್ತು 40 ಸಾವಿರ ವಿಶೇಷ ಚೇತನರು ಮತದಾರರು ಇರುವದರಿಂದ ಅಂತಹ ಮತದಾರಿಗೆ ಮತದಾನದ ಮಾಡಲಿಕ್ಕೆ ಬೇಕಾಗುವ ಎಲ್ಲ ವ್ಯವಸ್ಥೆಯನ್ನು ಕಲ್ಪಿಸುವ ಜೊತೆಗೆ ಮಾಹಿತಿಯನ್ನು ನೀಡಲಾಗುತ್ತಿದೆ.

ಮತದಾರರು ಯಾವದೇ ಆಸೆ ಆಮಿಷಕ್ಕೆ ಒಳಗಾಗದೆ ತಮ್ಮ ಮತದಾನ ಹಕ್ಕನ್ನು ಚಲಾಯಿಸಬೇಕು.

ಸುಗಮ ಮತ್ತು ಸುವ್ಯವಸ್ಥೆಯಿಂದ ಮತದಾನ ಜರಗಲು ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿಯೊಂದಿಗೆ ಸಾರ್ವಜನಿಕರು ಮತ್ತು ಮತದಾರರು ಸಹಕರಿಸಬೇಕೆಂದು ಅಧ್ಯಕ್ಷರು ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೊಯರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಬು ಜಗಜೀವನ್ ರಾಮ್ ಅವರ 116ನೇ ಜಯಂತಿ ಆಚರಣೆ



ಬಳ್ಳಾರಿ: ಮಾಜಿ ಉಪ ಪ್ರಧಾನಿ, ಹಸಿರು ಕ್ರಾಂತಿ ಹರಿಕಾರ, ಹಾಗೂ ಮುತ್ಸದ್ದಿ ರಾಜಕಾರಣಿ, ಕಾರ್ಮಿಕ ಕಾನೂನುಗಳ ಹೋರಾಡಗಾರ ದಲಿತ ನಾಯಕ ,ಹಾಗು ನಮ್ಮ ಹೆಮ್ಮೆಯ ನಾಯಕ ಡಾ॥ ಬಾಬು ಜಗಜೀವನ್ ರಾಮ್ ಅವರ 116ನೇ ಜಯಂತಿ ಅಂಗವಾಗಿ ದಿನಾಂಕ: 05–04–2023 ರಂದು ಮಾರ್ಲಪಾಣೆ ಮಾಡಲಾಯಿತು.

ಈ ಸಂಧರ್ಬದಲ್ಲಿ ಬಳ್ಳಾರಿ ನಗರ ವಿಧಾನಸಭಾ ಕ್ಷೇತ್ರ ಅಭ್ಯರ್ಥಿ ಮುನ್ನಾ ಬಾಯ್ ಯವರು ಹಾಗು ಜಿಲ್ಲಾಧ್ಯಕರಾದ ಪಿ.ಎಸ್. ಸೋಮಲಿಂಗನ ಗೌಡ್ರ, ರಾಜ್ಯಕಾರ್ಯದರ್ಶಿ ಮೀನಳ್ಳಿ ತಾಯಣ್ಣ ಮತ್ತು ಡಿ. ವಿಜಯಕುಮಾರ್ ಬಳ್ಳಾರಿ ಜಿಲ್ಲಾ ಯುವ ಅಧ್ಯಕ್ಷರು ಹಾಗು ಬಳ್ಳಾರಿ ಜಿಲ್ಲಾ ವಕ್ತಾರರು ಹಾಗೂ ಪಕ್ಷದ ಹಿರಿಯ ಮುಖಂಡರು ಮತ್ತು ಕಾರ್ಯಕರ್ತರು ಸೇರಿದ್ದರು.

# ಸಿದ್ಧರಾಮ ಕಲ್ಮಠ ರಚಿತ ಪೈಲ್ವಾನ ಪಿಂಜಾರ್ ರಂಜಾನ್ ಸಾಬ್ ಕೃತಿ ಬಿಡುಗಡೆ

ಬಳ್ಳಾರಿ: ಹರಿದು ಹಂಚಿ ಹೋಗಿದ್ದ ಕನ್ನಡಿಗರನ್ನು, ಕನ್ನಡ ನಾಡನ್ನು ಒಟ್ಟುಗೂಡಿಸಿ ಕರ್ನಾಟಕ ಏಕೀಕರಣ ಮಾಡಿದ ಮಹನೀಯರ ಅನೇಕರು. ಆದರೆ, ಆ ವೇಳೆ ಈ ನಾಡು ನುಡಿಯ ಸಲುವಾಗಿ ಪ್ರಾಣದ ಹಂಗು ತೊರೆದು ಹೋರಾಟ ಮಾಡಿ ಹುತಾತ್ಮರಾದವರು ಪೈಲ್ವಾನ್ ಪಿಂಜಾರ ರಂಜಾನ್ ಸಾಬ್, ಅವರ ಹೆಸರು ಚಿರಸ್ಥಾಯಿಯಾಗಿ ಎಂದಿಗೂ ಉಳಿಯಬೇಕಿದೆ ಎಂದು ಸಾಮಾಜಿಕ ಕಾರ್ಯಕರ್ತ ವಾದಿರಾಜ ಸಾಮರಸ್ಯ ಹೇಳಿದರು.

ಅವರು ಇತ್ತೀಚೆಗೆ ನಗರದ ರಾಘವ ಕಲಾ ಮಂದಿರದಲ್ಲಿ ರಂಗತೋರಣವತಿಯಿಂದ ನಡೆದ ಸಿದ್ದರಾಮ ಕಲ್ಮಠ ರಚಿತ ಪೈಲ್ವಾನ ಪಿಂಜಾರ್ ರಂಜಾನ್



ಸಾಬ್ ಕೃತಿಯನ್ನು ಬಿಡುಗಡೆ ಮಾಡಿ ಮಾತನಾಡಿದರು. ಕರ್ನಾಟಕ ಏಕೀಕರಣದ ಹೋರಾಟದಲ್ಲಿ ರಂಜಾನ್ ಸಾಬ್ ಅವರದು ಕನ್ನಡಿಗರು ಮರೆಯಲಾಗದ ಹೋರಾಟವಾಗಿದೆ. ಅಂದಿನ ಹೋರಾಟದಲ್ಲಿ ಹುತಾತ್ಮರಾದ ರಂಜಾನ್ ಸಾಬ್ ರವರ ಹೆಸರನ್ನು ನಗರದ ಪ್ರಮುಖ ರಸ್ತೆಯೊಂದಕ್ಕೆ ಹೆಸ–ರಿಸಬೇಕೆಂದು ಅವರು ಒತ್ತಾಹಿಸಿದರು.

ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಬೆಂಗಳೂರು ವಿ.ವಿ ಪ್ರಾಧ್ಯಾಪಕರಾದ ಡಾ.ರಾಜಪ್ಪ ದಳವಾಯಿ ಮಾತನಾಡಿ ಬಳ್ಳಾರಿ ಕಲಾವಿದರ ತೊಟ್ಟಿಲಾಗಿದೆ, ಕನ್ನಡ ಮತ್ತು ಸಂಸ್ಕೃತಿಯ ಬೀಡಾಗಿದೆ. ಈ ಕನ್ನಡದ ಪರಿಸರವನ್ನು ಉಳಿಸಲು ಅಂದು ಕಾರಣೀಭೂತರಾದವರು ಹಲವಾರಾದರೆ, ಆ ಚಳುವಳಿಯಲ್ಲಿ ಹುತಾತ್ಮರಾದ ಏಕೈಕ ಕನ್ನಡಿಗ ಬಳ್ಳಾರಿಯ ಪೈಲ್ವಾನ್ ರಂಜಾನ್ ಸಾಬ್ ಎಂಬುದು ಈ ನಾಡು ನೆನಪಿಡಬೇಕೆಂದರು.

ಲೇಖಕ ಸಿದ್ಧರಾಮ ಕಲ್ಮಠ ಮಾತನಾಡಿ, ಕರ್ನಾಟಕದಲ್ಲಿ ಮನೆ ಮಾತಾಗಬೇಕಿದ್ದ ರಂಜಾನ್ ಸಾಬ್ ರವರ ಹೆಸರು ನೇಪಥ್ಯಕ್ಕೆ ಸರಿದಿರುವುದು ವಿಷಾದದ ಸಂಗತಿ, ಗಡಿಭಾಗದ ಈ ನೆಲ ಮೈಸೂರು ರಾಜ್ಯಕ್ಕೆ ಸೇರಿರುವುದು ರಂಜಾನ್ ಸಾಬ್ ಮತ್ತು ಅವರ ಜೊತೆ ಕನ್ನಡ ಪರ ಹೋರಾಟಗಾರರು ಕಾರಣ. ಅವರನ್ನು ಬಳ್ಳಾರಿಗರಷ್ಟೆ ಸ್ಮರಿಸಿದರೆ ಸಾಲದು ಇಡೀ ರಾಜ್ಯ ಅವರನ್ನು ಸ್ಮ–ರಿಸಬೇಕಾದ ಅಗತ್ಯವಿದೆ ಎಂದರು. ಈ ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರದ ವಿವಿಧ ಪ್ರಶಸ್ತಿಗಳಿಗೆ ಭಾಜನರಾದ ಪಿ ಅಬ್ದುಲ್ ಸಾಬ್, ಬಾಬಣ್ಣ, ಡಿ ಹುಸೇನ್ ಅವರನ್ನು ಸನ್ಮಾನಿಸಿ ಸತ್ಕರಿಸಲಾಯಿತು. ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಎಚ್ ಎಂ ಗುರುಸಿದ್ದಸ್ವಾಮಿ, ರಂಜಾನ್ ಸಾಬ್ ಅವರ ಭಾವಚಿತ್ರದ ಕ್ಯಾಲೆಂಡರನ್ನು ಬಿಡುಗಡೆ ಮಾಡಿದರು.

## ಕುಂದುಕೊರತೆಗಳ ವಿಚಾರಣೆ

ಬಳ್ಳಾರಿ: ಬಳ್ಳಾರಿ ನಗರದ 17ನೇ ವಾರ್ಡಿನ ಬಿಸಲಹಳ್ಳಿಗೆ ಕೆಆರ್‌ಪಿಪಿ ಬಳ್ಳಾರಿ ನಗರ ಅಭ್ಯರ್ಥಿ ಲಕ್ಷ್ಮಿ ಅರುಣ ಜನಾರ್ಧನ ರೆಡ್ಡಿ ಅವರು ತೆರಳಿ ಜನತೆಯ ಕುಂದುಕೊರತೆ ವಿಚಾರಿಸಿದರು.



ನಂತರ ಮಾತನಾಡಿದ ಅವರು, ಬಿಸಲಹಳ್ಳಿ ಜನತೆಯ ಅಭೂತಪೂರ್ವ ಬೆಂಬಲಕ್ಕೆ, ಪ್ರೀತಿ, ಅಭಿಮಾನಕ್ಕೆ ನಾನು ಚಿರಋಣಿಯಾಗಿದ್ದೇನೆ ಎಂದರು.

ಇದೇ ಸಂದರ್ಭದಲ್ಲಿ ಪ್ರಕಾಶ್, ಸರಸ್ವತಿ ಸೇರಿದಂತೆ ನೂರಾರು ಕಾರ್ಯಕರ್ತರು ಕಲ್ಯಾಣ ರಾಜ್ಯ ಪ್ರಗತಿ ಪಕ್ಷಕ್ಕೆ ಸೇರ್ಪಡೆಗೊಂಡರು.

ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಎಸ್.ಟಿ.ಘಟಕದ ಅಧ್ಯಕ್ಷರಾದ ಉಮಾರಾಜ್, ಜಿಲ್ಲಾ ಮಹಿಳಾ ಶಕ್ತಿ ಘಟಕದ ಅಧ್ಯಕ್ಷರಾದ ಹಂಪಿ ರಮಣಾ, ಸ್ಥಳೀಯ ಹಿರಿಯ ಮುಖಂಡರಾದ ಶಿವಾರೆಡ್ಡಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ರೋಡ್ ರೋಮಿಯೋಗೆ ಧರ್ಮದೇಟು

ಹಾಸನ : ಹಾಸನ ನಗರದ ಬಿಎಸ್‌ಎನ್–ಎಲ್ ಭವನದ ಸಮೀಪ ಕಾಲೇಜು ಮುಗಿಸಿ ಮನೆಗೆ ಹೊರಟಿದ್ದ ವಿದ್ಯಾರ್ಥಿನಿಯ ಕೈ ಹಿಡಿದು ಎಳೆದ ರೋಡ್ ರೋಮಿ ಯೋಗೆ



ಯುವತಿ ಸೇರಿದಂತೆ ಸಾರ್ವಜನಿಕರು ಧರ್ಮದೇಟು ನೀಡಿರುವ ಘಟನೆ ನಡೆದಿದೆ.

ಯುವತಿ ಹಾಸನದ ಪದವಿ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದಾಳೆ ಎಂದು ತಿಳಿದು ಬಂದಿದೆ. ಪ್ರತಿದಿನ ಹೀಗೆಯೇ ಯುವಕ ವಿದ್ಯಾರ್ಥಿನಿಯರನ್ನು ಚುಡಾಯಿಸುತ್ತಿದ್ದ ಎನ್ನಲಾಗಿದೆ.

ಯುವಕನಿಗೆ ಯುವತಿ ಮತ್ತು ಸಾರ್ವಜನಿಕರು ಧರ್ಮದೇಟು ನೀಡಿರುವ ವಿಡಿಯೋ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

ಯುವಕನ ಕಿರುಕುಳದಿಂದ ಬೇಸತ್ತ ಯುವತಿಯರು ನಿನ್ನೆ ಯುವಕನಿಗೆ ಚಳಿ ಬಿಡಿಸಿದ್ದಾರೆ. ಕೊನೆಗೆ ಸ್ಥಳೀಯರು ಯುವಕನನ್ನು ಪೊಲೀಸರಿಗೆ ಒಪ್ಪಿಸಿದ್ದಾರೆ.

ಸದ್ಯ ಈ ವಿಡಿಯೋ ವೈರಲ್ ಆಗಿದೆ. ಘಟನೆಯ ಸಂಬಂಧ ಹಾಸನ ಮಹಿಳಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

## ಕಾಂಗ್ರೆಸ್ ಮುಖಂಡರು ಸುರೇಶ್ ಬಾಬು ನೇತೃತ್ವದಲ್ಲಿ ಬಿಜೆಪಿ ಸೇರ್ಪಡೆ



ಬಳ್ಳಾರಿ: ಭಾರತೀಯ ಜನತಾ ಪಾರ್ಟಿಯ ಪಕ್ಷ ಸಿದ್ಧಾಂತ ಮತ್ತು ಟಿ ಹೆಚ್ ಸುರೇಶ್ ಬಾಬು ಅಧಿಕಾರ ಅವಧಿಯ ಜನಪ್ರಿಯ ಯೋಜನೆಗಳಿಂದ ಪ್ರೇರಿತರಾದ ಗೋನಾಳು ಗ್ರಾಮದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಭಾರತಿಯ ಜನತಾ ಪಕ್ಷಕ್ಕೆ ಸೇರ್ಪಡೆಯಾದರು.ನೂತನವಾಗಿ ಪಕ್ಷ ಸೇರ್ಪಡೆಯಾದ ಎಲ್ಲರನ್ನೂ ಅಭಿನಂದಿಸಲಾಯಿತು.

ಗ್ರಾಮದ ಪ್ರತಿಯೊಬ್ಬ ಕಾರ್ಯಕರ್ತರು ಒಟ್ಟಾಗಿ ಸೇರಿ ಪಕ್ಷ ಸಂಘಟನೆ ಮಾಡಬೇಕೆಂದು ತಿಳಿಸಿ, ಈ ಹಿಂದೆ ಕ್ಷೇತ್ರದಲ್ಲಿ ಮಾಡಿರುವ ಅಭಿವೃದ್ಧಿ ಯೋಜನೆ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಿ ಶೀಘ್ರದಲ್ಲಿ ಎದುರಾಗಲಿರುವ ಚುನಾವಣೆಯಲ್ಲಿ ನಮ್ಮ ಕಂಪ್ಲಿ ಕ್ಷೇತ್ರದಲ್ಲಿ ಮತ್ತೊಮ್ಮೆ ಕಮಲ ಅರಳುವಂತೆ, ಪ್ರತಿಯೊಬ್ಬರೂ ಕೆಲಸ ಮಾಡಿ ತಮ್ಮ ಗ್ರಾಮದ ಅಭಿವೃದ್ಧಿಗೆ ಶ್ರಮಿಸುವಂತೆ ಕರೆ ನೀಡಿದರು.

## ಟಿ ಹೆಚ್ ಸುರೇಶ್ ಬಾಬು ನೇತೃತ್ವದಲ್ಲಿ ಬಿಜೆಪಿ ಪಕ್ಷ ಸೇರ್ಪಡೆ



ಬಳ್ಳಾರಿ: ಭಾರತೀಯ ಜನತಾ ಪಾರ್ಟಿಯ ಪಕ್ಷ ಸಿದ್ಧಾಂತ ಮತ್ತು ಟಿ ಹೆಚ್ ಸುರೇಶ್ ಬಾಬು ಅಧಿಕಾರ ಅವಧಿಯ ಜನಪ್ರಿಯ ಯೋಜನೆಗಳಿಂದ ಪ್ರೇರಿತರಾದ ಕಂಪ್ಲಿ ಪಟ್ಟಣದ 10 ನೆ ವಾರ್ಡ್ ವಿರುಪಾಕ್ಷಿ,ಮಾರುತಿ ನಗರದ ಬಿ ರಮೇಶ್, ಮತ್ತು ಗೆಳೆಯರ ಬಳಗ ಹಾಗೂ ಸಣಾಪುರ ಗ್ರಾಮದ ಕನಕಗಿರಿ ರೇಣುಕಪ್ಪ ಇವರು ತಮ್ಮ ಬೆಂಬಲಿಗರೊಂದಿಗೆ ಕಾಂಗ್ರೆಸ್ ಪಕ್ಷ ತೊರೆದು ಭಾರತಿಯ ಜನತಾ ಪಕ್ಷಕ್ಕೆ ಸೇರ್ಪಡೆಯಾದರು.

ನೂತನವಾಗಿ ಪಕ್ಷ ಸೇರ್ಪಡೆಯಾದ ಎಲ್ಲರನ್ನೂ ಅಭಿನಂದಿಸಲಾಯಿತು ಗ್ರಾಮದ ಪ್ರತಿಯೊಬ್ಬ ಕಾರ್ಯಕರ್ತರು ಒಟ್ಟಾಗಿ ಸೇರಿ ಪಕ್ಷ ಸಂಘಟನೆ ಮಾಡಬೇಕೆಂದು ತಿಳಿಸಿ, ಈ ಹಿಂದೆ ಕ್ಷೇತ್ರದಲ್ಲಿ ಮಾಡಿರುವ ಅಭಿವೃದ್ಧಿ ಯೋಜನೆ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಮಾಡಿ ಶೀಘ್ರದಲ್ಲಿ ಎದುರಾಗಲಿರುವ ಚುನಾವಣೆಯಲ್ಲಿ ಕಂಪ್ಲಿ ಕ್ಷೇತ್ರದಲ್ಲಿ ಮತ್ತೊಮ್ಮೆ ಕಮಲ ಅರಳುವಂತೆ, ಪ್ರತಿಯೊಬ್ಬರೂ ಕೆಲಸ ಮಾಡಿ ತಮ್ಮ ಗ್ರಾಮದ ಅಭಿವೃದ್ಧಿಗೆ ಶ್ರಮಿಸುವಂತೆ ಕರೆ ನೀಡಿದರು.

## ನಿರ್ಭಯಾ ನಿಧಿ: ಸಾಮೂಹಿಕ ಅತ್ಯಾಚಾರಕ್ಕೊಳಗಾದ ಬಾಂಗ್ಲಾದೇಶದ ಮಹಿಳೆಗೆ ಸರ್ಕಾರದಿಂದ ಗರಿಷ್ಠ ಪರಿಹಾರ

ಬೆಂಗಳೂರು: ಸಾಮೂಹಿಕ ಅತ್ಯಾಚಾರಕ್ಕೊಳಗಾದ ವಿದೇಶಿ ಮಹಿಳೆಯೊಬ್ಬರಿಗೆ ದೇಶದಲ್ಲಿ ಇದೇ ಮೊದಲ ಬಾರಿಗೆ ನಿರ್ಭಯಾ ನಿಧಿಯಡಿ ಗರಿಷ್ಠ ಮೊತ್ತದ ಪರಿಹಾರ ಹಣವನ್ನು ನೀಡುವಂತೆ ನ್ಯಾಯಾಲಯ ಆದೇಶಿಸಿದೆ.

2021ರ ಮೇ ನಲ್ಲಿ ಬಾಂಗ್ಲಾದೇಶದ ಮಹಿಳೆಯರು ಸಾಮೂಹಿಕ ಅತ್ಯಾಚಾರಕ್ಕೊಳಗಾಗಿದ್ದರು. ಅಂತರಾಷ್ಟ್ರೀಯ ಮಾನವ ಕಳ್ಳಸಾಗಣೆ ಜಾಲದಲ್ಲಿ ಸಿಲುಕಿಕೊಂಡಿದ್ದ ಮಹಿಳೆ ಲೈಂಗಿಕ ಶೋಷಣೆ ಮತ್ತು ಸಾಮೂಹಿಕ ಅತ್ಯಾಚಾರಕ್ಕೊಳಗಾಗಿದ್ದರು. ಘಟನೆ ಬಳಿಕ ಕಳೆದ ವರ್ಷ ಮೇ ತಿಂಗಳಲ್ಲಿ ಮಹಿಳೆ ತನ್ನ ದೇಶಕ್ಕೆ ವಾಪಸ್ಸಾಗಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ವಿಚಾರಣಾ ನ್ಯಾಯಾಲಯವು ನಿರ್ಭಯಾ ನಿಧಿಯಡಿ ಪರಿಹಾರ ನೀಡುವಂತೆ ಸರ್ಕಾರಕ್ಕೆ ಸೂಚಿಸಿದೆ.

ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯವು ಮೇ 2022 ರ ತನ್ನ ಆದೇಶದಲ್ಲಿ, "ಅಪರಾಧದ ತೀವ್ರತೆಯನ್ನು ಅನುಸರಿಸಿ ಸಂತ್ರಸ್ತ ಮಹಿಳೆಯು ಓಂಐಖಂ (ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ) ಅಡಿಯಲ್ಲಿ 7,00,000 ರೂ.ಗಳ ಪರಿಹಾರಕ್ಕೆ ಅರ್ಹಳಾಗಿದ್ದಾಳೆ. . ಸೆಕ್ಷನ್ 357ಂ ಅಡಿಕಅ (ತಿದ್ದುಪಡಿ ಕಾಯಿದೆ 1973) ಅಡಿಯಲ್ಲಿ ಒದಗಿಸಲಾದ 'ಮಹಿಳಾ ಸಂತ್ರಸ್ತರಿಗೆ ಪರಿಹಾರ ಯೋಜನೆ'ಯಿಂದ ರಾಜ್ಯ ಸರ್ಕಾರವು ಸಂತ್ರಸ್ತ ಮಹಿಳೆಗೆ ರೂ 7,00,000 ಪರಿಹಾರವನ್ನು ಒದಗಿಸಬೇಕು. ಪರಿಹಾರ ಒದಗಿಸಲು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದೆ. ಇದೇ ವೇಳೆ ಮಹಿಳೆಯ ಸುರಕ್ಷತೆಯ ಬಗ್ಗೆ ಗಮನಹರಿಸಿದ ನ್ಯಾಯಾಲಯವು, ವೀಡಿಯೋ ಕಾನ್ಫರೆನ್ಸ್ ಮೂಲಕ ಸಂತ್ರಸ್ತ ಮಹಿಳೆಯ ಉಪಸ್ಥಿತಿಯೊಂದಿಗೆ ಆಕೆಯ ಬ್ಯಾಂಕ್ ಖಾತೆಗೆ ಪರಿಹಾರ ಹಣವನ್ನು ಇ ಪಾವತಿ ಮಾಡುವಂತೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಕ್ಕೆ ಆದ–'ೀಶಿಸಿತು. ಲಾಭ ರಹಿತ ಹಾಗೂ ಮಾನವ ಹಕ್ಕುಗಳ ಸಂಘಟನೆಯಾಗಿರುವ ತಲಾಶ್ ಅಸೋಸಿಯೇಷನ್ ಸಂಸ್ಥಾಪಕ ಅಧ್ಯಕ್ಷೆ ಸೀಮಾ ದಿವಾನ್ ಅವರು ಮಾತನಾಡಿ, ಸಂತ್ರಸ್ತ ಮಹಿಳೆಯನ್ನು ಮರಳಿ ಆಕೆಯ ದೇಶಕ್ಕೆ ರವಾನಿಸಲು ಪೊಲೀಸರಿಗೆ ಸಹಾಯ ಮಾಡಲಾಯಿತು. ನಿರ್ಭಯಾ ನಿಧಿಯಡಿಯಲ್ಲಿ ಸಂತ್ರಸ್ತ ಮಹಿಳೆಗೆ ಪರಿಹಾರ ದೊರೆಯುವಂತೆ ಮಾಡಲಾಗಿದೆ. 2014–2019 ನಡುವೆ ನಗರದಲ್ಲಿ ಬೆಂಗಳೂರು ಗ್ರಾಮಾಂತರ, ಬೆಳಗಾವಿ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಅಕ್ರಮವಾಗಿ ನೆಲೆಸಿರುವ ಬಾಂಗ್ಲಾದೇಶ ಪ್ರಜೆಗಳ ಪತ್ತೆಗೆ ಪೊಲೀಸರಿಗೆ ನೆರವು ನೀಡಲಾಗಿತ್ತು ಎಂದು ಹೇಳಿದ್ದಾರೆ.

## ಬೆಂಗಳೂರು: ವಿಮಾನದಲ್ಲಿ ನಗರಕ್ಕೆ ಬಂದು ದರೋಡೆ ಮಾಡುತ್ತಿದ್ದ ಇಬ್ಬರು ಖದೀಮರ ಬಂಧನ

ಬೆಂಗಳೂರು: ವಿಮಾನದಲ್ಲಿ ನಗರಕ್ಕೆ ಬಂದು ದರೋಡೆ ಮಾಡುತ್ತಿದ್ದ ಇಬ್ಬರು ಖದೀಮರನ್ನು ಅಮೃತಹಳ್ಳಿ ಪೊಲೀಸರು ಬಂಧನಕ್ಕೊಳಪಡಿಸಿದ್ದಾರೆ.

ಬಂಧಿತರನ್ನು ಸಲೀಂ ರಫೀಕ್ ಶೇಖ್ (ಅಲಿಯಾಸ್ ಬಾಂಬೆ ಸಲೀಂ 46), ಯಾಸಿನ್ ಮಕ್ಬುಲ್ ಖಾನ್ (47) ಎಂದು ಗುರುತಿಸಲಾಗಿದೆ.

ಬಂಧಿತ ಆರೋಪಿಗಳಿಂದ 11 ಮನೆ ಕಳ್ಳತನ ಪ್ರಕರಣಗಳಿಗೆ ಸಂಬಂಧಿಸಿದಂತೆ ಸುಮಾರು 67 ಲಕ್ಷ ರೂಪಾಯಿ ಮೌಲ್ಯದ ಚಿನ್ನ, ಬೆಳ್ಳಿ ಮತ್ತು ಇತರ ಬೆಲೆಬಾಳುವ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ.

ಆರೋಪಿಗಳು ಅಮೃತಹಳ್ಳಿ, ಕೊಡಿಗೇಹಳ್ಳಿ, ಎಂಐಸಿಎ ಲೇಔಟ್, ಆರ್‌ಆರ್‌ನಗರ, ತುಮಕೂರು, ಬೆಳಗಾವಿಯಲ್ಲಿ ಮನೆ ಕಳ್ಳತನ ಮಾಡಿದ್ದರು. ಇಬ್ಬರ ಪೈಕಿ ಖಾನ್ ಸುಮಾರು 35 ಪ್ರಕರಣಗಳಲ್ಲಿ ಭಾಗಿಯಾಗಿದ್ದು, ಜಾಮೀನು ಮೇಲೆ ಹೊರ ಬಂದಿದ್ದ.

ಪೊಲೀಸರು ನೀಡಿರುವ ಮಾಹಿತಿಗಳ ಪ್ರಕಾರ, ಆರೋಪಿ ಸಲೀಂ ರೀಲ್ಸ್ ಸ್ಟಾರ್ ಆಗಿದ್ದು, ಮನೆಗಳ್ಳತನ ಕೃತ್ಯದಿಂದ ಸಂಪಾದಿಸಿದ ಹಣದಲ್ಲಿ ಈತ ಮೋಜು ಮಸ್ತಿ ನಡೆಸುತ್ತಿದ್ದ. ಕದ್ದ ಒಡವೆಗಳನ್ನು ಧರಿಸಿಕೊಂಡು ಇನ್ ಸ್ಟಾ ಗ್ರಾಮ್ ನಲ್ಲಿ ರೀಲ್ಸ್ ಮಾಡುತ್ತಿದ್ದ. ಈತ ಯೂಟ್ಯೂಬ್ ಚಾನೆಲ್ ಕೂಡ ಓಪನ್ ಮಾಡಿದ್ದಾನೆಂದು ತಿಳಿಸಿದ್ದಾರೆ.

ಆರೋಪಿಗಳು ಜನವರಿ 23 ರಂದು ಬಿ ಸೆಕ್ಟರ್‌ನ ಅಮೃತನಗರದಲ್ಲಿರುವ ಆರ್ ಗಿರೀಶ್ ಎಂಬುವವರ ಮನೆಯಲ್ಲಿ ಕಳ್ಳತನ ಮಾಡಿದ್ದರು. ಈ ಸಮಯದಲ್ಲಿ ಗಿರೀಶ್ ಅವರು ಕುಟುಂಬ ಸಮೇತರಾಗಿ ತಿರುಪತಿಗೆ ತೆರಳಿದ್ದ ವೇಳೆ ಕಳ್ಳತನ ಮಾಡಿದ್ದರು.

ಎಲೆಕ್ಟ್ರಾನಿಕ್ ಸಿಟಿಯ ಖಾಸಗಿ ಸಂಸ್ಥೆಯೊಂದರಲ್ಲಿ ಮ್ಯಾನೇಜರ್ ಆಗಿ ಗಿರೀಶ್ ಅವರು ಕಾರ್ಯನಿರ್ವಹಿಸುತ್ತಿದ್ದು, ಮನೆಯಲ್ಲಿ ಕಳ್ಳತನವಾದ ಹಿನ್ನೆಲೆಯಲ್ಲಿ ಗಿರೀಶ್ ಅವರು ಅಮೃತಹಳ್ಳಿ ಪೊಲೀಸರಿಗೆ ದೂರು ನೀಡಿದ್ದರು.

ಸುತ್ತಮುತ್ತಲಿನ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಿದಾಗ ಅವರಿಬ್ಬರು ವೃತ್ತಿಪರ ಕಳ್ಳರು ಎಂದು ತಿಳಿದುಬಂದಿತ್ತು,

## ಹೆಚ್.ಎಸ್.ಕೆ ಪಾಲಿಟೆಕ್ನಿಕ್‌ನಲ್ಲಿ ಐ.ಟಿ.ಐ ಮತ್ತು ಡಿಪ್ಲೋಮಾ ಪೂರೈಸಿರುವ ಅಭ್ಯರ್ಥಿಗಳಿಗೆ ಉದ್ಯೋಗ ಮೇಳ

ಬಳ್ಳಾರಿ: ಬಳ್ಳಾರಿ ನಗರದಲ್ಲಿರುವ ವೀವಿ ಸಂಘದ ಅಂಗ ಸಂಸ್ಥೆಯಾದ ಹಾನಗಲ್ ಶ್ರೀ ಕುಮಾರೇಶ್ವರ ಪಾಲಿಟೆಕ್ನಿಕ್ ತಾಂತ್ರಿಕ ವಿದ್ಯಾಲಯದಲ್ಲಿ ದಿನಾಂಕ 08.04.2023 ಮತ್ತು 09.04.2023 ಮತ್ತು ಐ.ಟಿ.ಐ ಡಿಪ್ಲೋಮಾ ಪೂರೈಸಿರುವ ಅಭ್ಯರ್ಥಿಗಳಿಗೆ ಉದ್ಯೋಗ ಮೇಳವನ್ನು ಕಿರ್ಲೋಸ್ಕರ್ ಟೊಯೋಟಾ ಮಷಿನರಿ ಪ್ರೈವೇಟ್ ಲಿಮಿಟೆಡ್ ಇವರ ಸಹಭಾಗಿತ್ವದಲ್ಲಿ ಆಯೋಜಿಸಲಾಗಿದೆ.



ದಿನಾಂಕ :08.04.2023 ರಂದು ಬೆಳಗ್ಗೆ 10.30 ಕ್ಕೆ ಆರಂಭಿಸಲಾಗುವುದು, ಕ್ರಮವಾಗಿ ಐ.ಟಿ.ಐ ನ ವೆಲ್ಡರ್, ಎಲೆಕ್ಟ್ರಿಷನ್ ಮತ್ತು ಟರ್ನರ್ ವಿಭಾಗದ ಅಭ್ಯರ್ಥಿಗಳನ್ನು ಸಂದರ್ಶಿಸಲಾಗುವುದು.

ದಿನಾಂಕ :09.04.2023 ರಂದು ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಕ್ರಮವಾಗಿ ಎಲೆಕ್ಟ್ರಿಕಲ್, ಮೆಕ್ಯಾನಿಕಲ್ ಮತ್ತು ಆಟೋಮೊಬೈಲ್ ವಿಭಾಗದ ವಿದ್ಯಾರ್ಥಿಗಳನ್ನು ಸಂದರ್ಶಿಸಲಾಗುವುದು.

ಸಂದರ್ಶನಕ್ಕೆ ಬರುವವರು ಸ್ವವಿವರವುಳ್ಳ ರೆಸ್ಯುಮ್, 2 ಭಾವಚಿತ್ರ ಆಧಾರ್ ಕಾರ್ಡ್,ವಿದ್ಯಾರ್ಹತೆಯ ಮೂಲ ದಾಖಲಾತಿ ಮತ್ತು ಅದರ ಜೆರಾಕ್ಸ್ ತರಬೇಕೆಂದು ಕಾಲೇಜಿನ ಆಡಳಿತ ಮಂಡಳಿಯ ಅಧ್ಯಕ್ಷರಾದ ಹೆಚ್. ಎಂ.ಕಿರಣ್ ಕುಮಾರ್ ಮಂಡಳಿಯ ಸದಸ್ಯರಾದ ಹಲಕುಂದಿ ವಿಜಯಕುಮಾರ್,ಹಳೆಕೋಟೆ ವೀರನಗೌಡ, ಸಂಗನಕಲ್ ಚಂದ್ರಶೇಖರ್ ಮತ್ತು ಪ್ರಾಚಾರ್ಯರಾದ ಡಾ. ಟಿ.ಎಂ. ವೀರಗಂಗಾಧರಸ್ವಾಮಿ ಉದ್ಯೋಗಾಧಿಕಾರಿಯಾದ ಕುಲ್ಲಯ್ಯ ಸ್ವಾಮಿಯವರು ಪ್ರಕಟಣೆಯಲ್ಲಿ ತಿಳಿಸಿದರು.

# ಹಸಿರು ಕ್ರಾಂತಿಯ ಹರಿಕಾರ ಜಗಜೀವನ್‌ರಾಮ್: ವೆಂಕಟೇಶ್ ಹೆಗಡೆ

ಬಳ್ಳಾರಿ: ದೇಶದ ಉಪಪ್ರಧಾನಿಗಳು ಹಾಗೂ ಹಸಿರುಕ್ರಾಂತಿಯ ಹ–ರಿಕಾರರೆಂದು ಖ್ಯಾತರಾದ ಡಾ.ಬಾಬುಜಗ ಜೀವನ್‌ರಾಮ್‌ರವರ ಜನ್ಮದಿನದ ಅಂಗವಾಗಿ, ನಗರದ ನಲ್ಲಚೆರವು ಪ್ರದೇಶದಲ್ಲಿರುವ ಡಾ. ಬಾಬು ಜಗಜೀವನ್ ರಾಮ್ ಭವನದ ಆವರಣದಲ್ಲಿರುವ ಅವರ ಪ್ರತಿಮೆಗೆ ದಲಿತ ಸಮುದಾಯದ ಹಿರಿಯ ಧುರೀಣರು, ಮುಖಂಡರು ಮಾಲಾರ್ಪಣೆ ಮಾಡಿ ಗೌರವ ನಮನಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ದಲಿತ ಸಮುದಾಯದ ಯುವ ಉತ್ಸಾಹಿ ಮುಖಂಡರು, ವಕೀಲರು ಹಾಗೂ ಕೆಪಿಸಿಸಿ ರಾಜ್ಯ ಮಾಧ್ಯಮ ವಕ್ತಾರರು ಮತ್ತು ಪ್ರಚಾರ ಸಮಿತಿಯ ರಾಜ್ಯ ಜಂಟಿ ಸಂಯೋಜ–ಕರೂ ಆದ ವೆಂಕಟೇಶ್ ಹೆಗಡೆ ಅವರು,



ಡಾ॥ಬಾಬು ಜಗಜೀವನ್‌ರಾಮ್‌ರವರು ಅಂದಿನ ಸಂದರ್ಭದಲ್ಲಿ ದೇಶದ ತುಂಬಾ ಸಣ್ಣ, ಅತಿ ಸಣ್ಣ ರೈತರು ಕೃಷಿ ಚಟುವಟಿ–ಕೆಗಳಿಗೆ ಪ್ರೋತ್ಸಾಹ ನೀಡುವ ಮೂಲಕ ದೇಶದ ಆಹಾರ ಉತ್ಪಾದನೆ ಹೆಚ್ಚಿಸಲು ಕಾರಣೀಭೂತರಾಗಿ ತನ್ಮೂಲಕ ಹಸಿರು ಕ್ರಾಂತಿಯ ಹರಿಕಾರರಾದರು.

ಅಲ್ಲದೇ, ಕ್ಷಿರೋತ್ಪನ್ನದಲ್ಲಿ ಗಣನೀಯ ಪ್ರಮಾಣದಲ್ಲಿ ಅಭಿವೃದ್ಧಿ ಸಾಧಿಸಲು ಪಶು ಸಂಗೋಪನೆಯನ್ನು ಆರ್ಥಿಕ ಕಸುಬನ್ನಾಗಿಸಲು ಕಾರ್ಯಪ್ರವೃತ್ತರಾದರು.

ಅದರ ಭಾಗವಾಗಿ ಗುಜರಾತ್, ರಾಜಸ್ಥಾನ, ಈಗಿನ ಕರ್ನಾಟಕದ KMF ಡೈರಿಯು ಅವರ ಪರಿಶ್ರಮದಿಂದ ಅಸ್ತಿತ್ವಕ್ಕೆ ಬಂದು ಕ್ಷೀರ ಕ್ರಾಂತಿಗೆ ಸೋಪಾನವಿಟ್ಟ ಮಹಾನ್ ಚೇತನರು ಬಾಬು ಜಗಜೀವನ್‌ರಾಮ್‌ರವರು ಎಂದು ಹೇಳಿದರು.

ದೇಶದ ಬರಪ್ರದೇಶಗಳಲ್ಲಿ ಎಣ್ಣೆ ಬೀಜ, ದ್ವಿದಳ ಧಾನ್ಯಗಳು ಬೆಳೆಯಲು ಡಾ.ಬಾಬುಜಗಜೀವನ್ ರಾಮ್‌ರವರು ಪ್ರೋತ್ಸಾಹ ನೀಡಿ ಹಳದಿ ಕ್ರಾಂತಿಗೆ ಕಾರಣ–ರಾದರು ಎಂದು ವೆಂಕಟೇಶ್ ಹೆಗಡೆ ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರುಗಳಾದ ಬಿ.ಕೆ. ಅನಂತ್ ಕುಮಾರ್, ಕವಿಯತ್ರಿ ಎನ್.ಡಿ.ವೆಂಕಮ್ಮ, ಟಿ.ಆನಂದ್, ಮುಕ್ಕಣ್ಣ , ಪರಶುರಾಮ್, ಗೋಪಾಲ್, ಧನುಂಜಯ ಅರುಣಾಚಲಂ, ನವತೇಜ್ ಹೆಗಡೆ ಮುಂತಾದವರು ಉಪಸ್ಥಿತರಿದ್ದರು.

## ಉಚಿತ ತಪಾಸಣಾ ಶಿಬಿರ

ಬೆಳಗಾವಿ: ಕೆ.ಎಲ್.ಇ. ಆಯುರ್ವೇದ ಆಸ್ಪತ್ರೆ, ಶಹಾಪೂರ–ಬೆಳಗಾವಿಯಲ್ಲಿ ಕ್ಯಾನ್ಸರ್ ಸಂಬಂಧಿತರೋಗದಿಂದ ಬಳಲುವ ರೋಗಿಗಳಿಗೆ ದಿನಾಂಕ 06/04/2023ರಂದು ಗುರುವಾರ ದಿವಸ ಮುಂಜಾನೆ 9.00ರಿಂದ 1.30 & 02.30ರಿಂದ 5.00 ರವರೆಗೆ ಉಚಿತ ತಪಾಸಣೆ ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಈ ಶಿಬಿರದಲ್ಲಿ ರಸಾಯುಕ್ಯಾನ್ಸರ್‌ಕೇರ್ ಪುಣೆ ವೈದ್ಯರು ತಪಾಸಣೆ ಮಾಡಿ ಸೂಕ್ತ ಸಲಹೆ ನೀಡಲಿದ್ದಾರೆ.

ಆಸಕ್ತರು ಈ ಶಿಬಿರದ ಪ್ರಯೋಜನೆಯನ್ನು ಪಡೆದುಕೊಳ್ಳಬೇಕೆಂದು ಆಸ್ಪತ್ರೆಯ ವೈದ್ಯಕೀಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಅಪರಿಚಿತ ವ್ಯಕ್ತಿಯ ಮೃತದೇಹ ಪತ್ತೆ



ಬೆಳಗಾವಿ: ಸಾಂಬ್ರಾ ರೈಲ್ವೆ ನಿಲ್ದಾಣದ ಓಲ್ಡ ಗಾಂಧಿನಗರ ರೈಲ್ವೆ ಗೇಟ್ ಬಳಿ ಏ.4, 2023 ರಂದು ಅಪರಿಚಿತ ವ್ಯಕ್ತಿಯ ಮೃತದೇಹ ಪತ್ತೆಯಾಗಿರುತ್ತದೆ.

ಸದರಿ ವ್ಯಕ್ತಿಯ ವಯಸ್ಸು ಅಂದಾಜು 30 ರಿಂದ 35 ವರ್ಷವಿದ್ದು, ಎತ್ತರ 5,6 ಇಂಚ, ಕೆಂಪು ಮೈ ಬಣ್ಣ, ಸದೃಡ ಮೈಕಟು , ಉದ್ದು ಮುಖ, ತಲೆಯಲ್ಲಿ 2" ಕಪ್ಪು ಕೂದಲು, ಹಾಗೂ ಗುಲಾಬಿ ಬಣ್ಣದ ಬಿಳಿ ಚುಕ್ಕೆಯುಳ್ಳ ಫುಲ್ ಶರ್ಟ, ನೀಲಿ ಬಣ್ಣದ ಫುಲ್ ಪ್ಯಾಂಟ್, ಕೊರಳಲ್ಲಿ ಕಪ್ಪು ಬಣ್ಣದ ದಾರ ಹಸಿರು ತಾಯತ, ಎಡಗೈನಲ್ಲಿ ಕಪ್ಪು ದಾರ ಇರುತ್ತದೆ.

ಈ ರೀತಿ ಚಹರೆಯುಳ್ಳ ಮೃತನ ರಕ್ತ ಸಂಬಂಧಿಗಳು ಯಾರಾದರೂ ಪತ್ತೆಯಾದರೆ ಬೆಳಗಾವಿ ರೈಲ್ವೆ ಪೋಲಿಸ್ ಠಾಣೆ ದೂರವಾಣಿ ಸಂಖ್ಯೆ: (0831) 2405273 ಪಿ.ಎಸ್.ಐ ಮೊಬೈಲ ನಂ:9480802127 ಅಥವಾ ರೈಲ್ವೆ ಪೋಲೀಸ್ ನಿಯಂತ್ರಣ ಕೊಠಡಿ ದೂರವಾಣಿ ಸಂಖ್ಯೆ. (080) 22871291 ಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ರೈಲ್ವೆ ಪೊಲೀಸ್ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೇಂದ್ರೀಯ ವಿದ್ಯಾಲಯ: 1 ನೇ ತರಗತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ಕೇಂದ್ರೀಯ ವಿದ್ಯಾಲಯ ಸಂಘಟನೆಯು 2023–2024 ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ 1ನೇ ತರಗತಿ ಪ್ರವೇಶಕ್ಕಾಗಿ ಅಧಿಸೂಚನೆಯನ್ನು ಪ್ರಾರಂಭಿಸಲಾಗಿದೆ.

ಬೆಳಗಾವಿ ಕ್ಯಾಂಪ್ ಕೇಂದ್ರೀಯ ವಿದ್ಯಾಲಯ ನಂ.2 ಹೊಸ ಪ್ರವೇಶಕ್ಕಾಗಿ 2 ನೇ ತರಗತಿಯಿಂದ 9 ನೇ ತರಗತಿವರಗೆ ಯಾವುದೇ ಪ್ರವೇಶಾತಿಗಳು ಖಾಲಿ ಇರುವುದಿಲ್ಲ.

ಮಾ.27, 2023 ರಿಂದ ಏ.17,2023 ರ ವರಗೆ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸುವವರು ಆನ್ ಲೈನ್ ಕಿಂಕ್ https://kvsonlineadmission.kvs.gov.in/apps ಗೆ ಭೇಟಿ ನೀಡಬಹುದು. ಹಾಗೂ ಪ್ರವೇಶ ಮಾರ್ಗ ಸೂಚಿಗಳಿಗಾಗಿ ಮತ್ತು ಹೆಚ್ಚಿನ ಮಾಹಿತಿಗಾಗಿ ವೆಬ್ ಸೈಟ್ https://kvs-sangathan.nic.in ಅನ್ನು ಸಂಪರ್ಕಿಸಬಹುದು ಎಂದು ಕೇಂದ್ರೀಯ ವಿದ್ಯಾಲಯದ ಪ್ರಾಂಶುಪಾಲರಾದ ಎಸ್ ಎಸ್ ರಾಜಾ ಅವರು ಪ್ರಕಣೆಯಲ್ಲಿ ತಿಳಿಸಿದ್ದಾರೆ.

## ಶರಣಪ್ಪ ಕಣಮೇಶ್ವರ ನಿಧನಕ್ಕೆ ಸಂತಾಪ

ತಾಳಿಕೋಟೆ: ಕರ್ನಾಟಕ ರಾಜ್ಯ ತಳವಾರ ಮಹಾಸಭಾ ಗೌರವ ನಿರ್ದೇಶಕರು, ಸಮೂದಾಯದ ಹಿರಿಯ ಚಿಂತಕರು, ಅನುಭವಿ ಮಾರ್ಗದರ್ಶಕರಾಗಿದ್ದ ದೇವಣಗಾಂವ ಗ್ರಾಮದ ಶರಣಪ್ಪ ಕಣಮೇಶ್ವರ ಅವರು ಬುಧವಾರರಂದು ಹೃದಯಾಘಾತದಿಂದ ನಿಧನರಾಗಿದ್ದಕ್ಕೆ ತಾಳಿಕೋಟೆಯ ಶಿವಶರಣ ಅಂಬಿಗೇರ ಚೌಡಯ್ಯ ವಧುವರರ ಮಾಹಿತಿ ಕೇಂದ್ರದ ಸಂಚಾಲಕ ಮೋಹನ ಅಂಬಿಗೇರ ಅವರು ಸಂತಾಪ ಸೂಚಿಸಿದ್ದಾರೆ.

ಶರಣಪ್ಪ ಕಣಮೇಶ್ವರ ಅವರು ತಳವಾರ ಸಮೂದಾಯ ಏಳಿಗೆಗಾಗಿ ಧ್ವನಿ ಎತ್ತಿದ್ದಂತಹ ಮಹಾನ್ ನಾಯಕರಾಗಿದ್ದರು ಸಮಾಜದ ಬಗ್ಗೆ ಚಿಂತನೆಯನ್ನು ಹೊಂದಿದವರಾಗಿದ್ದರು ಅವರ ಅಗಲಿಕೆ ಸಮಾಜಕ್ಕೆ ತುಂಬಲಾರದ ನಷ್ಟ ಉಂಟಾಗಿದೆ ಎಂದು ಅವರು ತಿಳಿಸಿದ್ದಾರೆ.

## ಸಿಸಿ ಕ್ಯಾಮೆರಾಗೆ ಬಟ್ಟೆ ಮುಚ್ಚಿ ಹುಂಡಿ ಕಳ್ಳತನ ಮಾಡಿದ ಅರ್ಚಕ

ರಾಮನಗರ: ದೇವಾಲಯದ ಸಿಸಿ ಕ್ಯಾಮೆರಾಗೆ ಬಟ್ಟೆ ಮುಚ್ಚಿ ಅರ್ಚಕರೊಬ್ಬರು ಹುಂಡಿಯಲ್ಲಿದ್ದ ಹಣ ಕಳ್ಳತನ ಮಾಡಿರುವ ಘಟನೆ ಚನ್ನಪಟ್ಟಣ ತಾಲೂಕಿನ ನೀಲಸಂದ್ರ ಗ್ರಾಮದ ಭೈರವೇಶ್ವರ ಸ್ವಾಮಿ ದೇವಸ್ಥಾನದಲ್ಲಿ ನಡೆದಿದೆ.

ಮೊನ್ನೆಯಷ್ಟೇ ಶ್ರೀಭೈರವೇಶ್ವರ ಸ್ವಾಮಿ ದೇವರ ಜಾತ್ರೆ ಅದ್ದೂರಿಯಾಗಿ ನೆರವೇರಿತ್ತು. ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದ ಹಿನ್ನೆಲೆ ದೇವಾಲಯದ ಹುಂಡಿಂ–ಯಲ್ಲಿ ಹೆಚ್ಚು ಹಣ ಸಂಗ್ರಹವಾಗಿತ್ತು ಎನ್ನಲಾಗಿದೆ. ಇದನ್ನು ಗಮನಿಸಿದ್ದ ದೇವಾಲಯದ ಅರ್ಚಕರು ಮಂಗಳವಾರ ರಾತ್ರಿ ಸಿಸಿಟಿವಿಗೆ ಬಟ್ಟೆ ಮುಚ್ಚಿ ಹುಂಡಿಯಿಂದ ಸುಮಾರು 2 ಲಕ್ಷಕ್ಕೂ ಹೆಚ್ಚು ಹಣ ದೋಚಿದ್ದಾರೆ ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ.

ದೇವಾಲಯದ ಒಳಗಡೆ ಅರ್ಚಕರು ಓಡಾಡುವ ದೃಶ್ಯ ಸಿಸಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಈ ಸಂಬಂಧ ಅರ್ಚಕರ ವಿರುದ್ಧ ಚನ್ನಪಟ್ಟಣ ಗ್ರಾಮಾಂತರ ಠಾಣೆಗೆ ಗ್ರಾಮಸ್ಥರು ದೂರು ನೀಡಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಚನ್ನಪಟ್ಟಣ ಗ್ರಾಮಾಂತರ ಪೊಲೀಸರು ತನಿಖೆ ಆರಂಭಿಸಿದ್ದಾರೆ.

## ಅಂಕಲಗಿ ಶ್ರೀಗಳಿಗೆ ಶೃದ್ಧಾಂಜಲಿ ಅರ್ಪಿಸಿದ ಹುಕ್ಕೇರಿ, ಕಾರಂಜಿಮಠದ ಶ್ರೀಗಳು



ಬೆಳಗಾವಿ: ಅಂಕಲಗಿ ಅಡವಿಸಿದ್ದೇಶ್ವರ ಮಠದ ಶ್ರೀ ಗುರುಸಿದ್ಧ ಮಹಾಸ್ವಾಮೀಜಿ ಇತ್ತೀಚೆಗೆ ಲಿಂಗೈಕರಾದರು. ಇವರ ಗದ್ದುಗೆಗೆ ಪೂಜೆ ಸಲ್ಲಿಸಿ ಶೃದ್ಧಾಂಜಲಿ ಅರ್ಪಿಸಿದ ಬೆಳಗಾವಿ ಹುಕ್ಕೇರಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಹಾಗೂ ಬೆಳಗಾವಿ ಕಾರಂಜಿಮಠದ ಶ್ರೀ. ಗುರುಸಿದ್ಧ ಸ್ವಾಮೀಜಿ ಶೃದ್ಧಾಂಜಲಿ ಅರ್ಪಿಸಿ ಮಾತನಾಡುತ್ತ, ಅಂಕಲಗಿ ಶ್ರೀಗಳು ಭಕ್ತರ ಶೃದ್ಧಾ ಕೇಂದ್ರವಾಗಿರುವ ಅಂಕಲಗಿ ಅಡವಿಸಿದ್ದೇಶ್ವರ ಮಠವನ್ನು ಪುನರೋತ್ಥಾನಗೊಳಿಸುವುದರ ಮೂಲಕ ಅನೇಕ ಜನಪರ ಕೆಲಸ ಮಾಡಿದ್ದಾರೆ. ಇವರ ಅಗಲಿಕೆಯಿಂದ ಇಡೀ ಸಮಾಜಕ್ಕೆ ತುಂಬಲಾರದಷ್ಟು ನಷ್ಟವಾಗಿದೆ. ಶ್ರೀಗಳ ಆದರ್ಶ ಎಲ್ಲರಿಗೂ ಮಾದರಿ ಎಂದರು.

ಈ ಸಂದರ್ಭದಲ್ಲಿ ಪಾಶ್ಚಾಪುರ ಹಿರೇಮಠದ ಶ್ರೀ ವಿಶ್ವಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಸೇರಿದಂತೆ ಇನ್ನಿತರರು ಉಪಸ್ಥಿತ–ರಿದ್ದರು.

# ಬೆದರಿಕೆ ಪತ್ರ ಕಳುಹಿಸಿದ್ದು ಯಾರೆಂದು ತಿಳಿದಿದೆ: ಸುದೀಪ್



ನನಗೆ ಬೆದರಿಕೆ ಪತ್ರ ಕಳುಹಿಸಿದ್ದು ಯಾರೆಂದು ತಿಳಿದಿದೆ. ಅವರಿಗೆ ತಕ್ಕ ಉತ್ತರ ಕೊಡುವುದಾಗಿ ನಟ ಕಿಚ್ಚ ಸುದೀಪ್ ಹೇಳಿರುವುದಾಗಿ ಎಎನ್‌ಐ ಟ್ವೀಟ್ ಮಾಡಿದೆ.

ಅದನ್ನು ಕಳುಹಿಸಿರುವುದು ಚಿತ್ರರಂಗದವರೇ ಎಂದೂ ಅವರು ಹೇಳಿದ್ದಾರೆ.

ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಸುದೀಪ್, ನನಗೆ ಬೆದರಿಕೆ ಪತ್ರ ಬಂದಿರುವುದು ನಿಜ ಮತ್ತು ಅದನ್ನು ಕಳುಹಿಸಿರುವುದೂ ಯಾರೆಂದು ಗೊತ್ತಿದೆ. ಚಿತ್ರರಂಗದವರೇ ಒಬ್ಬರು ಅದನ್ನು ಕಳುಹಿಸಿದ್ದಾರೆ. ಅವರಿಗೆ ತಕ್ಕ ಉತ್ತರ ನೀಡುತ್ತೇನೆ' ಎಂದು ಹೇಳಿದ್ದಾರೆ.

ಅವರಿಗೆ ನನ್ನ ಬಗ್ಗೆ ಗೊತ್ತಿದೆ. ಮನೆಯ ವಿಳಾಸ ತಿಳಿದಿದೆ. ಅವರು ಪೋಸ್ಟ್ ಮೂಲಕ ಬೆದರಿಕೆ ಪತ್ರ ಕಳುಹಿಸಿದ್ದು ಏಕೆ? ಎಂಬ ಕುರಿತಾದ ಎಲ್ಲವನ್ನು ಬಹಿರಂಗಪಡಿಸುತ್ತೇನೆ. ಬೆದರಿಕೆ ಪತ್ರಕ್ಕೆ ಉತ್ತರ ಕೊಡುತ್ತೇನೆ' ಎಂದೂ ತಿಳಿಸಿದ್ದಾರೆ.

ಕಿಚ್ಚ ಸುದೀಪ್ ಅವರಿಗೆ ಬೆದ–ರಿಕೆ ಪತ್ರ ಬಂದಿರುವ ಬಗ್ಗೆ ಅವರ ಮ್ಯಾನೇಜರ್ ಜ್ಯಾಕ್ ಮಂಜು, ಪೊಲೀಸರಿಗೆ ದೂರು ನೀಡಿದ್ದಾರೆ. ಮಾರ್ಚ್ 29ರಂದೇ ಸುದೀಪ್ ಅವರ ಮನೆಗೆ ಈ ಪತ್ರಗಳು ತಲುಪಿವೆ ಎನ್ನಲಾಗಿದೆ.

ಪತ್ರದಲ್ಲಿ ಸುದೀಪ್ ಹಾಗೂ ಅವರ ಪೋಷಕರನ್ನು ನಿಂದಿಸಲಾಗಿದೆ. ಜತೆಗೆ ವಿಡಿಯೊ ಬಹಿರಂಗ ಪಡಿಸುತ್ತೇವೆ ಎಂದು ಬೆದರಿಕೆ ಹಾಕಲಾಗಿದೆ.

ಆರೋಪಿಗಳ ಪತ್ತೆಗೆ ಮುಂದಾಗಿದ್ದೇವೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಡಾ.ಬಾಬು ಜಗಜೀವನರಾಮ 116ನೇ ಜಯಂತಿ ಆಚರಣೆ



ಹುಕ್ಕೇರಿ : ತಾಲೂಕಿನ ಬೆಳವಿ ಗ್ರಾಮದಲ್ಲಿ ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರಾಮ ಅವರು 116 ನೇ ಜಯಂತಿ ಉತ್ಸವ ಆಚರಿಸಿಲಾಯಿತು.

ಗ್ರಾಮದ ಬುದ್ದ ಬಸವ ಅಂಬೇಡ್ಕರ್ ವೃತ್ತದಲ್ಲಿ ಭಾವ ಚಿತ್ರಕ್ಕೆ ಮುಖಂಡರಾದ ಸಿದ್ದಪ್ಪ ಈರಗಾರ ಹಾಗೂ ಎಚ್.ಎಮ್ ಈರಗಾರ ಪೂಜೆ ಸಲ್ಲಿಸಿದರು.

ಆದಿಜಾಂಭವ ಸಮಿತಿ ಸಂಗಪ್ಪ ತಳವಾರ ಬಾಳಪ್ಪ ಪೂಜೇರಿ,ಮಾರುತಿ ಈರಗಾರ, ಸುನೀರ ಈರಗಾರ, ಬಾಳಪ್ಪ ಈರಗಾರ,ರಾಹುಲ್ ,ಶಂಕರ,ಭೀಮ,ಪ್ರಜ್ವಲ ಈರಗಾರ ಮತ್ತಿತರರು ಉಪಸ್ಥಿತರಿದ್ದರು.

# ಬಾಬು ಜಗಜೀವನ್ ರಾಮ್ 116 ನೇ ಜಯಂತಿ ಆಚರಣೆ



ಬಳ್ಳಾರಿ: 1974ರಲ್ಲಿ ಭಾರತ ದೇಶದಲ್ಲಿ ಭೀಕರ ಬರಗಾಲದಿಂದ ಆಹಾರ ಪದಾರ್ಥಗಳ ಕೊರತೆ ಉಂಟಾಗಿ,ಜನ ತೊಂದರೆಗೊಳಗಾದಾಗ ಆಗ ಕೇಂದ್ರದಲ್ಲಿ ಕೃಷಿ ಸಚಿವರಾಗಿದ್ದ ಬಾಬು ಜಗಜೀವನ್ ರಾಮ್ ಅವರು ಕೃಷಿಯಲ್ಲಿ ಆಧು–ನಿಕ ಪದ್ಧತಿಯನ್ನು ಅನುಸರಿಸಿ ಹೆಚ್ಚು ಹೆಚ್ಚು ಆಹಾರ ಧಾನ್ಯಗಳನ್ನು ಬೆಳೆಯುವಂತೆ ರೈತರನ್ನು ಉತ್ತೇಜಿಸಿದ್ದರಿಂದ ಅವರನ್ನು ಹಸಿರು ಕ್ರಾಂತಿಯ ಹರಿಕಾರ ಎಂದು ಕರೆಯುತ್ತಾರೆ ಎಂದು ಕರ್ನಾಟಕ ರಾಜ್ಯ ಕ್ರಿಯಾಶೀಲ ಶಿಕ್ಷಕರ ವೇದಿಕೆ ಬಳ್ಳಾರಿ ಜಿಲ್ಲಾ ಘಟಕದ ಅಧ್ಯಕ್ಷ ರವಿಚೇಳ್ಳಗುರ್ಕಿ ಹೇಳಿದರು.

ತಾಲ್ಲೂಕಿನ ಸಂಜೀವರಾಯನಕೋಟೆಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹಮ್ಮಿಕೊಂಡಿದ್ದ ಬಾಬೂಜಿ ಅವರ 116ನೇ ಜಯಂತಿಯಲ್ಲಿ ಪಾಲ್ಗೊಂಡು ಪೂಜೆ ನೆರವೇರಿಸಿ ಮಾತನಾಡಿದ ಅವರು 1977ರಿಂದ 1979 ರ ಅವಧಿಯಲ್ಲಿ ಮುರಾರ್ಜಿ ದೇಸಾಯಿ ಪ್ರಧಾನಮಂತ್ರಿ ಆಗಿದ್ದರೆ ಬಾಬೂಜಿ ಅವರು ಉಪ ಪ್ರಧಾನ ಮಂತ್ರಿಯಾಗಿದ್ದರು.

1937ರಲ್ಲೇ ಬಿಹಾರ ವಿಧಾನಸಭಾ ಸದಸ್ಯರಾಗಿ,ಸ್ವತಂತ್ರ ಭಾರತದ ಮೊದಲ ಸಚಿವ ಸಂಪುಟದಲ್ಲಿ ಕಾರ್ಮಿಕ ಸಚಿವರಾಗಿದ್ದರು.ಅಲ್ಲದೆ 1971ರಲ್ಲಿ ಪಾಕಿಸ್ತಾನ ವಿರುದ್ಧ ಯುದ್ಧ ನಡೆದಾಗ ದೇಶದ ರಕ್ಷಣಾ ಸಚಿವರಾಗಿದ್ದು ಬಾಂಗ್ಲಾದೇಶ ಸ್ವತಂತ್ರವಾಗಲು ಪ್ರಧಾನಿ ಇಂದಿರಾ ಗಾಂಧಿ ಜೊತೆಯಲ್ಲಿ ಬಾಬೂಜಿ ಕೂಡ ಶ್ರಮಿಸಿದ್ದಾರೆ ಎಂದರು.

ಆದ್ದರಿಂದ ವಿದ್ಯಾರ್ಥಿಗಳು ಅವರ ಆದರ್ಶಗಳನ್ನು ಮೈಗೂಡಿಸಿಕೊಂಡು ಬಾಳಬೇಕೆಂದು ಸಲಹೆ ನೀಡಿದರು.ಪ್ರತಿಭಾವಂತ ವಿದ್ಯಾರ್ಥಿಗಳಾದ ಟಿ.ಮಹೇಶ್, ಪ್ರಜ್ವಲ್, ಬಿ.ಕೆ. ಮನು,ಪ್ರಸನ್ನ ಕುಮಾರ್, ದುರುಗೇಶ ಹಾಗೂ ವಂಶಿ ಅವರಿಗೆ ಬಹುಮಾನ ವಿತರಿಸಲಾಯಿತು.

ಶಿಕ್ಷಕರಾದ ಮುನಾವರ ಸುಲ್ತಾನ,ದಿಲ್ಶಾದ್ ಬೇಗಂ, ಮೋದಿನ್ ಸಾಬ್, ಚನ್ನಮ್ಮ, ಸುಮತಿ,ಸುಧಾ, ವೈಶಾಲಿ, ಶಶಮ್ಮ, ರಾಮಾಂಜಿನೇಯ ಮುಂತಾದವರು ಉಪಸ್ಥಿತ–ರಿದ್ದರು.

## ಹತ್ತು ರಾಜ್ಯಗಳ 27 ಮಹಿಳೆಯರೊಂದಿಗೆ ಮದುವೆಯಾಗಿದ್ದವನಿಗೆ ED ಕಂಟಕ



ಒಡಿಶಾ: ಹತ್ತು ರಾಜ್ಯಗಳಲ್ಲಿ 27 ಮಹಿಳೆಯರನ್ನು ಮದುವೆಯಾಗಿದ್ದರ ಜೊತೆಗೆ ಕೋಟ್ಯಾಂತರ ರೂ. ವಂಚಿಸಿದ ಆರೋಪದ ಮೇಲೆ ಬಂಧಿತನಾಗಿರುವ ಒಡಿಶಾದ ರಮೇಶ್ ಸ್ವೈನ್ ವಿರುದ್ಧ ಜಾರಿ ನಿರ್ದೇಶನಾಲಯ ಪ್ರಕರಣ ದಾಖಲಿಸಿದೆ. ವಂಚನೆ ಆರೋಪದ ಮೇಲೆ ಒಡಿಶಾ ರಾಜ್ಯ ಪೊಲೀಸರು ಕಳೆದ ವರ್ಷ ಬಂಧಿಸಿದ್ದ ದೊಡ್ಡ ವಂಚಕನಿಗೆ ಈಗ ಇಡಿ ಕಂಟಕ ಬೆನ್ನೇರಿದೆ.

ಬಿಭು ಪ್ರಕಾಶ್ ಸ್ವೈನ್ ಎಂದೂ ಕರೆಯಲ್ಪಡುವ ಸ್ವೈನ್, 2011 ರಲ್ಲಿ ಹೈದರಾಬಾದ್‌ನ ಜನರಿಗೆ ತ ಮ್ಮ ಮಕ್ಕಳಿಗೆ ಎಂಬಿಬಿಎಸ್ ನಲ್ಲಿ ಸೀಟು ಕೊಡಿಸುವುದಾಗಿ ಭರವಸೆ ನೀಡಿ 2 ಕೋಟಿ ರೂಪಾಯಿ ವಂಚಿಸಿದ್ದ. 2006 ರಲ್ಲಿ ಕೇರಳದ 13 ಬ್ಯಾಂಕ್‌ಗಳಿಗೆ 128 ನಕಲಿ ಕ್ರೆಡಿಟ್ ಕಾರ್ಡ್‌ಗಳ ಮೂಲಕ 2 ಕೋಟಿ ವಂಚಿಸಿದ್ದ. ಈ ಆರೋಪಗಳ ಮೇಲೆ ಆತನನ್ನು ಬಂಧಿಸಲಾಗಿತ್ತು. ಒಡಿಶಾದ ಪೊಲೀಸರು ಸ್ವೇನ್ ಅವರ ಪತ್ನಿಯರಲ್ಲಿ ಒಬ್ಬರಾದ ಡಾ. ಕಮಲಾ ಸೇಥಿ ಮತ್ತು ಅವರ ಮಲತಂಗಿ ಮತ್ತು ಚಾಲಕನನ್ನು ಬಂಧಿಸಿದ್ದಾರೆ. ಇವರೆಲ್ಲರಿಗೂ ಒರಿಸ್ಸಾ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ. ಎಂಟು ತಿಂಗಳ ಕಾಲ ಆತನ ಮೇಲೆ ನಿಗಾ ಇರಿಸಿದ್ದ ಒಡಿಶಾ ಪೊಲೀಸ್ ವಿಶೇಷ ದಳವು ಫೆಬ್ರವರಿ 13 ರಂದು ಸ್ವೈನ್ ಅವರನ್ನು ಬಂಧಿಸಿತ್ತು.

ಆತ ವಿವಾಹವಾದ ಮಹಿಳೆಯರಲ್ಲಿ ಇಂಡೋ–ಟಿಬೆಟಿಯನ್ ಬಾರ್ಡರ್ ಪೊಲೀಸ್‌ನ ಸಹಾಯಕ ಕಮಾಂಡೆಂಟ್, ಛತ್ತೀಸ್‌ಗಢದ ಚಾರ್ಟರ್ಡ್ ಅಕೌಂಟೆಂಟ್, ಅಸ್ಸಾಂನ ವೈದ್ಯರು, ಇಬ್ಬರು ಸುಪ್ರೀಂ ಕೋರ್ಟ್ ಮತ್ತು ದೆಹಲಿ ಹೈಕೋರ್ಟ್ ವಕೀಲರು ಮತ್ತು ಕೇರಳ ಆಡಳಿತ ಸೇವಾ ಅಧಿಕಾರಿ ಸೇರಿದ್ದಾರೆ.

## ಸೋಮಶೇಖರರೆಡ್ಡಿ ನೇತೃತ್ವದಲ್ಲಿ ರಾಜೇಶ್,ರಮೇಶ್ ಬಿಜೆಪಿ ಸೇರ್ಪಡೆ



ಬಳ್ಳಾರಿ: ಬಳ್ಳಾರಿ ನಗರದ 20ನೇ ವಾರ್ಡ್ ಪ್ರದೇಶದಲ್ಲಿ ಬಳ್ಳಾರಿ ನಗರದ ಶಾಸಕ ಜಿ.ಸೋಮಶೇಖರರೆಡ್ಡಿ ರವರ ನೇತೃತ್ವದಲ್ಲಿ ಭರ್ಜರಿ ಪ್ರಚಾರ ಕಾರ್ಯಕ್ರಮದಲ್ಲಿ ಬಲಿಜ ಸಮುದಾಯದ ನಾಯಕರಾದ ರಾಜೇಶ್, ರಮೇಶ್‌ರವರು ಬಿಜೆಪಿಗೆ ಸೇರ್ಪಡೆಯಾದರು. ಈ ಸಂದರ್ಭದಲ್ಲಿ, ಕೃಷ್ಣ (ಕಿಟ್ಟ), ಪ್ರಭು, ಜೀ.ವೀರಶೇಖರರೆಡ್ಡಿ, ಶ್ರೀನಿವಾಸ ಮೋತ್ಕರ್, ಮಾರುತಿಪ್ರಸಾದ್, ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# ಶಾಸಕ ಬಂಡೆಪ್ಪ ಖಾಶೆಂಪುರ್ ಸಮ್ಮುಖದಲ್ಲಿ ಜೆಡಿಎಸ್ ಸೇರಿದ ಪ್ರಮುಖರು

ಬೀದರ್: ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ನಿರ್ಣಾ ಗ್ರಾಮದ ಕಾಂಗ್ರೆಸ್, ಬಿಜೆಪಿ ಪಕ್ಷಗಳ ನೂರಾರು ಜನ ಯುವಕರು, ಬಸವಕಲ್ಯಾಣ ಭಾಗದ ನಿವೃತ್ತ ಎಎಸ್‌ಐ ಪ್ರೇಮ್ ರೋಸ್ ಸಿರ್ಗಾರವರು ಸೇರಿದಂತೆ ಅನೇಕರು ಮಾಜಿ ಸಚಿವರು, ಜೆಡಿಎಸ್ ಶಾಸಕಾಂಗ ಪಕ್ಷದ ಉಪನಾಯಕರು, ಜೆಡಿಎಸ್ ಕೋರ್ ಕಮಿಟಿಯ ಅಧ್ಯಕ್ಷರು, ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರ ಸಮ್ಮುಖದಲ್ಲಿ ಜೆಡಿಎಸ್ ಪಕ್ಷಕ್ಕೆ ಸೇರ್ಪಡೆಯಾದರು.

ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಖಾಶೆಂಪುರ್ ಪಿ ಗ್ರಾಮದ ಹೊರವಲಯದಲ್ಲಿರುವ ತಮ್ಮ ನಿವಾಸದ ಆವರಣದಲ್ಲಿ ನಿರ್ಣಾ ಗ್ರಾಮದ ಯುವಕರಿಗೆ, ಬಸವಕಲ್ಯಾಣ ಭಾಗದ ನಿವೃತ್ತ ಎಎಸ್‌ಐರವರಿಗೆ ಬುಧವಾರ ಜೆಡಿಎಸ್ ಶಾಲು ಹೊದಿಸಿ, ಪಕ್ಷದ ಧ್ವಜ ನೀಡುವ ಮೂಲಕ ಶಾಸಕ ಬಂಡೆಪ್ಪ ಖಾಶೆಂಪುರ್ ರವರು ಜೆಡಿಎಸ್ ಪಕ್ಷಕ್ಕೆ ಬರಮಾಡಿಕೊಂಡರು.



ನೂತನವಾಗಿ ಜೆಡಿ–ಎಸ್ ಸೇರಿದ ಮುಖಂಡರು, ಕಾರ್ಯಕರ್ತರೊಂದಿಗೆ ಸಭೆ ನಡೆಸಿ ಮಾತನಾಡಿದ ಶಾಸಕ ಬಂಡೆಪ್ಪ ಖಾಶೆಂಪುರ್ ರವರು, ನೂರಾರು ಸಂಖ್ಯೆಯಲ್ಲಿ ನಿರ್ಣಾ ಭಾಗದ ಅನೇಕರು ಜೆಡಿ–ಎಸ್ ಸೇರಿರುವುದು ಸಂತಸದ ವಿಷಯವಾಗಿದೆ. ಇದರೊಂದಿಗೆ ಪಕ್ಷಕ್ಕೆ ಇನ್ನಷ್ಟು ಬಲ ಬಂದಂತಾಗಿದೆ.

ಎಲ್ಲರೂ ಸೇರಿ ಪಕ್ಷವನ್ನು ಅಧಿಕಾರಕ್ಕೆ ತರುವ ಕೆಲಸ ಮಾಡಬೇಕಾಗಿದೆ. ಆ ನಿಟ್ಟಿನಲ್ಲಿ ಎಲ್ಲರೂ ಕೆಲಸ ಮಾಡೋಣ ಎಂದು ನೂತನ ಮುಖಂಡರಿಗೆ, ಕಾರ್ಯಕರ್ತರಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಬಸವಕಲ್ಯಾಣದ ಸೈಯದ್ ಯಶ್ರಬ್ ಅಲಿ ಖಾದ್ರಿ, ಬೀದರ್ ದಕ್ಷಿಣ ಜೆಡಿಎಸ್ ಅಧ್ಯಕ್ಷ ಸಂಜೀವರೆಡ್ಡಿ ನಿರ್ಣಾ, ಬಸವಕಲ್ಯಾಣ ಜೆಡಿ–ಎಸ್ ತಾಲೂಕು ಅಧ್ಯಕ್ಷ ಸೈಯದ್ ಹರ್ಷದ್ ಅಲಿ, ಮುಖಂಡರಾದ ಸಂಜಯ್ ಶ್ರೀವಾಸ್ತವ್, ಗೌಸ್ ಹೀರಾ, ಅಶೋಕ್ ಬಂದಾ, ಅಭಿಮನ್ಯು, ಗಣೇಶ್, ಆನಂದ್, ಅವಿನಾಶ್, ಶಿವಾನಂದ, ನಾರಾಯಣರೆಡ್ಡಿ, ಮಾರ್ಟಿನ್, ಅಂತಯ್ಯ, ಗುರುನಾಥ, ವೀರಶೆಟ್ಟಿ, ಗೋಪಾಲ್, ಸಾಗರ್, ಮಂಜುನಾಥ, ನಾಗರಾಜ್, ಕಾಶೀನಾಥ್, ಮೋಹನ್ ಸೇ–ರಿದಂತೆ ಅನೇಕರಿದ್ದರು.

## ಐಎಎಸ್ ಅಧಿಕಾರಿಗೆ ಬಿಸಿ ಮುಟ್ಟಿಸಿದ ಆರ್‌ಟಿಓ ಅಧಿಕಾರಿ

ಬೆಂಗಳೂರು: ಐಎಎಸ್ ಅಧಿಕಾರಿಯೊಬ್ಬರಿಗೆ ವಾಹನ ತಡೆದು ಆರ್ ಟಿಓ ಅಧಿಕಾರಿಯೊಬ್ಬರು ಬಿಸಿ ಮುಟ್ಟಿಸಿರುವ ಘಟನೆ ಕೆ.ಆರ್. ಸರ್ಕಲ್ ನಲ್ಲಿ ನಡೆದಿದೆ.

ಪ್ರಸ್ತುತ ನಗರಾಭಿವೃದ್ಧಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಬಿಬಿಎಂಪಿ ಆಡಳಿತಗಾರ ರಾಕೇಶ್ ಸಿಂಗ್ ಅವರು ಕೆಳಹಂತದ ಅಧಿಕಾ–ರಿಯೊಬ್ಬರು ಅತ್ಯುತ್ಸಾಹದಲ್ಲಿ ಕೈಗೊಂಡಿರುವ ಕ್ರಮದಿಂದ ಕಸಿವಿಸಿ ಅನುಭವಿಸಿದ್ದಾರೆ.

ಅದೂ ನಡುರಸ್ತೆಯಲ್ಲಿ ಇಂತಹ ಅಧಿಕ ಪ್ರಸಂಗವೊಂದು ಒದಗಿಬಂದಿರುವುದು ಅವರಿಗೆ ಮುಜುಗುರ ತಂದಿದೆ.

ರಾಜ್ಯಾದ್ಯಂತ ಆರ್‌ಟಿಓ ಅಧಿಕಾರಿಗಳು ಎಲೆಕ್ಷನ್ ಡ್ಯೂಟಿಗಾಗಿ ಸರ್ಕಾರಿ ವಾಹನಗಳನ್ನು ವಶಕ್ಕೆ ಪಡೆದುಕೊಳ್ಳುತ್ತಿದ್ದಾರೆ. ಆರ್‌ಟಿಓ ಅಧಿಕಾರಿಗಳು ಮತ್ತು ಪೊಲೀಸರು ಈಗಾಗಲೇ ಸುಮಾರು 450 ಸರ್ಕಾರಿ ವಾಹನಗಳನ್ನು ವಶಕ್ಕೆ ಪಡೆದುಕೊಂಡಿದ್ದಾರೆ.

ಇಂತಹ ಪರಿಸ್ಥಿತಿಯಲ್ಲಿ ಬುಧವಾರ ಕೆ.ಆರ್. ಸರ್ಕಲ್ ನಲ್ಲಿ ನಗರಾಭಿವೃದ್ಧಿ ಇಲಾಖೆಯ ಅಪಾರ ಮುಖ್ಯ ಕಾರ್ಯದರ್ಶಿ ಮತ್ತು ಬಿಬಿಎಂಪಿ ಆಡಳಿತಗಾರ ರಾಕೇಶ್ ಸಿಂಗ್ ಕಾರು ತಡೆದು ಬಿಸಿ ಮುಟ್ಟಿಸಿದರು.



ಆಗ ಐಎಎಸ್ ಅಧಿಕಾರಿ ಅವರು ಆರ್‌ಟಿಓ ಅಧಿಕಾರಿ ವಿರುದ್ಧ ಸಿಡಿಮಿಡಿಗೊಂಡಿದ್ದಾರೆ.

ನನ್ನ ವಾಹನವನ್ನು ವಶಕ್ಕೆ ಪಡೆದುಕೊಳ್ಳಿ, ನಾನು ನಿಮ್ಮದೇ ಆರ್‌ಟಿಓ ಜೀಪ್ ನಲ್ಲಿ ಹೋಗ್ತೀನಿ ಎಂದು ರಾಕೇಶ್ ಗರಂ ಆಗಿದ್ದಾರೆ. ಇದಕ್ಕೆ ಆರ್‌ಟಿಓ ಅಧಿಕಾರಿ ನಿಮ್ಮ ಕಾರು ವಶಕ್ಕೆ ಪಡೆದಿಲ್ಲ ಎಂದು ಸಮಜಾಯಿಷಿ ನೀಡಿ ಕಾರು ವಾಪಸ್ ನೀಡಿ ಕಳುಹಿಸಿದ್ದಾರೆ.

## ಇಂದು ಹನುಮಾನ ಜಯಂತಿ ವಿವಿಧಡೆ ವಿಶೇಷ ಪೂಜೆ

ತಾಳಿಕೋಟೆ: ಶ್ರೀ ಹನುಮಾನ ಜಯಂತಿ ಅಂಗವಾಗಿ ಗುರುವಾರರಂದು ಪಟ್ಟಣದಲ್ಲಿರುವ ಬಜಾರ ಶ್ರೀ ಹನುಮಾನ ಮಂದಿರ, ಪೊಲೀಸ್ ಠಾಣಾ ಆವರಣದಲ್ಲಿರುವ ಹನುಮಾನ ಮಂದಿರ, ಕೆಇಬಿ ಆವರಣದಲ್ಲಿರುವ ಶ್ರೀ ಹನುಮಾನ ಮಂದಿರ ಹಾಗೂ ಡೋಣಿ ನಧಿ ಹನುಮಾನ ಮಂದಿರ ಒಳಗೊಂಡು ವಿವಿಧಡೆ ವಿವಿಧಡೆ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಪಟ್ಟಣದ ಬಜಾರ ಶ್ರೀ ಹನುಮಾನ ಮಂದಿರದಲ್ಲಿ ಬೆಳಿಗ್ಗೆ ಶ್ರೀ ಹನುಮಾನ ಮೂರ್ತಿಗೆ ಮಹಾಭಿಷೇಕ, ಬಿಲ್ವಾರ್ಚನೆ, ಪುಷ್ಪಾರ್ಚನೆ, ಮಹಾ ಮಂಗಳಾರತಿ ಕಾರ್ಯಕ್ರಮ ಜರುಗುವವಲ್ಲದೇ ನಂತರ



ಫಲ್ಲಕ್ಕಿ ಉತ್ಸವವು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಜರುಗಿ ಮರಳಿ ಮಂದಿರ ತಲುಪುವದು ನಂತರ ಸಮಸ್ತ ಭಕ್ತಾಧಿಗಳಿಗೆ ಮಹಾ ಪ್ರಸಾದ ಜರುಗಲಿದೆ. ಅದರಂತೆ ಪೊಲೀಸ್ ಠಾಣಾ ಆವರಣದಲ್ಲಿರುವ ಹಾಗೂ ಕೆಇಬಿ ಆವರಣದಲ್ಲಿರುವ ಶ್ರೀ ಹನುಮಾನ ಮಂದಿರ ಒಳಗೊಂಡು ವಿವಿಧ ಶ್ರೀ ಹನುಮಾನ ಮಂದಿರಗಳಲ್ಲಿ ವಿಶೇಷ ಪೂಜೆಯೊಂದಿಗೆ ಮಹಾ ಪ್ರಸಾದದ ವ್ಯವಸ್ಥೆಯನ್ನು ಮಾಡಲಾಗಿದೆ.

ಬೆಳ್ಳಿ ಗಧೆ ಸಮರ್ಪಣೆ :– ಪಟ್ಟಣದ ವಿಶ್ವಕರ್ಮ ಸಮಾಜದ ಶ್ರೀ ಕಾಳಿಕಾದೇವಿ ದೇವಸ್ಥಾನ ಟ್ರಸ್ಟ ಕಮಿಟಿ ಅಧ್ಯಕ್ಷರಾದ ಶ್ರೀನಿವಾಸ ಸೋನಾರ ಅವರು ಬಜಾರ ಶ್ರೀ ಹನುಮಾನ ಮಂದಿರದಲ್ಲಿ ವಿಶೇಷ ಪೂಜೆ ನೆರವೇರಿಸಿ 1 ಕೆಜಿ ಬೆಳ್ಳಿಯಲ್ಲಿ ತಯಾ–ರಿಸಲಾದ ಬೆಳ್ಳಿಯ ಗಧೆಯನ್ನು ಸಮರ್ಪಣೆ ಮಾಡಲಿದ್ದಾರೆ. ಈ ಹಿಂದೆ ಅವರು ಶ್ರೀ ಹನುಮಾನ ದೇವಸ್ಥಾನಕ್ಕೆ ಹೊತ್ತಿದ್ದ ಹರಕೆಯಂತೆ ಹಾಗೂ ಅವರ ತಂದೆಯವರಾದ ದಿ.ಶಂಕ್ರೆಪ್ಪಣ್ಣ ಸೋನಾರ ಅವರ ಆಸೆಯಂತೆ ಬೆಳ್ಳಿಗಧೆಯನ್ನು ಸಮರ್ಪಣೆ ಮಾಡುತ್ತಿರುವದಾಗಿ ಅವರು ಪತ್ರಿಕೆಗೆ ತಿಳಿಸಿದ್ದಾರೆ.

# ದಿ.9 ರಿಂದ ಶ್ರೀ ಜಗದ್ಗುರು ಶ್ರೀ ಶಿವಲಿಂಗೇಶ್ವರ ಮಹಾ ಜಾತ್ರೆ

ಸಾವಳಗಿ: ಉತ್ತರವಾಹಿನಿ ಘಟಪ್ರಭಾ ತೀರದ ಇತಿಹಾಸ ಪ್ರಸಿದ್ದವು ಪರಮ ಜಾಗ್ರತ ಸ್ಥಾನವು ಆದ ಗೋಕಾಕ ತಾಲೂಕಿನ ಪುಣ್ಯಕ್ಷೇತ್ರ ಸಾವಳಗಿಯ ಶ್ರೀ ಜಗದ್ಗುರು ಶ್ರೀ ಶಿವಲಿಂಗೇಶ್ವರ ಸಿದ್ಧ ಸಂಸ್ಥಾನ ಪೀಠವು ಸುಮಾರು 700 ವರ್ಷಗಳಿಂದಲೂ ಹಿಂದೂ–ಮುಸ್ಲಿಂ ಧರ್ಮ ಸಮನ್ವಯದ ಗೌರವವನ್ನು ಹೊಂದಿ ತನ್ನದೇ ಆದ ಭವ್ಯ ಪರಂಪರೆಯಿಂದ ಕಂಗೊಳಿಸುತ್ತಿದೆ. ಈ ಪರಮಪಾವನ ಕ್ಷೇತ್ರದ ಪರಂಪರಾಗತ ವರ್ಷಗಳಂತೆ ಈ ಸಲವೂ ದಿ. 09–04–2023 ರಿಂದ 18–04–2023ರ ವರೆಗೆ ಶ್ರೀ ಜಗದ್ಗುರು ಶ್ರೀ ಶಿವಲಿಂಗೇಶ್ವರ ಮಹಾ ಜಾತ್ರೆ ಹಾಗೂ ಜಾನುವಾರುಗಳ ಜಾತ್ರೆ ಜರುಗಲಿದೆ.

ಶೂನ್ಯ ಸಿಂಹಾಸನಾಧೀಶ ಶ್ರೀಮನ್ ಮಹಾರಾಜ ನಿರಂಜನ ಜಗದ್ಗುರು ಶ್ರೀ ಶಿವಲಿಂಗೇಶ್ವರ ಕುಮಾರೇಂದ್ರ ಮಹಾಸನ್ನಿಧಿಯಲ್ಲಿ ದಿ. 09 ರಂದು



ಜಾತ್ರೆ ಆರಂಭವಾಗುವುದು. ದಿ. 09–04–2023 ರಾತ್ರಿ 8.30 ಗಂಟೆಗೆ ಸಕಲ ರಾಜಮರ್ಯಾದೆಯೊಡನೆ ಶ್ರೀ ಜಗದ್ಗುರು ಶ್ರೀ ಶಿವಲಿಂಗೇಶ್ವರ ಮೂರ್ತಿಯ ಪುಷ್ಪಾಂದೋಲನ ಮಹೋತ್ಸವದೊಂದಿಗೆ ಪಲ್ಲಕ್ಕಿ ಕಟ್ಟೆಗೆ ಮಹೂರ್ತ ಮಾಡುವುದು ಹಾಗೂ ಮದಾಲಸಿ, ಗೀಗೀ ಪದ, ಭಕ್ತಿ ಗೀತೆ, ಶಾಯಿರಿ ಗಾನಾ ಕಾರ್ಯಕ್ರಮಗಳು ಜರುಗುವವು.

ದಿನಾಂಕ: 10–04–2023, ಸೋಮವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 12.30 ಗಂಟೆಯವರೆಗೆ ಶ್ರೀ ಜಗದ್ಗುರು ಶ್ರೀ ಶಿವಲಿಂಗೇಶ್ವರರ ಸನ್ನಿಧಿಯಲ್ಲಿ ಸಹಸ್ರಾರು ಸದ್ಭಕ್ತರಿಂದ ಶ್ರೀ ವೀರಭದ್ರೇಶ್ವರ ದೇವರ ಕೊಂಡವನ್ನು ದಾಟುವದು ಮತ್ತು ಸನ್ನಿಧಿಯವರಿಂದ ಆಶೀರ್ವಾದ ಪಡೆಯುವ ಕಾರ್ಯಕ್ರಮ ಜರುಗುವುದು. ಸಂಜೆ 7.30 ಗಂಟೆಗೆ ಮುಖ್ಯ ವೇದಿಕೆಯಲ್ಲಿ ಜಾತ್ರಾ ಮಹೋತ್ಸವವು ಉದ್ಘಾಟನೆಗೊಂಡು, ರಾತ್ರಿ 10.30 ಗಂಟೆಯ ವರೆಗೆ ಶಿವಕೀರ್ತನೆ, ವಿದ್ವಜರ ಭಾಷಣ, ಅತಿಥಿಗಳ ಭಾಷಣ, ಭಕ್ತಿ ವಚನ ಗಾಯನ, ನಾಡಿನ ಪ್ರತಿಷ್ಠಿತ ರೈತರ ಭಾಷಣ, ವಾಣಿಜ್ಯೋದ್ಯಮಿಗಳ ಭಾಷಣ ಜರಗುವುದು. ಸನಾತನ ಪರಂಪರೆಯಂತೆ ಶ್ರೀ ಜಗದ್ಗುರು ಶಿವಲಿಂಗೇಶ್ವರರು ಹಸಿರು ರಾಜಪೋಷಾಕಿನೊಡನೆ ಸಕಲ ರಾಜಮರ್ಯಾದೆ ಬಿರುದಾವಳಿಗಳಿಂದ ಅಲಂಕೃತರಾಗಿ ದರ್ಶನ ನೀಡುವರು.

ಪ್ರತಿದಿನ ಸನ್ನಿಧಿಯವರ ಆಶೀರ್ವಚನ ಜರುಗುವದು. ದಿನಾಂಕ: 18–04–2023 ಮಂಗಳವಾರ ಸಂಜೆ 4.30 ಗಂಟೆಯಿಂದ ಸಂಜೆ 7.30 ಗಂಟೆಯವರೆಗೆ ಅಡ್ಡ ಪಲ್ಲಕ್ಕಿ ಮಹೋತ್ಸವ ಜರುಗುವುದು. ನಂತರ ಹಸಿರು ರಾಜಪೋಷಾಕುಧಾರಿ ಶ್ರೀ ಸನ್ನಿಧಿಯವರಿಂದ ಹಿಂದೂ ಮುಸ್ಲಿಂ ಭಾವೈಕ್ಯತೆಯ ಸಂದೇಶ ಮತ್ತು ಮಂಗಲಾಶೀರ್ವಾದ ಜರುಗುವುದು.

ಇದೇ ಸಂದರ್ಭದಲ್ಲಿ ಕುಸ್ತಿ, ಕೀರ್ತನೆ, ಜಾನುವಾರು ಜಾತ್ರೆ, ವಿದ್ವತ್ ಗೋಷ್ಠಿಗಳು, ಸಂಗೀತ, ನೃತ್ಯ ಹಾಗೂ ಗಣ್ಯರಿಗೆ ಗೌರವಾಶೀರ್ವಾದ ಮುಂತಾದ ಸಾಂಸ್ಕೃತಿ–ಕ ಕಾರ್ಯಕ್ರಮಗಳು ಜರುಗುವವು, ಮಹಾಭಕ್ತಾದಿಗಳಿಗೆ ನಿರಂತರ ದಾಸೋಹ ವ್ಯವಸ್ತೆ ಇದೆ.

ಯಾತ್ರಿಕರಿಗೆ ಮಹಾಪ್ರಸಾದದೊಡನೆ ಹಾಗೂ ಜಾನುವಾರುಗಳಿಗೆ ಸಾಕಷ್ಟು ಕುಡಿಯುವ ನೀರಿನ ವ್ಯವಸ್ಥೆ, ವೈದ್ಯಕೀಯ ಹಾಗೂ ಸಾಧ್ಯವಿದ್ದ ಇತರೆ ವ್ಯವಸ್ಥೆಗಳನ್ನು ಮಾಡಲಾಗುವುದು. ತಾಲೂಕು ಮತ್ತು ಜಿಲ್ಲೆ, ಕರ್ನಾಟಕ ಮತ್ತು ಮಹಾರಾಷ್ಟ್ರ ರಾಜ್ಯಗಳಿಂದ ಜಾತ್ರೆಗೆ ಬರುವ ಯಾತ್ರಿಕ–ರಿಗೆ ಬೆಳಗಾವಿ, ಬಿಜಾಪೂರ, ಧಾರವಾಡ, ಹುಬ್ಬಳ್ಳಿ, ಚಿಕ್ಕೋಡಿ, ಸಂಕೇಶ್ವರ, ನಿಪ್ಪಾಣಿ, ಹುಕ್ಕೇರಿ ರಾಯಬಾಗ, ಅಥಣಿ, ಮುಧೋಳ, ಜಮಖಂಡಿ, ಬಾಗಲಕೋಟೆ, ರಾಮದುರ್ಗ ಮತ್ತು ಕೊಲ್ಹಾಪೂರ ಮುಂತಾದ ಕಡೆಗಳಿಂದ ಬಸ್ಸುಗಳ ವ್ಯವಸ್ಥೆ ಇದೆ. ಗೋಕಾಕ ರೇಲ್ವೇ ಸ್ಟೇಶನ್‌ದಿಂದ ಬಸ್ಸುಗಳ ವ್ಯವಸ್ಥೆ ಇದೆ ಎಂದು ಸಂಸ್ಥೆಯ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಂದಳಿಲು ಬೇಟೆಗಾರನ ಬಂಧಿಸಿದ ಅರಣ್ಯಾಧಿಕಾರಿಗಳು



ಬೆಳಗಾವಿ: ಲೋಂಡಾ ಅರಣ್ಯ ವ್ಯಾಪ್ತಿಯ ತಿವೋಲಿ ಅರಣ್ಯ ಪ್ರದೇಶದಲ್ಲಿ ವಾಸಿಸುವ ಅಳಿವಿನಂಚಿನಲ್ಲಿರುವ ಮತ್ತು ಕಾಡು ಬೆಕ್ಕು ಜಾತಿಯ ಪ್ರಭೇದದ ಅಪರೂಪದ ವನ್ಯಜೀವಿ ಕೆಂದಳಿಲನ್ನು ಬೇಟೆಯಾಡಿದ ಬೇಟೆಗಾರನನ್ನು ಖಾನಾಪುರ ತಾಲೂಕಿನ ಲೋಂಡಾ ವಲಯದ ಅರಣ್ಯಾಧಿಕಾರಿಗಳು ಮಂಗಳವಾರ ಬಂಧಿಸಿದ್ದಾರೆ.

ತಿವೋಲಿ ಗ್ರಾಮದ ನಿವಾಸಿ ಲಾದ್ರು ಲೂಯಿಸ್ ಧಮೆಲ್ ಬಂಧಿತ ಬೇಟೆಗಾರ. ಈತನ ಜೊತೆಗೆ ಬೇಟೆಗೆ ಬಂದಿದ್ದ ಮತ್ತೊಬ್ಬ ಆರೋಪಿ ತಲೆಮರೆಸಿಕೊಂಡಿದ್ದಾನೆ. ಬಂಧಿತನಿಂದ ಒಂದು ನಾಡ ಬಂದೂಕು, ಹಲವು ಜೀವಂತ ಗುಂಡುಗಳು, ಸಿಡಿಮದ್ದು ಪೌಡರ್ ಮತ್ತು ಕೆಂದಳಿಲ ಕಳೇಬರವನ್ನು ವಶಪಡಿಸಿಕೊಂಡು ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ. ಲೋಂಡಾ ವಲಯ ಅರಣ್ಯ ಅಧಿಕಾರಿಗಳ ಕಚೇರಿಯಲ್ಲಿ ಪ್ರಕರಣ ದಾಖಲಾಗಿದೆ.

# ಬಿಗಿಭದ್ರತೆಯಲ್ಲಿ ಮತಕ್ಷೇತ್ರಗಳಿಗೆ ಇವಿಎಂ ರವಾನೆ: ಡಿಸಿ ನಿತೇಶ್ ಪಾಟೀಲ

ಬೆಳಗಾವಿ: ಪ್ರಥಮ ರ್ಯಾಂಡಮೈಜೇಷನ್ ಬಳಿಕ ಕ್ಷೇತ್ರವಾರು ಹಂಚಿಕೆಯಾಗಿರುವ ವಿದ್ಯುನ್ಮಾನ ಮತಯಂತ್ರಗಳನ್ನು (ಇವಿಎಂ) ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಜಿಲ್ಲೆಯ ಹದಿನೆಂಟು ಮತಕ್ಷೇತ್ರಗಳಿಗೆ ಬಿಗಿಭದ್ರತೆಯೊಂದಿಗೆ ರವಾನೆ ಮಾಡಲಾಗುವುದು ಎಂದು ಜಿಲ್ಲಾ ಚುನಾವಣಾಧಿಕಾರಿಗಳೂ ಆಗಿರುವ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಇಲ್ಲಿನ ಹಿಂಡಲಗಾ ಗ್ರಾಮದಲ್ಲಿ ಇರುವ ಭಾರತ ಚುನಾವಣಾ ಆಯೋಗದ ಇವಿಎಂ ಉಗ್ರಾಣದಲ್ಲಿ ಇರುವ ಇವಿಎಂ ಗಳನ್ನು ರ್ಯಾಂಡಮೈಜೇಷನ್ ಪ್ರಕಾರ ಆಯಾ ಕ್ಷೇತ್ರಗಳಿಗೆ ರವಾನಿಸುವ ಪ್ರಕ್ರಿಯೆಯನ್ನು ಬುಧವಾರ (ಏ.5) ಪರಿಶೀಲಿಸಿದ ಬಳಿಕ ಅವರು ಮಾತನಾಡಿದರು.

ರ್ಯಾಂಡಮೈಜೇಷನ್ ನಲ್ಲಿ ಜಿಲ್ಲೆಯ 18 ವಿಧಾನಸಭಾ ಕ್ಷೇತ್ರಗಳಿಗೆ ಹಂಚಿಕೆಯಾಗಿರುವ 5321 ಬ್ಯಾಲೆಟ್ ಯುನಿಟ್ 5321 ಕಂಟ್ರೋಲ್ ಯುನಿಟ್ ಹಾಗೂ 5765 ವಿವಿಪ್ಯಾಟ್ ಗಳನ್ನು ಆಯಾ ಮತಕ್ಷೇತ್ರದ ಸಂಖ್ಯೆ ಮತ್ತು ಹೆಸರುಗಳನ್ನು ಹೊಂದಿರುವ ಸ್ಟಿಕ್ಕರ್ ಗಳನ್ನು ಅಂಟಿಸಿ ದೊಡ್ಡ ಟ್ರಂಕ್ ಗಳಲ್ಲಿ ಭದ್ರಪಡಿಸಿ ಸೀಲ್ ಮಾಡಿದ ಬಳಿಕ ಮತಕ್ಷೇತ್ರಗಳಿಗೆ ಕಳುಹಿಸಲಾಗುತ್ತದೆ.

ಪೊಲೀಸ್ ಬಿಗಿಭದ್ರತೆಯೊಂದಿಗೆ ಜಿಪಿಎಸ್ ಅಳವಡಿಸಿದ ಕಂಟೇನರ್ ವಾಹನಗಳಲ್ಲಿ ಇವಿಎಂ ಗಳನ್ನು ಸಾಗಿಸಲಾಗುತ್ತದೆ ಎಂದು ವಿವರಿಸಿದರು. ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಕೂಡ



ಉಪಸ್ಥಿತರಿದ್ದು, ಇವಿಎಂ ಸಾಗಾಣಿಕೆ ಪ್ರಕ್ರಿಯೆಯನ್ನು ವೀಕ್ಷಿಸಲು ಅವಕಾಶ ನೀಡಲಾಗಿರುತ್ತದೆ ಎಂದರು. ಪ್ರತಿ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ಆಯಾ ಚುನಾವಣಾಧಿಕಾರಿಗಳ ನೇತೃತ್ವದ ತಂಡಗಳು ರ್ಯಾಂಡಮೈಜೇಷನ್ ಪ್ರಕಾರ ತಮಗೆ ಹಂಚಿಕೆಯಾಗಿರುವ ಇವಿಎಂ ಗಳನ್ನು ಚುನಾವಣಾ ಆಯೋಗದ ಮಾರ್ಗಸೂಚಿ ಪ್ರಕಾರ ಅನುಕ್ರಮ ಸಂಖ್ಯೆಗೆ ಅನುಗುಣವಾಗಿ ಉಗ್ರಾಣದಲ್ಲಿ ಪಡೆದುಕೊಂಡರು. ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ಸ್ವತಃ ಪ್ರತಿಯೊಂದು ಕ್ಷೇತ್ರದ ಪ್ರತ್ಯೇಕ ಕೌಂಟರ್ ಗಳಿಗೆ ಕೆಲಹೊತ್ತು ತೆರಳಿ, ವಿದ್ಯುನ್ಮಾನ ಮತಯಂತ್ರಗಳ ಕ್ರಮ ಸಂಖ್ಯೆಗಳನ್ನು ಪರಿಶೀಲಿಸಿ ವಿತರಿಸಿದರು.

ಈ ಸಂದರ್ಭದಲ್ಲಿ ಯಾವುದೇ ಗೊಂದಲ ಉಂಟಾಗದಂತೆ ಎಚ್ಚರಿಕೆ ವಹಿಸಬೇಕು ಎಂದು ಚುನಾವಣಾಧಿಕಾರಿ ಗಳಿಗೆ ನಿರ್ದೇಶನ ನೀಡಿದರು. ವಿವಿಧ ಮತಕ್ಷೇತ್ರಗಳ ಚುನಾವಣಾಧಿಕಾರಿಗಳಾದ ಗೀತಾ ಕೌಲಗಿ, ಡಾ. ರಾಜೀವ್ ಕೂಲೇರ, ಡಾ.ರುದ್ರೇಶ್ ಘಾಳಿ, ಬಲರಾಮ್ ಚವಾಣ, ರಾಜಶೇಖರ್ ಡಂಬಳ ಸೇ-ರಿದಂತೆ ನೋಡಲ್ ಅಧಿಕಾರಿಗಳಾದ ಪ್ರೀತಂ ನಸಲಾಪುರೆ ಮತ್ತಿತರರು ಉಪಸ್ಥಿತರಿದ್ದರು.

# ರಾಜ್ಯದ 36 ಕ್ಷೇತ್ರಗಳ ಪೈಕಿ 25ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲುವ ಗುರಿ: ಆರ್. ಧರ್ಮಸೇನ್

ಬೆಳಗಾವಿ: ರಾಜ್ಯದ 36 ಕ್ಷೇತ್ರಗಳ ಪೈಕಿ 25ಕ್ಕೂ ಹೆಚ್ಚು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಗೆಲ್ಲುವ ಗುರಿಯೊಂದಿಗೆ ಕೆಲಸ ಮಾಡುತ್ತಿದ್ದೇವೆ. ಪಕ್ಷದ ಪರಿಶಿಷ್ಟ ಜಾತಿ-ಪಂಗಡ ಮತ್ತು ಇತರೆ ಹಿಂದುಳಿದ ವರ್ಗಗಳ ಜಂಟಿ ಪ್ರಯತ್ನದಿಂದ ಹೆಚ್ಚಿನ ಸ್ಥಾನಗಳನ್ನು ಗೆಲ್ಲುವ ಮೂಲಕ ಕರ್ನಾಟಕದ ಮೂಲಕ ದೇಶಕ್ಕೆ ಹೊಸ ಸಂದೇಶ ನೀಡಲು ಪ್ರಯತ್ನಿಸಲಾಗುವುದು ಎಂದು ಕಾಂಗ್ರೆಸ್ ಎಸ್ಸಿ ವಿಭಾಗದ ರಾಜ್ಯಾಧ್ಯಕ್ಷ ಆರ್. ಧರ್ಮಸೇನ್ ಹೇಳಿದರು.

ನಗರದ ಕಾಂಗ್ರೆಸ್ ಭವನದಲ್ಲಿ ಕಾಂಗ್ರೆಸ್ ಎಸ್ ಸಿ ಬೆಳಗಾವಿ ವಿಭಾಗದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರ ಸಭೆ ನಡೆಸಿ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚುನಾವಣೆ ಹಿನ್ನೆಲೆಯಲ್ಲಿ ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ ಪರಿಶಿಷ್ಟ ಜಾತಿ ವಿಭಾಗದ ವತಿಯಿಂದ ರಾಜ್ಯದ 4 ವಿಭಾಗಗಳಲ್ಲಿ ಪಕ್ಷ ಸಂಘಟನೆ ಹಾಗೂ ಎಸ್ ಸಿ ಕಾರ್ಯಕರ್ತರ ಸದಸ್ಯತ್ವ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಕಳೆದ ವರ್ಷ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷ ಸ್ಥಾನವನ್ನು ವಹಿಸಿಕೊಂಡ ನಂತರ ರಾಜ್ಯಾದ್ಯಂತ 13,000 ಕ್ಕೂ ಹೆಚ್ಚು ಎಸ್ಸಿ ಪದಾಧಿಕಾ-




ರಿಗಳು ನೋಂದಾಯಿಸಿಕೊಂಡಿದ್ದಾರೆ. ಮೈಸೂರು ಮತ್ತು ಬೆಂಗಳೂರು ವಿಭಾಗದಲ್ಲಿ ಪಕ್ಷವನ್ನು ಬಲಪಡಿಸುವ ಅಭಿಯಾನಕ್ಕೆ ಚಾಲನೆ ನೀಡಲಾಗಿದ್ದು, ಇಂದು ಬೆಳಗಾವಿಯಲ್ಲಿ ಹಾಗೂ ನಾಳೆ ಕಲಬುರ್ಗಿ ವಿಭಾಗದಲ್ಲಿ ಪ್ರಚಾರ ಕಾರ್ಯ ನಡೆಯಲಿದೆ. 25 ಸಾವಿರಕ್ಕೂ ಹೆಚ್ಚು ಅಧಿಕಾರಿಗಳು ಹಾಗೂ ಸದಸ್ಯರ ನೋಂದಣಿ ಗುರಿ ನಿಗದಿಪಡಿಸಲಾಗಿದೆ ಎಂದರು.

ರಾಜ್ಯದಲ್ಲಿ ಎಚ್. ಸಿ. ಕೋಟೆ ಕ್ಷೇತ್ರಗಳಂತೆ ಎಸ್ಸಿ ಜನಸಂಖ್ಯೆ ಹೆಚ್ಚಿದ್ದರೂ ಕೆಲವು ಕ್ಷೇತ್ರಗಳನ್ನು ಎಸ್ಟಿಗೆ ಮೀಸಲಿಡಲಾಗಿದೆ. ಅಂತಹ ಕ್ಷೇತ್ರಗಳಲ್ಲಿ ನಾಯಕರ ಮಾರ್ಗದರ್ಶನದಲ್ಲಿ ಕಾಂಗ್ರೆಸ್ನ ಎಸ್ಸಿ, ಎಸ್ಟಿ ಮತ್ತು ಒಬಿಸಿ ಶಾಖೆಗಳ ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಒಗ್ಗಟ್ಟಿನಿಂದ ಕಾಂಗ್ರೆಸ್ ಗೆಲುವಿಗೆ ಶ್ರಮಿಸಲಿದ್ದಾರೆ ಎಂದು ಧರಂಸೇನ್ ಹೇಳಿದರು. ಕಾಂಗ್ರೆಸ್ ಎಸ್ಸಿ ಇಲಾಖೆಯಿಂದ "ದಲಿತರ ಹೆಜ್ಜೆ ಕಾಂಗ್ರೆಸ್ ಅಭಿಯಾನವನ್ನು ಪರಿಣಾಮಕಾರಿಯಾಗಿ ಜಾ-ರಿಗೊಳಿಸಲಾಗಿದೆ. ನ್ಯಾಷನಲ್ ಕಾಲೇಜು ಮೈದಾನದಲ್ಲಿ ಇತ್ತೀಚೆಗೆ ನಡೆದ ಸಭೆಯಲ್ಲಿ ರಾಜ್ಯದ ಎಲ್ಲ ದಲಿತ ಮುಖಂಡರು ಈ ಚುನಾವಣೆಯಲ್ಲಿ ಕಾಂಗ್ರೆಸಗೆ ಬೆಂಬಲ ನೀಡುವುದಾಗಿ ಘೋಷಿಸಿದ್ದಾರೆ. ಪಕ್ಷದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಡಿ. ಕೆ. ಶಿವಕುಮಾರ್, ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಹಾಗೂ ಈ ಕ್ಷೇತ್ರದಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ, ಎಚ್. ಕೆ. ಪಾಟೀಲ ಹಾಗೂ ಇತರ ಹಿರಿಯ ನಾಯಕರ ಮಾರ್ಗದರ್ಶನದಲ್ಲಿ ಕಾಂಗ್ರೆಸ್ ಪರಿಶಿಷ್ಟ ಜಾತಿ ಇಲಾಖೆಯು ರಾಜ್ಯದಲ್ಲಿ ಕಾಂಗ್ರೆಸ್ ಗೆ 128ಕ್ಕೂ ಹೆಚ್ಚು ಸ್ಥಾನಗಳನ್ನು ಗೆಲ್ಲಿಸಲು ಶ್ರಮಿಸಲಿದೆ ಎಂದು ಆರ್. ಧರಂಸೇನ್ ಈ ಸಂದರ್ಭದಲ್ಲಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಗ್ರಾಮೀಣ ಜಿಲ್ಲಾಧ್ಯಕ್ಷ ವಿನಯ್ ನಾವಲಗಟ್ಟಿ, ಮಲ್ಲೇಶ ಚೌಗುಲೆ, ಜಕ್ಕಪ್ಪಣ್ಣವರ, ಹಿಂಡಸಗೇರಿ, ಪ್ರಕಾಶ, ಪ್ರದೀಪ, ಕಾಂಗ್ರೆಸ್ ಅಲ್ಪಸಂಖ್ಯಾತರ ಇಲಾಖೆಯ ಜಿಲ್ಲಾ ಉಪಾಧ್ಯಕ್ಷ ಸಲೀಂ ಖತೀಬ್ ಮತ್ತಿತರರು ಉಪಸ್ಥಿತರಿದ್ದರು.

## ದಾಖಲೆ ಇಲ್ಲದ 53 ಲಕ್ಷ ಮೌಲ್ಯದ ವಸ್ತುಗಳು ಜಪ್ತಿ



ಬೆಳಗಾವಿ: ಸೂಕ್ತ ದಾಖಲೆಗಳಿಲ್ಲದೇ ಸಾಗಿಸುತ್ತಿದ್ದ ಚಿನ್ನ, ಬೆಳ್ಳಿ ಆಭರಣ ಕಾರಿನ ಮೇಲೆ ದಾಳಿ ನಡೆಸಿ 53 ಲಕ್ಷ ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ.

ಬೆಳಗಾವಿ ಜಿಲ್ಲೆಯ ನಂದಗಡ ಠಾಣೆಯ ಪೊಲೀಸರು ಭರ್ಜರಿ ಕಾರ್ಯಾಚರಣೆ ಮಾಡಿದ್ದು ಚಿನ್ನ, ಬೆಳ್ಳಿ ಆಭರಣ ಸಾಗಿಸುತ್ತಿದ್ದ ಕಾ-ರಿನ ಸಮೇತ 53.33 ಲಕ್ಷ ಮೌಲ್ಯದ ವಸ್ತುಗಳು ಜಪ್ತಿ ಮಾಡಿದ್ದಾರೆ. 21,25,304 ರೂ. ಮೌಲ್ಯದ 395.7 ಗ್ರಾಂ ಚಿನ್ನ ಹಾಗೂ 19,08,420 ರೂ ಮೌಲ್ಯದ 28.065 ಕೆ.ಜಿ ಬೆಳ್ಳಿ ವಶಕ್ಕೆ ತೆಗೆದುಕೊಂಡಿದ್ದಾರೆ.

ಹಳಿಯಾಳದಿಂದ ಕಕ್ಕೇರಿಗೆ ಯಾವುದೇ ಬಿಲ್ ಇಲ್ಲದೆ ಕಾರಿನಲ್ಲಿ ಆಭರಣಗಳ ಸಾಗಾಟ ಮಾಡುತ್ತಿದೆ ಆರೋಪದ ಮೇಲೆ ಕಾರನ್ನು ಅಡ್ಡಗಟ್ಟಿ ತಪಾಸಣೆ ಮಾಡಿದಾಗ ಕಾರಿನಲ್ಲಿ ಚಿನ್ನ, ಬೆಳ್ಳಿ ಆಭರಣ ಜೊತೆಗೆ 13 ಲಕ್ಷ ರೂ. ಮೌಲ್ಯದ ಕಾರು ಸೇರಿ 53,33,724 ರೂ. ಮೌಲ್ಯದ ವಸ್ತುಗಳು ವಶಕ್ಕೆ ಪಡೆದುಕೊಳ್ಳಲಾಗಿದೆ.

ಚುನಾವಣೆ ಹಿನ್ನೆಲೆಯಲ್ಲಿ ಖಾನಾಪುರ ಕ್ಷೇತ್ರ ದಲ್ಲಿ ತಪಾಸಣೆ ವೇಳೆ ವಸ್ತುಗಳು ಪತ್ತೆಯಾಗಿದ್ದು, ಹಳಿಯಾಳ ಮೂಲದ ಧರ್ಮರಾಜ್ ಕುಟ್ರೆ ಎಂಬವರನ್ನ ನಂದಗಡ ಠಾಣೆ ಪೊಲೀಸರು ಬಂಧಿಸಿದ್ದಾರೆ. ಖಾನಾಪುರ ತಾಲೂಕಿನ ನಂದಗಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಡಾ.ಬಾಬು ಜಗಜೀವನರ ಜೀವನ ಪ್ರತಿಯೊಬ್ಬರಿಗೂ ಆದರ್ಶ

ಹುಕ್ಕೇರಿ: ಉತ್ತಮ ಕೃಷಿ ಸಮಾಜ ನಿರ್ಮಾಣ, ಶೋಷಿತ ಸಮುದಾಯಗಳ ಜಾಗೃತಿಗೆ ಒತ್ತು ನೀಡಿದ ಹಸಿರು ಕ್ರಾಂತಿ ಹರಿಕಾರ ಡಾ.ಬಾಬು ಜಗಜೀವನರ ಜೀವನ ಪ್ರತಿಯೊಬ್ಬರಿಗೂ ಆದ-'ರ್ಶ ಎಂದು ಶಿಕ್ಷಕಿ ಎಲ್.ಕೆ. ನಾಗಿಣಿ ಹೇಳಿದರು.

ತಾಲೂಕಾ ಆಡಳಿತ ಮತ್ತು ಸಮಾಜ ಕಲ್ಯಾಣ ಇಲಾಖೆ ಆಶ್ರಯದಲ್ಲಿ ನಡೆದ

ಹಸಿರುಕ್ರಾಂತಿ ಹರಿಕಾರ ಡಾ, ಬಾಬು ಜಗಜೀವನರಾಮ 116 ನೇ ಜಯಂತಿ ಉತ್ಸವವನ್ನು ಅದ್ದೂರಿಯಾಗಿ ಜರುಗಿದ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮುಖಂಡರಾದ ಸಂತೋಷ ದೊಡಮನಿ,ವಿಠಲ ಮಾದರ,ಶ್ರೀಕಾಂತ ತಳವಾರ ಉಪನ್ಯಾಸ ನೀಡಿದರು.

ಉಪತಹಶಿಲ್ದಾರ ಎನ್ ಅರ.



ಪಾಟೀಲ.ಅಧ್ಯಕ್ಷತೆ ವಹಿಸಿದ್ದರು. ದೌರ್ಜನ್ಯ ನಿಯಂತ್ರಣ ಸಮಿತಿ ಸದಸ್ಯ ರಮೇಶ ಹುಂಜಿ, ಹುಕ್ಕೇರಿ ಪುರಸಭೆ ಮುಖ್ಯಾಧಿಕಾರಿ ರಾಜಶ್ರೀ ತುಂಗಳ, ಪೋಲಿಸ್ ಇನ್ಸಪೇಕ್ಟರ ರಫೀಕ ತಹಸಿಲ್ದಾರ, ಸಂಕೇಶ್ವರ ಮುಖ್ಯಾಧಿಕಾರಿ ಉಮೇಶ ಗುಡ್ಡದ ಉಪಸ್ಥಿತ-ರಿದ್ದರು.

ಸಮಾಜ ಕಲ್ಯಾಣ ಸಹಾಯಕ ನಿರ್ದೇಶಕ ಎಚ್ ಎ ಮಾಹುತ ಪ್ರಾಸ್ತಾವಿಕವಾಗಿ ಮಾತನಾಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಮೋಹನ ದಂಡಿನ ಸ್ವಾಗತಿಸಿದರು. ಶಿಕ್ಷಣ ಸಂಯೋಜ-ಕ ಎಮ.ವಿ.ಮಾಸ್ತಮರ್ಡಿ ನಿರೂಪಿಸಿದರು. ಮೇಲ್ವಿಚಾರಕಿ. ಎಸ.ಪಿ ಹಿರೇಮಠ ವಂದಿಸಿದರು.

ಭಾವ ಚಿತ್ರದ ಮೆರವಣಿಗೆ:

ಪಟ್ಟಣದ ಅಡವಿ ಸಿದ್ದೇಶ್ವರ ಮಠದ ಆವರಣದಲ್ಲಿ ಜಗಜೀವನರಾಮರ ಭಾವಚಿತ್ರಕ್ಕೆ ಉಪ ತಹಸಿಲ್ದಾರ ಎನ್ ಆರ್ ಪಾಟೀಲ ಪೂಜೆ ಸಲ್ಲಿಸಿ ಮೆರವಣಿಗೆ ಚಾಲನೆ ನೀಡಿದರು. ಮುಖಂಡರಾದ ಉದಯ ಹುಕ್ಕೇರಿ, ಮಾತನಾಡಿ ಸಾಮಾಜಿಕ, ಶೈಕ್ಷಣಿಕ,ರಾಜ-ಕೀಯ, ಧಾರ್ಮಿಕವಾಗಿ ಎಲ್ಲ ರಂಗಗಳಲ್ಲಿ ಸಮಾಜಪೂರಕ ಸೇವೆ ನೀಡಿದ ಶ್ರೇಯಸ್ಸು ಡಾ.ಬಾಬು ಜಗಜೀವನರಾಮ ಅವರಿಗೆ ಸಲ್ಲುತ್ತದೆ.

ಸಮಾಜ ಮುಖಂಡರಾದ ಬಾಹುಸಾಹೇಬ ಪಾಂಡ್ರೆ, ಕೆಂಪಣ್ಣ ಶಿರಹಟ್ಟಿ, ಸದಾಶಿವ ಕಾಂಬಳೆ, ಶಂಕರ ಕಟ್ಟಿಮನಿ, ಶಶಿಕಾಂತ ಹೊನ್ನಳ್ಳಿ, ಅರುಣ ಮಾಳಗೆ, ಕಾಡೇಶ ಹೊಸಮನಿ,ವಿಶಾಲ ಸೂರ್ಯವಂಶಿ, ಗೋಪಾಲ ಕಾಂಬಳೆ, ಬಿ ಕೆ ಸದಾ, ಮಲ್ಲೇಶಿ ಭಂಡಾರೆ,ಶ್ರೀಕಾಂತ ತಳವಾರ, ಕರೆಪ್ಪಾ ಗುಡೆನ್ನವರ, ಸರೋಜಾ ಕಾಂಬಳೆ, ಎಲ್ ಬಿ ಮಾಲದಾರ, ಎಸ್ ಎಮ್ ನಡಮನಿ, ಎಮ್ ಬಿ ಕಾಂಬಳೆ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ದಾಖಲೆ ಇಲ್ಲದ 53 ಲಕ್ಷ ಮೌಲ್ಯದ ವಸ್ತುಗಳು ಜಪ್ತಿ



ಬೆಳಗಾವಿ: ಸೂಕ್ತ ದಾಖಲೆಗಳಿಲ್ಲದೇ ಸಾಗಿಸುತ್ತಿದ್ದ ಚಿನ್ನ, ಬೆಳ್ಳಿ ಆಭರಣ ಕಾರಿನ ಮೇಲೆ ದಾಳಿ ನಡೆಸಿ 53 ಲಕ್ಷ ಮೌಲ್ಯದ ವಸ್ತುಗಳನ್ನು ಜಪ್ತಿ ಮಾಡಿದ್ದಾರೆ.

ಬೆಳಗಾವಿ ಜಿಲ್ಲೆಯ ನಂದಗಡ ಠಾಣೆಯ ಪೊಲೀಸರು ಭರ್ಜರಿ ಕಾರ್ಯಾಚರಣೆ ಮಾಡಿದ್ದು ಚಿನ್ನ, ಬೆಳ್ಳಿ ಆಭರಣ ಸಾಗಿಸುತ್ತಿದ್ದ ಕಾ-ರಿನ ಸಮೇತ 53.33 ಲಕ್ಷ ಮೌಲ್ಯದ ವಸ್ತುಗಳು ಜಪ್ತಿ ಮಾಡಿದ್ದಾರೆ. 21,25,304 ರೂ. ಮೌಲ್ಯದ 395.7 ಗ್ರಾಂ ಚಿನ್ನ ಹಾಗೂ 19,08,420 ರೂ ಮೌಲ್ಯದ 28.065 ಕೆ.ಜಿ ಬೆಳ್ಳಿ ವಶಕ್ಕೆ ತೆಗೆದುಕೊಂಡಿದ್ದಾರೆ.

ಹಳಿಯಾಳದಿಂದ ಕಕ್ಕೇರಿಗೆ ಯಾವುದೇ ಬಿಲ್ ಇಲ್ಲದೆ ಕಾರಿನಲ್ಲಿ ಆಭರಣಗಳ ಸಾಗಾಟ ಮಾಡುತ್ತಿದೆ ಆರೋಪದ ಮೇಲೆ ಕಾರನ್ನು ಅಡ್ಡಗಟ್ಟಿ ತಪಾಸಣೆ ಮಾಡಿದಾಗ ಕಾರಿನಲ್ಲಿ ಚಿನ್ನ, ಬೆಳ್ಳಿ ಆಭರಣ ಜೊತೆಗೆ 13 ಲಕ್ಷ ರೂ. ಮೌಲ್ಯದ ಕಾರು ಸೇರಿ 53,33,724 ರೂ. ಮೌಲ್ಯದ ವಸ್ತುಗಳು ವಶಕ್ಕೆ ಪಡೆದುಕೊಳ್ಳಲಾಗಿದೆ.

ಚುನಾವಣೆ ಹಿನ್ನೆಲೆಯಲ್ಲಿ ಖಾನಾಪುರ ಕ್ಷೇತ್ರ ದಲ್ಲಿ ತಪಾಸಣೆ ವೇಳೆ ವಸ್ತುಗಳು ಪತ್ತೆಯಾಗಿದ್ದು, ಹಳಿಯಾಳ ಮೂಲದ ಧರ್ಮರಾಜ್ ಕುಟ್ರೆ ಎಂಬವರನ್ನ ನಂದಗಡ ಠಾಣೆ ಪೊಲೀಸರು ಬಂಧಿಸಿದ್ದಾರೆ. ಖಾನಾಪುರ ತಾಲೂಕಿನ ನಂದಗಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರಂಗಸಂಪದ ಕಲಾವಿದರಿಂದ ಸಂತೋಷ ಕೂಟ

ಬೆಳಗಾವಿ: ಬೆಳಗಾವಿ ರಂಗಸಂಪದವು ವಿಶ್ವರಂಗಭೂಮಿ ದಿನಾಚರಣೆಯ ಅಂಗವಾಗಿ ಬೆಳಗಾವಿಯ ಪ್ರೇಕ್ಷಕರಿಗಾಗಿ ಎರಡು ನಾಟಕಗಳನ್ನು ಆಯೋಜಿತ್ತು. ರಂಗಸಂಪದದ ಅಧ್ಯಕ್ಷರಾದ ಡಾ. ಅರವಿಂದ ಕುಲಕರ್ಣಿಯವರ ನಿರ್ದೇಶನದಲ್ಲಿ ಸ್ತ್ರೀ ಪ್ರಧಾನ ನಾಟಕ 'ಪಂಚಕನ್ಯಾ ಸ್ಮರೇ ನಿತ್ಯಂ' ಹಾಗೂ ಹಾಸ್ಯ ಪ್ರಧಾನ ನಾಟಕ 'ಮುದ್ದಣ್ಣನ ಪ್ರಮೋಷನ್ ಪ್ರಸಂಗ' ಪ್ರೇಕ್ಷಕರನ್ನು ರಂಜಿಸಿದವು.

ಈ ಎರಡೂ ನಾಟಕಗಳ ಯಶಸ್ಸಿನ ನಿಮಿತ್ತ ರಂಸಂಪದ ತಂಡ ಸಂತಸಕೂಟವನ್ನು ತಿಲಕವಾಡಿಯ ನ್ಯೂ ಉದಯ ಭವನದಲ್ಲಿ ಇದೇ ದಿ. 2 ರಂದು ಸಾಯಂಕಾಲ 5-30 ಕ್ಕೆ ಹಮ್ಮಿಕೊಂಡಿತ್ತು. ಈ ಸಂದರ್ಭದಲ್ಲಿ ರಂಗಸಂಪದದ ಎಲ್ಲ ಕಲಾವಿದರು, ರಂಗಸಂಪದದ ಆಡಳಿತ ಮಂಡಳಿಯ ಸದಸ್ಯರು, ಪೋಷಕರು, ಕಲಾವಿದರ ಕುಟುಂಬದ ಸದಸ್ಯರು



ಉಪಸ್ಥಿತರಿದ್ದರು.

ಪಂಚಕನ್ಯಾ ಸ್ಮರೇ ನಿತ್ಯಂ ನಾಟಕದ ಕಲಾವಿದೆ ಪವಿತ್ರಾ ರೇವಣಕರ ಅವರು ಮಾತನಾಡಿ ನನ್ನೊಳಗೊಂದು ಕಲೆಯಿದೆಯೆಂದು ನನಗೆ ಗೊತ್ತೇ ಇರಲಿಲ್ಲ. ರಂಗಸಂಪದ ನನಗೊಂದು ವೇದಿಕೆಯನ್ನು ನೀಡುವುದರ ಮೂಲಕ ಪ್ರೋತ್ಸಾಹ ನೀಡಿದೆ ಅದಕ್ಕಾಗಿ ನಾನು ಋಣಿಯಾಗಿದ್ದೇನೆ ಎಂದು ಹೇಳಿದರು.

ಡಾ, ನಿರ್ಮಲಾ ಬಟ್ಟಲ ಪಂಚಕನ್ಯಾ ಸ್ಮರೇ ನಿತ್ಯಂ ಹಾಗೂ ಮುದ್ದಣ್ಣನ ಪ್ರಮೋಶನ್ ಪ್ರಸಂಗ ಎರಡೂ ನಾಟಕಗಳ ಯಶಸ್ಸಿಗೆ ಡಾ, ಅರವಿಂದ ಕುಲಕರ್ಣಿಯವರ ನಿರ್ದೇಶನವೇ ಕಾರಣ. ನಮ್ಮೆಲ್ಲರ ಒಳಗಿರುವ ಕಲಾವಿದನನ್ನು ತಮ್ಮ ನಿರ್ದೇಶನದಿಂದ ಹೊರತಂದಿದ್ದಾರೆ. ರಂಗಸಂಪದದೊಂದಿಗೆ ಕೆಲಸ ಮಾಡುವುದೇ ನನಗೊಂದು ಅಭಿಮಾನದ ಸಂಗತಿ ಎಂದು ಹೆಳಿದರು.

ಕಲಾವಿದೆ ಶ್ರೀಮತಿ ಪದ್ಮಾ ಕುಲಕರ್ಣಿ, ಯುವ ಪೀಳಿಗೆಗಳಲ್ಲಿ ನಾಟಕ ರಂಗದತ್ತ ಅಭಿರುಚಿ ಮೂಡಿಸಬೇಕಾಗಿದೆ. ಹೆಚ್ಚಿನ ಜನ ರಂಗಭೂಮಿ ಎಂದರೆ ಕೇವಲ ಅಭಿನಯವಷ್ಟೆ ಎಂದು ತಿಳಿದುಕೊಂಡಿದ್ದಾರೆ. ನೆಳಲು,ಬೆಳಕು, ಸಂಗೀತ, ನಿರ್ದೇಶನ ಮುಂತಾದವುಗಳನ್ನು ತಿಳಿದುಕೊಳ್ಳುವುದರೊಂದಿಗೆ ಅವುಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕೆಂದರು.

ನಾಟಕಗಳ ನಿರ್ದೇಶಕ ಡಾ. ಅರವಿಂದ ಕುಲಕರ್ಣಿಯವರು ಮಾತನಾಡಿ ಈ ನಾಟಕಗಳ ಯಶಸ್ಸಿಗೆ ಎಲ್ಲ ಕಲಾವಿದರು ಹಾಗೂ ನಾಟಕವನ್ನು ಪ್ರೀತಿಯಿಂದ ನೋಡಿ ಸಂತಸ ಪಟ್ಟ ಪ್ರೇಕ್ಷಕರೇ ಕಾರಣ. ನನ್ನದೇನಿಲ್ಲ ಎಂದು ವಿನಮ್ರರಾಗಿ ಹೇಳಿದರು.

ಯೋಗೇಶ ದೇಸಪಾಂಡೆ, ಶ್ರೀನಿವಾಸ ಕುಲಕರ್ಣಿ, ಶರಣಯ್ಯ ಮಠಪತಿ, ಅರವಿಂದ ಪಾಟೀಲ, ಪದ್ಮಾ ಕುಲಕರ್ಣಿ, ಗಾಯತ್ರಿ ಜೈನಾಪುರ, ಪೂಜಾ ಸಾವಂತ, ಪ್ರತಿಭಾ ಕಳ್ಳಿಮನಿ, ಮುಕುಂದ ನಿಂಗಣ್ಣವರ, ರುದ್ರೇಶ ಹಿರೇಮಠ, ಆರ್. ವಿ. ಭಟ್, ಮಂಜುನಾಥ ಮುಂತಾದವರು ಉಪಸ್ಥಿತ-ರಿದ್ದರು.

## ನಡುರಸ್ತೆಯಲ್ಲೇ ಹೊತ್ತಿ ಉರಿದ ವಾಹನ



ಬೆಳಗಾವಿ: ಬೆಳಗಾವಿ ತಾಲ್ಲೂಕಿನ ಹಿರೇ ಬಾಗೇವಾಡಿಯ ಕೆ.ಕೆ.ಕೊಪ್ಪ ಕ್ರಾಸ್ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ತಾಂತ್ರಿಕ ದೋಷದಿಂದ ವಾಹನಕ್ಕೆ ಬೆಂಕಿ ಹೊತ್ತಿಕೊಂಡು ರೂ 5 ಲಕ್ಷ ಹಾನಿಯಾಗಿದೆ.

ಧಾರವಾಡ ಕಡೆಯಿಂದ ಬೆಳಗಾವಿಗೆ ವಾಷಿಂಗ್ ಮಷಿನ್ ಸಾಗಿಸುತ್ತಿದ್ದ ವಾಹನ ಚಲಿಸುತ್ತಿದ್ದಾಗಲೇ ಬೆಂಕಿ ಕಾಣಿಸಿಕೊಂಡಿತು.

ತಕ್ಷಣ ರಸ್ತೆ ಬದಿಗೆ ವಾಹನ ನಿಲ್ಲಿಸಿದ ಚಾಲಕ, ವಾಷಿಂಗ್ ಮಷಿನ್‌ಗಳನ್ನು ಕೆಳಗೆ ಇಳಿಸಿದರು.

ಆದರೂ ಅಷ್ಟರೊಳಗೆ ಎರಡು ಮಷಿನ್‌ಗಳು ಹಾಗೂ ವಾಹನ ಸಂಪೂರ್ಣ ಸುಟ್ಟಿತು.

ಇನ್ನೂ ಹೆದ್ದಾರಿಯಲ್ಲಿ ಪೆಟ್ರೋಲಿಂಗ್‌ನಲ್ಲಿದ್ದ ಪೊಲೀಸರು ಸ್ಥಳಕ್ಕೆ ಧಾವಿಸಿ ಅಗ್ನಿಶಾಮಕ ಠಾಣೆಗೆ ಕರೆ ಮಾಡಿದರು.

ಘಟನೆಯ ಬಗ್ಗೆ ಹಿರೇಬಾಗೇವಾಡಿ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಲಾರಿ ಡಿಕ್ಕಿ: ಪಾದಾಚಾರಿ ಸಾವು

ಬೆಳಗಾವಿ: ಪಾದಾಚಾ-ರಿಗೆ ಲಾರಿಯೊಂದು ಡಿಕ್ಕಿ ಹೊಡೆದ ಪರಿಣಾಮ ಪಾದಾಚಾರಿ ಸ್ಥಳದಲ್ಲಿಯೇ ಮೃತಪಟ್ಟ ಘಟನೆ ನಗರದ ಕೇಶ್ವಾಪೂರ ರಸ್ತೆಯ ಮಧುರಾ ಕಾಲೋನಿ ಬಳಿ ನಡೆದಿದೆ.

ವ್ಯಕ್ತಿಯೊಬ್ಬರು ರಸ್ತೆ ಬದಿಯಿಂದ ಇನ್ನೊಂದು ರಸ್ತೆ ಬದಿಗೆ ಸಾಗುತ್ತಿದ್ದ ಸಂದರ್ಭದಲ್ಲಿ ವೇಗವಾಗಿ ಬಂದ ಲಾರಿ ಡಿಕ್ಕಿ ಹೊಡೆದಿದೆ. ಇದರಿಂದ ಸ್ಥಳದಲ್ಲೇ ವ್ಯಕ್ತಿ ಮಥಪಟ್ಟಿದ್ದಾರೆ. ಮೃತಪಟ್ಟ ವ್ಯಕ್ತಿಯ ಹೆಸರು ತಿಳಿದು ಬಂದಿಲ್ಲ. ಸ್ಥಳಕ್ಕೆ ಪೂರ್ವ ಸಂಚಾರಿ ಠಾಣೆಯ ಪೊಲೀಸರು ಘಟನಾ ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿದ್ದಾರೆ. ಈ ಕುರಿತು ಪೂರ್ವ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಜಗಜೀವನ್ ರಾಮ್‌ರ ವಿಚಾರ-ಚಿಂತನೆಗಳನ್ನು ಅಳವಡಿಸಿಕೊಳ್ಳಿ: ಬಸವರಾಜ ಅರವಳ್ಳಿ

ಬೆಳಗಾವಿ: ಡಾ. ಬಾಬು ಜಗಜೀವನ್ ರಾಮ್ ಅವರು ತಮ್ಮ ಬದುಕಿನುದ್ದಕ್ಕೂ ಹೋರಾಡಿದ ಮಹಾನ್ ವ್ಯಕ್ತಿ . ಈ ದೇಶದಲ್ಲಿ ಬೇರೂರಿದ್ದ ಅಸ್ಪೃಶ್ಯತೆಯನ್ನು ಹೋಗಲಾಡಿಸಲು ತಮ್ಮ ಬದುಕು ಮೀಸಲಿಟ್ಟ ಮಹಾನ್ ವ್ಯಕ್ತಿ ಎಂದು ಕೆ.ವಿ.ಜಿ ಬ್ಯಾಂಕಿನ ನಿವೃತ್ತ ವ್ಯವಸ್ಥಾಪಕರಾದ ಬಸವರಾಜ ವಾಯ್.ಅರವಳ್ಳಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಾನಗರ ಪಾಲಿಕೆಯ ಸಂಯುಕ್ತಾಶ್ರಯದಲ್ಲಿ ಸಂಗಮೇಶ್ವರ ನಗರದ ಡಾ. ಬಾಬು ಜಗಜೀವನ್ ರಾಮ್ ಉದ್ಯಾನವನದಲ್ಲಿ ಬುಧವಾರ (ಏ.5) ಏರ್ಪಡಿಸಲಾಗಿದ್ದ ಡಾ. ಬಾಬು ಜಗಜೀವನ್ ರಾಮ್ ಅವರ 116 ನೇ ಜನ್ಮದಿನಾಚರಣೆಯ ಸಮಾರಂಭದಲ್ಲಿ ಅವರು ಉಪನ್ಯಾಸ ನೀಡಿದರು.

ಕೇಂದ್ರದ ಸಚಿವ ಸಂಪುಟದಲ್ಲಿ ಕಾರ್ಮಿಕ ಮಂತ್ರಿ ಯಾಗಿ ಸಮಾಜದ ಸಮಸ್ಯೆ, ಕಾರ್ಮಿಕರ ಸಮಸ್ಯೆ ಹೀಗೇ ಹತ್ತು ಹಲವು ಸಮಸ್ಯೆಗಳನ್ನು ಹೋಗಲಾಡಿಸಿದರು. ಸಚಿವರಾಗಿ,ಉಪ ಪ್ರಧಾನಿಗಳಾಗಿ, ಸಮಾಜದ ಸಮಗ್ರ ಅಭಿವೃದ್ಧಿಗೆ ಸೇವೆ ಸಲ್ಲಿಸಿದ ಅವರು, ಸಮಾಜದಲ್ಲಿ ಜಾತಿ ಧರ್ಮ ಅಸಮಾನತೆಯನ್ನು ಹೋಗಲಾಡಿಸುವುದರ ಮೂಲಕ ಸಮಾಜದ ಸಮಾನತೆಗಾಗಿ ಶ್ರಮಿಸಿದವರು ಎಂದು ಹೇಳಿದರು.

ಸಾರಿಗೆ ಮಂತ್ರಿಯಾಗಿ ವಿಮಾನ ಯಾನವನ್ನು ಸಹ ಮೊದಲು ರಾಷ್ಟ್ರೀಕೃತ ಮಾಡಿದರು ಮತ್ತು ರೈಲ್ವೆ ಮಂತ್ರಿ ಯಾಗಿಯೂ ಸಹ ಸಮರ್ಪಕವಾದ ಆಡಳಿತ ನಡೆಸಿದರು. ಇದನ್ನು ಸಹಿಸದ ಜನರು ಅವರನ್ನು ತುಳಿಯುವ ತಂತ್ರಗಳನ್ನು ರೂಪಿಸಿ ಭಾರತದಲ್ಲಿ ಬರಗಾಲ ಬಂದ ಸಂದರ್ಭದಲ್ಲಿ ಉದ್ದೇಶ ಪೂರ್ವಕವಾಗಿ ಆಹಾರ ಖಾತೆ ಕೊಟ್ಟರು. ಆದರೆ ಅವರು ಅಧಿಕಾರ ಸ್ವೀಕ-ರಿಸಿದ ದಿನವೇ ದೇಶಾದ್ಯಂತ ಮಳೆ ಆಯಿತು, ಇದರ ಅರ್ಥ ಅವರು ಒಬ್ಬ ಮಹಾನ್ ವ್ಯಕ್ತಿ.




ಅವರ ಸಾಮಾಜಿಕ ಸೇವೆಗೆ ದೇವರು ಕೂಡ ಸಹಕರಿಸಿದ ಎಂದು ಬಸವರಾಜ ವಾಯ್. ಅರವಳ್ಳಿ ಹೇಳಿದರು.

ಕೃಷಿಯಲ್ಲಿ ಅನೇಕ ಸುಧಾರಣೆ ಮಾಡಿದ್ದಕ್ಕಾಗಿ ಅವರಿಗೆ ಹಸಿರು ಕ್ರಾಂತಿಯ ಹರಿಕಾರ ಎಂದು ಕರೆದರು. ಹೀಗೆ ಕೇಂದ್ರದ ಎಲ್ಲ ಖಾತೆಗಳನ್ನು ಉತ್ತಮವಾಗಿ ಮಾಡಿ ಸೈ ಎನಿಸಿಕೊಂಡರು ಇದರಿಂದ ಬಾಬು ಜಗಜೀವನ್ ರಾಮ್ ಅವರು ಯಾವುದೇ ಖಾತೆ ಕೊಟ್ಟರು ಅದನ್ನು ನಿಭಾಯಿಸಬಲ್ಲರು ಎಂದು ತಿಳಿದುಕೊಂಡರು. ಹಾಗೇ ನಾವ ಎಲ್ಲರೂ ಅವರ ಜೀವನ ಶೈಲಿ ಹಾಗೂ ಅವರ ಜೀವನ ಚರಿತ್ರೆ ಮತ್ತು ಅವರ ವಿಚಾರ ಚಿಂತನೆಗಳನ್ನು ಅಳವಡಿಸಿಕೊಂಡರೆ ಮಾತ್ರ ಇಂತಹ ಹಲವಾರು ಬದಾವಣೆಗಳನ್ನು ಮಾಡಲು ಸಾಧ್ಯವಾಗುತ್ತದೆ ಎಂದು ಕೆ.ವಿ.ಜಿ ಬ್ಯಾಂಕಿನ ನಿವೃತ್ತ ವ್ಯವಸ್ಥಾಪಕರಾದ ಬಸವರಾಜ ವಾಯ್.ಅರವಳ್ಳಿ ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಪಂಚಾಯತ್ ಯೋಜನಾ ಅಧಿಕಾರಿ ಗಂಗಾಧರ ದಿವಟರ ಅವರು, ಬಾಬು ಜಗಜೀವನ್ ರಾಮ್ ಅವರ ಕಾಲದಲ್ಲಿ ಅಸ್ಪೃಶ್ಯತೆ ಅನ್ನೋವುದು ತಾಂಡವಾಡುತ್ತಿತ್ತು ಅಂತಹ ದಿನಗಳಲ್ಲಿ ಅಸ್ಪೃಶ್ಯತೆಯನ್ನು ಹೋಗಲಾಡಿಸಿ ಸಮಾನತೆಗಾಗಿ, ಹೋರಾಡಿದವರು ಮತ್ತು ಇಂತಹ ಅನೇಕ ಮಹಾನ್ ವ್ಯಕ್ತಿಗಳ ಪರಿಶ್ರಮ ಹೋರಾಟದಿಂದ ಸಮಾಜದಲ್ಲಿ ಅವತ್ತಿನ ದಿನಗಳಿಗಿಂತ ಇವತ್ತಿನ ದಿನಗಳು ಬದಲಾವಣೆ ಆಗಿವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಪೊಲೀಸ್ ಆಯುಕ್ತರಾದ ಡಾ. ಎಂ ಬಿ. ಬೋರಲಿಂಗಯ್ಯ, ಅಪರ ಜಿಲ್ಲಾಧಿಕಾರಿಗಳಾದ ಕೆ.ಟಿ. ಶಾಂತಲಾ, ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕರಾದ ಬಿ. ಕಲ್ಲೇಶ್, ಆದಿಜಾಂಬವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಬಸವರಾಜ ಚನ್ನಯನವರ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಾದ ಕುರಿಹುಲಿ, ಬಸವರಾಜ ರಾಯವ್ವಗೋಳ, ಆನಂದ್ ಕುಮಾರ್ ಪಾಟೀಲ್ ಹಾಗೂ ಮತ್ತಿತರ ಗಣ್ಯರು, ಹಿರಿಯರು, ಮಹಿಳೆಯರು ಹಾಗೂ ವಿದ್ಯಾರ್ಥಿ-ವಿದ್ಯಾರ್ಥಿನಿಯರು ಉಪಸ್ಥಿತ-ರಿದ್ದರು.

**ಭಾವಚಿತ್ರದ ಭವ್ಯ ಮೆರವಣಿಗೆ:**

ಇದಕ್ಕೂ ಮುನ್ನ ಡಾ. ಬಾಬು ಜಗಜೀವನ್ ರಾಮ್ ಅವರ ಜನ್ಮ ದಿನಾಚರಣೆಯ ನಿಮಿತ್ಯ ಅವರ ಭಾವಚಿತ್ರದ ಭವ್ಯ ಮೆರವಣಿಗೆಗೆ ಜಿಲ್ಲಾಧಿಕಾರಿಗಳಾದ ನಿತೇಶ್ ಕೆ. ಪಾಟೀಲ್ ಅವರು ಜಿಲ್ಲಾಧಿಕಾರಿ ಕಚೇರಿಯ ಆವರಣದಲ್ಲಿ ಚಾಲನೆ ನೀಡಿದರು. ಪೊಲೀಸ್ ವರಿಷ್ಠಾಧಿಕಾ-ರಿಗಳಾದ ಡಾ. ಸಂಜೀವ್ ಪಾಟೀಲ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ್ ಭೋಯರ್ ಹಾಗೂ ಮತಿತ್ತರ ಗಣ್ಯರು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿಗಳ ಕಚೇರಿಯಿಂದ ಚೆನ್ನಮ್ಮ ವೃತ್ತದ ಮಾರ್ಗವಾಗಿ ಸಂಚರಿಸಿದ ಮೆರವಣಿಗೆಯು ಸಂಗಮೇಶ್ವರ ನಗರದ ಬಾಬು ಜಗಜೀವನ್ ರಾಮ್ ಉದ್ಯಾನವನ ತಲುಪಿತು. ಭವ್ಯ ಮೆರವಣಿಗೆಯಲ್ಲಿ ಗಣ್ಯರು, ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089